ಸಂಪುಟ: 21, ಸಂಚಿಕೆ: 183, ಪುಟಗಳು: 8, ಶುಕ್ರವಾರ, 12 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com


ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶುಕ್ರವಾರ 12, ಏಪ್ರಿಲ್ -2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ, ಶುಕ್ಲ ಪಕ್ಷ,
- ಚತುರ್ಥಿ, ಪಂಚಮಿ,
- ಶುಕ್ರವಾರ, ರೋಹಿಣಿ ನಕ್ಷತ್ರ.
- **ರಾಹುಕಾಲ:** 10:51 ರಿಂದ 12:24
- **ಗುಳಿಕಕಾಲ:** 07:45 ರಿಂದ 09:18
- **ಯಮಗಂಡಕಾಲ:** 3:30 ರಿಂದ 05:03

## ಇಂದಿನಿಂದ ಏಪ್ರಿಲ್ 18ರವರೆಗೆ ಕರ್ನಾಟಕದಲ್ಲಿ ಮಳೆ ಆಗಮನ ಸಾಧ್ಯತೆ



**ಬೆಂಗಳೂರು:** ಕರ್ನಾಟಕದ 25ಕ್ಕೂ ಹೆಚ್ಚಿನ ಜಿಲ್ಲೆಗಳಲ್ಲಿ ಇಂದಿನಿಂದ ಏಪ್ರಿಲ್ 18ರವರೆಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಆದರೆ ಇದೀಗ ವಿಪರೀತ ಸೆಕೆ ಮುಂದುವರೆದಿದೆ.

ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ಹಾಸನ, , ಕೊಡಗು, ಮೈಸೂರು, ಶಿವಮೊಗ್ಗ, ತುಮಕೂರು, ವಿಜಯನಗರದಲ್ಲಿ ಮಳೆಯಾಗಲಿದೆ.

ಕಲಬುರಗಿಯಲ್ಲಿ 40.1 ಡಿಗ್ರಿ ಸೆಲ್ಸಿಯಸ್ ಅತ್ಯಂತ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಸಂಕೇಶ್ವರ, ಹುಕ್ಕೇರಿ, ಯಡವಾಡದಲ್ಲಿ ಮಳೆಯಾಗಿದೆ. ಮುಂದಿನ 2 ದಿನಗಳಲ್ಲಿ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಬಿಸಿ ವಾತಾವರಣವಿರಲಿದೆ. ಮುಂದಿನ ಎರಡು ದಿನ ರಾಜ್ಯದ ವಿವಿಧೆಡೆ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆ ಇದೆ.

ಮುಂದಿನ 48 ಗಂಟೆಗಳಲ್ಲಿ ಬೆಂಗಳೂರಿನಲ್ಲಿ ಕೂಡ ಗುಡುಗು ಸಹಿತ ಮಳೆಯಾಗುವ ನಿರೀಕ್ಷೆ ಇದೆ. ಎಚ್ ಎಎಲ್ ನಲ್ಲಿ 35.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 36.0ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 21.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್ ನಲ್ಲಿ 36.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಜಿಕೆವಿಕೆಯಲ್ಲಿ 36.4ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ. ಪುಟ 2

## ರಾಮೇಶ್ವರಂ ಕೆಫೆ ಸ್ಫೋಟದ ಬಾಂಬರ್ ಪ.ಬಂಗಾಳದಲ್ಲಿ ಎನ್ಐಎ ವಶಕ್ಕೆ






**ಬೆಂಗಳೂರು:** ಬೆಂಗಳೂರಿನ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣದ ಇಬ್ಬರು ಪ್ರಮುಖ ಆರೋಪಿಗಳನ್ನು ರಾಷ್ಟ್ರೀಯ ತನಿಖಾ ದಳ ಬಂಧಿಸಿದೆ. ಪ್ರಮುಖ ಬಾಂಬರ್ ಮುಸ್ಸಾವಿರ್ ಹುಸೇನ್ ಶಾಜಿಬ್ ಮತ್ತು ಸ್ಫೋಟದ ಮಾಸ್ಟರ್ ಮೈಂಡ್ ಅಬ್ದುಲ್ ಮತೀನ್ ತಾಹಾನನ್ನು ಬಂಧಿಸಲಾಗಿದೆ. ಖಚಿತ ಮಾಹಿತಿ ಮತ್ತು ಗುಪ್ತಚರ ಇಲಾಖೆಗೆ ದೊರೆತ ಸುಳಿವಿನ ಆಧಾರದಲ್ಲಿ ಎನ್ ಐಎ ತಂಡವು ಹಲವಾರು ತಿಂಗಳುಗಳಿಂದ ತಲೆಮರೆಸಿಕೊಂಡಿದ್ದ ಭಯೋತ್ಪಾದಕರನ್ನು ಪಶ್ಚಿಮ ಬಂಗಾಳದಲ್ಲಿ ಪತ್ತೆ ಮಾಡಿ ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದೆ ಎಂದು ಮೂಲಗಳು ತಿಳಿಸಿವೆ. ಉಗ್ರರು ಅಸ್ಸಾಂ ಮತ್ತು ಪಶ್ಚಿಮ ಬಂಗಾಳದಲ್ಲಿ ತಲೆಮರೆಸಿಕೊಂಡಿದ್ದಾರೆ ಎಂದು ಹೇಳಲಾಗಿತ್ತು. ಆದರೆ ಈ ಬಗ್ಗೆ ಎನ್ ಐಎ ಅಧಿಕಾರಿಗಳು ಇನ್ನಷ್ಟೇ ಅಧಿಕೃತ ಹೇಳಿಕೆ ನೀಡಬೇಕಿದೆ. ಪುಟ 2

## ಚನ್ನಪಟ್ಟಣದಲ್ಲಿ ಜೆಡಿಎಸ್‌ಗೆ ಬಿಗ್ ಶಾಕ್

# ಮಿಡ್‌ನೈಟ್ ಆಪರೇಷನ್

**ಬೆಂಗಳೂರು:** ಲೋಕಸಭಾ ಚುನಾವಣೆಯ ಕಣ ರಾಜ್ಯದಲ್ಲಿ ರಂಗೇರುತ್ತಿದೆ. ಕ್ಷೇತ್ರಗಳಲ್ಲಿ ತಮ್ಮ ತಮ್ಮ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಲು ನಾಯಕರು ಪಣತೊಟ್ಟಿದ್ದಾರೆ. ಇತ್ತ ಕಾಂಗ್ರೆಸ್ ಗುರುವಾರ ರಾತ್ರಿ ಮಿಡ್ ನೈಟ್ ಆಪರೇಷನ್ ಮೂಲಕ ಬೆಳ್ಳಂಬೆಳಗ್ಗೆ ದಳಪತಿಗಳಿಗೆ ಶಾಕ್ ನೀಡಿದೆ.

ಹೌದು. ತಡರಾತ್ರಿ 11.30ರ ಸುಮಾರಿಗೆ ನಗರದ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ಪಕ್ಷ ಸೇರ್ಪಡೆ ಕಾರ್ಯಕ್ರಮ ನಡೆದಿದೆ. ಅಕ್ಕೂರ್ ದೊಡ್ಡಿ ಶಿವಣ್ಣ ಸೇರಿ ಚನ್ನಪಟ್ಟಣದ 300ಕ್ಕೂ ಹೆಚ್ಚು ಜೆಡಿಎಸ್ ಕಾರ್ಯಕರ್ತರು ಕಾಂಗ್ರೆಸ್‌ಗೆ ಸೇರ್ಪಡೆಗೊಂಡಿದ್ದಾರೆ. ಈ ವೇಳೆ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ ಉಪಸ್ಥಿತರಿದ್ದರು. ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರೇ ಕಾರ್ಯಕರ್ತರನ್ನು ತಮ್ಮ ಪಕ್ಷಕ್ಕೆ ಸೇರಿಸಿಕೊಳ್ಳುವ ಮೂಲಕ ದೋಸ್ತಿ ನಾಯಕರಿಗೆ ಶಾಕ್ ಕೊಟ್ಟಿದ್ದಾರೆ.

ಬಳಿಕ ಮಾತನಾಡಿದ ಡಿಕೆಶಿ, ಚನ್ನಪಟ್ಟಣ ಭಾಗದ 300 ಕ್ಕೂ ಹೆಚ್ಚು ಜೆಡಿಎಸ್ ಕಾರ್ಯಕರ್ತರು ಇಂದು ಕಾಂಗ್ರೆಸ್ ಗೆ ಸೇರ್ಪಡೆಯಾಗಿದ್ದಾರೆ. ಈಗಾಗಲೇ ಮಾಗಡಿ, ರಾಮನಗರ, ಚನ್ನಪಟ್ಟಣ ಭಾಗದ 4 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಸೇರಿಕೊಂಡಿದ್ದಾರೆ. ಬಹುತೇಕ ಕುಮಾರಸ್ವಾಮಿ ಅವರ ಆಪ್ತರೇ ಕಾಂಗ್ರೆಸ್ ಮೆಚ್ಚಿ ಬರುತ್ತಿದ್ದಾರೆ ಎಂದು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಡಿಕೆಶಿ ಕರೆ: ಕುಮಾರಸ್ವಾಮಿ ಮಂಡ್ಯಕ್ಕೆ ಹೊರಟು ಹೋಗಿದ್ದಾರೆ. ಮಂಡ್ಯದಲ್ಲಿ ಕುಮಾರಸ್ವಾಮಿ ಗೆಲ್ಲಲ್ಲ. ಜೆಡಿಎಸ್‌ಗಾಗಿ ನಿಮ್ಮ ಸಮಯ ಹಾಳು ಮಾಡಿಕೊಳ್ಳಬೇಡಿ. ಎಲ್ಲರೂ ನಮ್ಮ ಜೊತೆ ಬನ್ನಿ, ನಿಮ್ಮ ಜೊತೆ ನಾನು ಇರ್ತೇನೆ ಎಂದು ಇದೇ ವೇಳೆ ಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರಿಗೆ ಡಿಕೆಶಿ ಕರೆ ಕೊಟ್ಟಿದ್ದಾರೆ.



## I.N.D.I.A ಒಕ್ಕೂಟ ಅಧಿಕಾರಕ್ಕೆ ಬಂದ್ರೆ ಮೋದಿ ಜೈಲಿಗೆ





**ಪಾಟ್ನಾ:** I.N.D.I.A ಒಕ್ಕೂಟ ಅಧಿಕಾರಕ್ಕೆ ಬಂದ ಬಳಿಕ ಕೇಂದ್ರೀಯ ತನಿಖಾ ಏಜೆನ್ಸಿಗಳ ದುರ್ಬಳಕೆ ಹಾಗೂ ಚುನಾವಣಾ ಬಾಂಡ್ ಮೂಲಕ ಅಕ್ರಮ ಹಣ ಸಂಗ್ರಹಿಸಿದ ಕಾರಣಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರನ್ನ ಜೈಲಿಗೆ ಹಾಕಲಾಗುತ್ತದೆ ಎಂದು ಆರ್‌ಜೆಡಿ ಮುಖ್ಯಸ್ಥ ಲಾಲು ಯಾದವ್ ಅವರ ಪುತ್ರಿ ಮಿಸಾ ಭಾರತಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಪಾಟಲಿಪುತ್ರ ಕ್ಷೇತ್ರದ ಆರ್‌ಜೆಡಿ ಅಭ್ಯರ್ಥಿ ಮಿಸಾ ಭಾರತಿ ಪಾಟ್ನಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ಈ ವೇಳೆ, ಪ್ರಧಾನಿ ಮೋದಿ ಬಿಹಾರಕ್ಕೆ ಬಂದಾಗಲೆಲ್ಲಾ ಅವರು ನಮ್ಮ ಕುಟುಂಬದ ಮೇಲೆ ಭ್ರಷ್ಟಾಚಾರದ ಆರೋಪ ಮಾಡುತ್ತಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಭ್ರಷ್ಟಾಚಾರ ಎಷ್ಟು ದೊಡ್ಡದು ಎಂದು ನಿಮಗೆ ತಿಳಿದಿದೆಯೇ ಬಿಜೆಪಿಯು ಕೇಂದ್ರೀಯ ತನಿಖಾ ಸಂಸ್ಥೆಗಳ ದುರ್ಬಳಕೆ ಮಾಡಿಕೊಂಡಿದೆ. ಚುನಾವಣಾ ಬಾಂಡ್‌ಗಳ ಮೂಲಕ ಬಿಜೆಪಿ ನಿಜವಾಗಿಯೂ ಭ್ರಷ್ಟಾಚಾರ ಮಾಡಿದೆ. ಹಾಗಾಗಿ ದೇಶದ ಜನ ಇಂಡಿಯಾ ಮೈತ್ರಿ ಕೂಟಕ್ಕೆ ಅಧಿಕಾರದ ಅವಕಾಶ ಮಾಡಿಕೊಟ್ಟರೆ, ಪ್ರಧಾನಿಯಿಂದ ಹಿಡಿದು ಎಲ್ಲ ಬಿಜೆಪಿ ನಾಯಕರೂ ಜೈಲು ಪಾಲಾಗುತ್ತಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

**ಜೆಪಿ ನಡ್ಡಾ ಕೌಂಟರ್ ಅಟ್ಯಾಕ್:** ಮಿಸಾ ಭಾರತಿ ಹೇಳಿಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಬಿಜೆಪಿ ಮುಖ್ಯಸ್ಥ ಜೆಪಿ ನಡ್ಡಾ, ಭ್ರಷ್ಟಾಚಾರದ ಆರೋಪದ ಮೇಲೆ ತನಿಖೆ ಎದುರಿಸುತ್ತಿರುವವರು ಮತ್ತು ಜಾಮೀನಿನ ಮೇಲೆ ಹೊರಗಿರುವವರು ಲಾಲು ಕುಟುಂಬದವರು. ಪುಟ 2

## ಸಂಕ್ಷಿಪ್ತ ಸುದ್ದಿ

### ತಾಯಿಯ ಸ್ನೇಹಿತನಿಂದಲೇ ಬಾಲಕಿ ಮೇಲೆ ಅತ್ಯಾಚಾರ



**ಗಾಜಿಯಾಬಾದ್:** ಅಪ್ರಾಪ್ತ ಬಾಲಕಿಯೊಬ್ಬಳ ಮೇಲೆ ಆಕೆಯ ತಾಯಿಯ ಸ್ನೇಹಿತನೇ ಅತ್ಯಾಚಾರವೆಸಗಿರುವ ಘಟನೆ ಉತ್ತರ ಪ್ರದೇಶದ ಗಾಜಿಯಾಬಾದ್ ನಲ್ಲಿ ನಡೆದಿದೆ. ಆದರೆ ಈ ವಿಚಾರ ಹೊರಗೆ ಬರಬಾರದೆಂದು ತಾಯಿ ತನ್ನ 10 ವರ್ಷದ ಮಗಳಿಗೆ ಚಿತ್ರಹಿಂಸೆ ನೀಡಿ, ಮತ್ತೆ ಆತನ ಬಳಿಯೇ ಕಳುಹಿಸಿಕೊಡಲು ಯತ್ನಿಸಿದ್ದಾಳೆ ಮತ್ತು ಆಕೆಯನ್ನು ವೇಶ್ಯಾವಾಟಿಕೆ ದಂಧೆಗೆ ತಳ್ಳಲು ಪ್ರಯತ್ನಿಸಿದ್ದಾಳೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪುಟ 2

### ವಿಮಾನ ನಿಲ್ದಾಣದಲ್ಲಿ 58 ಲಕ್ಷ ರೂ. ಮೌಲ್ಯದ ಬಂಗಾರ ವಶ



**ಮಂಗಳೂರು:** ದಮ್ಮಾಮ್‌ನಿಂದ ಆಗಮಿಸುತ್ತಿದ್ದ ಪ್ರಯಾಣಿಕರೊಬ್ಬರಿಂದ 58,78,880 ರೂಪಾಯಿ ಮೌಲ್ಯದ 812 ಗ್ರಾಂ ಚಿನ್ನವನ್ನು ಕಸ್ಟಮ್ಸ್ ಅಧಿಕಾರಿಗಳು ಏಪ್ರಿಲ್ 11 ರ ಗುರುವಾರದಂದು ಮಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಶಪಡಿಸಿಕೊಂಡಿದ್ದಾರೆ. ಮೆಟಲ್ ಡಿಟೆಕ್ಟರ್ ಪರೀಕ್ಷೆಯ ಸಮಯದಲ್ಲಿ, ಪ್ರಯಾಣಿಕರ ಸೊಂಟದ ಬಳಿ ಬೀಪ್ ಶಬ್ದ ಹೊರಹೊಮ್ಮಿದೆ. ನಂತರ ಮತ್ತಷ್ಟು ತಪಾಸಣೆಗೆ ಒಳಪಡಿಸಲಾಯಿತು. ಈ ದೇಳೆ ಪ್ರಯಾಣಿಕನ ಗುದನಾಳದಲ್ಲಿ ಮೂರು ಸುತ್ತಿನ ಆಕಾರದ ವಸ್ತುಗಳೊಳಗೆ ಪೇಸ್ಟ್ ರೂಪದಲ್ಲಿ ಚಿನ್ನವನ್ನು ಬಚ್ಚಿಟ್ಟಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆ. ಪುಟ 2

## ಮತದಾರರ ಸೆಳೆಯಲು ನಾನಾ ವೇಷ ತರಕಾರಿ ವ್ಯಾಪಾರಿಯಾದ ಅಭ್ಯರ್ಥಿ

**ನವದೆಹಲಿ:** ಮುಂಬರಲಿರುವ ಲೋಕಸಭಾ ಚುನಾವಣೆಗೆ ಅಭ್ಯರ್ಥಿಗಳು ಮತದಾರರನ್ನು ಸೆಳೆಯಲು ಟೊಂಕ ಕಟ್ಟಿ ನಿಂತಿದ್ದಾರೆ. ಓರ್ವ ಅಭ್ಯರ್ಥಿ ಅಂದು ಕ್ಷೌರಿಕನಾಗಿ ಕೆಲಸ ಮಾಡಿದರೆ, ಮತ್ತೋರ್ವ ಅಭ್ಯರ್ಥಿ ಚಪ್ಪಲಿ ಹಾರ ಹಾಕಿಕೊಂಡು ಪ್ರಚಾರ ಮಾಡಿದ್ದಾರೆ ಇದೀಗ ತಿರುಚಿರಾಪಳ್ಳಿಯ ಸ್ವತಂತ್ರ ಅಭ್ಯರ್ಥಿ ಎಸ್ ದಾಮೋದರನ್ ತರಕಾರಿ ವ್ಯಾಪಾರಿಯಂತೆ ಕಾಣಿಸಿಕೊಂಡಿದ್ದಾರೆ.

ಒಟ್ಟಿನಲ್ಲಿ ಮತದಾರರ ಗಮನ ಸೆಳೆಯಲು ಪ್ರತಿಯೊಬ್ಬರು ನಾನಾ ಕಸರತ್ತು ಮಾಡುತ್ತಿದ್ದಾರೆ. ದಾಮೋದರನ್ ಪದ್ಮಶ್ರೀ ಪುರಸ್ಕೃತರೂ ಹೌದು.

ನೈರ್ಮಲ್ಯ ಕೇಂದ್ರದಲ್ಲಿ ಸಹಾಯಕ ಸೇವಾ ಸ್ವಯಂ ಸೇವಕನಾಗಿ 40 ವರ್ಷಗಳೂ ಹೆಚ್ಚಿನ ಕಾಲ ಕೆಲಸ ಮಾಡಿರುವುದಾಗಿ ಹೇಳಿಕೊಂಡಿದ್ದಾರೆ. ಪುಟ 2



## ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೇ ನಾನೇ ಸಿಎಂ ಆಗುತ್ತೇನೆ



**ಬೆಳಗಾವಿ :** ರಾಜ್ಯದಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬಂದರೇ ನಾನೇ ಮುಖ್ಯಮಂತ್ರಿ ಆಗುತ್ತೇನೆ ಎಂದು ವಿಜಯಪುರದ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು. ಗುರುವಾರ (ಏ.11) ರಂದು ಅಥಣಿಯಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, ಮುಂದಿನ ಬಾರಿ ಬಿಜೆಪಿ ಅಧಿಕಾರಕ್ಕೆ ಬಂದರೇ ಉತ್ತರ ಕರ್ನಾಟಕದ, ನಾನೇ ಮುಖ್ಯಮಂತ್ರಿಯಾಗುತ್ತೇನೆ. ಜಾತಿ ಜಾತಿ ಅಂತ ನೋಡದೆ, ದೇಶ ಉಳಿಸುವುದಕ್ಕಾಗಿ ಎಲ್ಲರೂ ವೋಟ್ ಹಾಕಿ ಎಂದರು.

ಜಾರಕಿಹೊಳಿ ಅವರ ಕಾಲಿಗೆ ನಮಸ್ಕರಿಸಿ, ಸಾಹುಕಾರ್ ಸಾಹುಕಾರ್ ಯಾಕೆ ಅನ್ನುತ್ತೀರಿ. ಅವರ ಮನೆಯ ತೊಟ್ಟಿಲನಲ್ಲಿರುವ ಕಂದಮ್ಮಗಳಿಗೂ ನಮಸ್ಕರಿಸುತ್ತೀರಿ. ಯಾಕೆ ನಿಮಗೆ ಸ್ವಾಭಿಮಾನ ಇಲ್ಲವೇ ನಿಮ್ಮ ಜಮೀನಿನಲ್ಲಿ ಕಬ್ಬು ಬೆಳೆಯುತ್ತೀರಾ ಅಥವಾ ಅವರ ಜಮೀನಿನಲ್ಲಿ ಬೆಳೆಯುತ್ತೀರಾ ಯಾರಿಗೂ ನಮಸ್ಕರಿಸಬೇಡಿ, ಸ್ವಾವಲಂಭಿಗಳಾಗಿ. ಪ್ರಧಾನಿ ನರೇಂದ್ರ ಮೋದಿಯವರೇ ಕಾಲಿಗೆ ನಮಸ್ಕಾರ ಮಾಡಿಸಿಕೊಳ್ಳುವುದಿಲ್ಲ. ಅಂದಮೇಲೆ ಇವರ ಕಾಲಿಗೆ ಏಕೆ ನಮಸ್ಕಾರ ಮಾಡುತ್ತೀರಿ ಎಂದು ಗುಡುಗಿದರು.

ನಾನು ಯಾರಿಗೂ ಅಪ್ಪಾಜಿ ಅಪ್ಪಾಜಿ ಅಂತ ಕಾಲಿಗೆ ನಮಸ್ಕರಿಸುವುದಿಲ್ಲ. ದೇವರು ನನಗೆ ಎಲ್ಲವನ್ನು ಕೊಟ್ಟಿದ್ದಾನೆ. ನಾನು ಯಾರಿಗೂ ವಂಚನೆ ಮಾಡುವುದಿಲ್ಲ. ರೈತರು ಬರಗಾಲ ಬರಲಿ ಅಂತ ಬಯಸುತ್ತಾರೆ, ಐದು ಲಕ್ಷದ ಆಸೆಗೆ ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಅಂತ ಹೇಳಿದರು. ವಿಧಾನಸೌಧದಲ್ಲಿ ಇದೇ ವಿಚಾರದಲ್ಲಿ ನನಗೂ ಅವರಿಗೂ ಜಗಳ ಆಯ್ತು. ನಾನು ಹಾಗೇ ಅಂದಿಲ್ಲ ಅಂದರು. ನಿನ್ನ ಮೇಲೆ ಕೇಸ್ ಹಾಕುತ್ತೇನೆ ಅಂದರು. ಪುಟ 2

## ಪ್ರಚಾರಕ್ಕೆ ತೆರಳಿದವರ ಮೇಲಿನ ಹಲ್ಲೆ ಖಂಡಿಸಿದ ಡಾ. ಸಿಎನ್ ಮಂಜುನಾಥ್ ಹತಾಶೆಯಿಂದ ಹೀಗೆ ಮಾಡುತ್ತಿದ್ದಾರೆ



**ರಾಮನಗರ:** ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ತಮ್ಮ ಪರ ಪ್ರಚಾರಕ್ಕೆ ತೆರಳಿದ್ದ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರ ಮೇಲೆ ನಡೆದಿರುವ ಹಲ್ಲೆಯನ್ನು ಬಿಜೆಪಿ ಅಭ್ಯರ್ಥಿ ಡಾ. ಸಿಎನ್ ಮಂಜುನಾಥ್ ಖಂಡಿಸಿದ್ದಾರೆ. ಈ ಕುರಿತು ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕಿನ ಹೊಂಗನೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಇದು ನಮ್ಮ ಸಂಸ್ಕೃತಿ ಅಲ್ಲ. ಚುನಾವಣೆಯನ್ನು ಏನಿದ್ದರೂ ನಮ್ಮ ತತ್ವ, ಸಿದ್ಧಾಂತದ ಮೇಲೆ ಎದುರಿಸಬೇಕೇ ವಿನಹ ಈ ರೀತಿಯ ಕೃತ್ಯಗಳನ್ನು ಸಗಬಾರದು. ಚುನಾವಣೆ ವಿರುದ್ಧ ದಿಕ್ಕಿನಿಂದ ಸಾಗುತ್ತಿದೆ ಎಂಬುದು ಅರಿವಾಗಿರಬೇಕು. ಹೀಗಾಗಿ, ಹತಾಶೆಯಿಂದ ಈ ರೀತಿ ಮಾಡಿಸುತ್ತಿದ್ದಾರೆ ಎಂದು ಹೇಳಿದರು.

ಚುನಾವಣೆಯನ್ನು ಆರೋಗ್ಯಕರವಾಗಿ ಎದುರಿಸಬೇಕು. ಅದರ ಬದಲು ಈ ರೀತಿ ಅಡ್ಡದಾರಿ ಹಿಡಿಯಬಾರದು. ಪ್ರಚಾರಕ್ಕೆ ತೆರಳಿದ್ದವರ ಮೇಲೆ ಹಲ್ಲೆ ನಡೆಸಿರುವ ವಿಚಾರವಾಗಿ ಈಗಾಗಲೇ ಡಿಐಜಿ ಅವರ ಜೊತೆ ಚರ್ಚಿಸಿದ್ದೇನೆ. ಪುಟ 2

## ಈಗಷ್ಟೇ 18 ಆದವರಿಗೆ ಚುನಾವಣಾ ಆಯೋಗದಿಂದ ಬರ್ತ್ ಡೇ ಗಿಫ್ಟ್

**ಬೆಂಗಳೂರು:** ಈ ವರ್ಷ 18 ತುಂಬಿದ 70,000 ಮಂದಿ ಲೋಕಸಭೆ ಚುವಾಣೆಯಲ್ಲಿ ಮತದಾನ ಮಾಡಲಿದ್ದಾರೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಕೊನೇ ಕ್ಷಣದ ಪ್ರಯತ್ನದಲ್ಲಿ ಇವರ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲಾಗಿದೆ. ಮುಂದಿನ ಕೆಲವೇ ದಿನಗಳಲ್ಲಿ 2 ಸಾವಿರಕ್ಕೂ ಹೆಚ್ಚು ಯುವ ಮತದಾರರು ಪಟ್ಟಿಗೆ ಸೇರ್ಪಡೆಯಾಗುವ ನಿರೀಕ್ಷೆ ಇದೆ ಎಂದು ಚುನಾವಣಾ ಆಯೋಗ ಹೇಳಿದೆ. ಈ ಮೂಲಕ ಈಗಷ್ಟೇ 18 ವರ್ಷ ಆದವರಿಗೂ ಚುನಾವಣಾ ಆಯೋಗ ಬರ್ತ್ ಡೇ ಗಿಫ್ಟ್ ನೀಡುತ್ತಿದೆ.

2006 ರ ಜನವರಿ 1 ಮತ್ತು ಮಾರ್ಚ್ 31 ರ ನಡುವೆ ಜನಿಸಿದವರನ್ನು ಮುಂದಿನ ಕೆಲ ದಿನಗಳಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗುವುದು ಎಂದು ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿ ಮನೋಜ್ ಕುಮಾರ್ ಮೀನಾ ತಿಳಿಸಿರುವುದಾಗಿ 'ಟೈಮ್ಸ್ ಆಫ್ ಇಂಡಿಯಾ' ವರದಿ ಮಾಡಿದೆ. ಒಂದು ವೇಳೆ, ಈಗಷ್ಟೇ 18 ವರ್ಷ ಆದವರಿಗೆ ಈಗ ಚುನಾವಣೆಯಲ್ಲಿ ಮತದಾನ ಮಾಡುವ ಅವಕಾಶ ನೀಡದಿದ್ದರೆ ಅವರು ಮೊದಲ ಬಾರಿಗೆ ಮತ ಚಲಾಯಿಸಲು ಮುಂದಿನ ಚುನಾವಣೆಯವರೆಗೆ ಕಾಯಬೇಕಾಗುತ್ತದೆ. ಹೀಗಾಗಿ 'ಫಾರ್ಮ್ 6' ರ ನಿಬಂಧನೆಯ ಅಡಿಯಲ್ಲಿ ಅವಕಾಶ ನೀಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.



**ಕಾನೂನಿನಲ್ಲಿ ಏನಿದೆ :** ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿದ ನಂತರವೂ ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಸೇರಿಸಲು 'ಫಾರ್ಮ್ 6'ರ ಅಡಿಯಲ್ಲಿ ಮುಂಗಡ ಅರ್ಜಿ ಸಲ್ಲಿಸುವ ಅವಕಾಶವಿದೆ. ಪುಟ 2

## ಕಾವೇರಿ ನೀರಿನ ಸಂಪರ್ಕಕ್ಕೆ 2.3 ಕೋಟಿ ರೂ. ಕೇಳಿದ ಜಲಮಂಡಳಿ ಚುನಾವಣಾ ಬಹಿಷ್ಕಾರ

**ಬೆಂಗಳೂರು:** ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಯಾವುದೇ ಮೂಲಸೌಕರ್ಯ ಶುಲ್ಕವನ್ನು ವಿಧಿಸದೆ ಅಪಾರ್ಟ್ ಮೆಂಟ್ ಗಳಿಗೆ ಮತ್ತು ಬಡಾವಣೆಗಳಿಗೆ ಕಾವೇರಿ ನೀರು ಸಂಪರ್ಕವನ್ನು ನೀಡುತ್ತಿದೆ. ಆದರೆ, ಜೆಪಿ ನಗರ 8 ನೇ ಹಂತದ ಪಿಎಚ್‌ಎಸ್‌ನ ರಾಯಲ್ ಲೇಕ್‌ಫ್ರಂಟ್ ನಿವಾಸಿಗಳಿಗೆ ಕಾವೇರಿ ನೀರು ಸಂಪರ್ಕ ಒದಗಿಸಲು 2.3 ಕೋಟಿ ರೂ.ಗೆ ಬೇಡಿಕೆ ಇಟ್ಟಿದೆ ಎಂಬ ಆರೋಪ ಕೇಳಿಬಂದಿದೆ. ಹೀಗಾಗಿ ರಾಯಲ್ ಲೇಕ್‌ಫ್ರಂಟ್ ಅಪಾರ್ಟ್ ಮೆಂಟ್ ನಿವಾಸಿಗಳು ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಮತದಾನ ಮಾಡದಿರಲು ನಿರ್ಧರಿಸಿದ್ದಾರೆ. ಈ ಕುರಿತು ಚುನಾವಣಾ ಅಧಿಕಾರಿಗಳಿಗೆ ಪತ್ರವನ್ನೂ ಬರೆದಿದ್ದಾರೆ.

ಏಪ್ರಿಲ್ 10 ರಂದು ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿರುವ ರಾಯಲ್ ಲೇಕ್‌ಫ್ರಂಟ್ ರೆಸಿಡೆನ್ಸಿ ನಿವಾಸಿಗಳು ಮತ್ತು ಸೈಟ್ ಮಾಲೀಕರ ಕ್ಷೇಮಾಭಿವೃದ್ಧಿ ಸಂಘವು ಮುಂಬರುವ ಲೋಕಸಭಾ ಚುನಾವಣೆಯನ್ನು ಬಹಿಷ್ಕರಿಸುವುದಾಗಿ ಎಚ್ಚರಿಕೆ ನೀಡಿದೆ. ಆ ಮೂಲಕ ಜಲಮಂಡಳಿಯ ವಿರುದ್ಧ ಪ್ರತಿಭಟನೆಯನ್ನು ದಾಖಲಿಸಿದೆ.




ಜಲ ಮಂಡಳಿಯು ರಾಯಲ್ ಲೇಕ್‌ಫ್ರಂಟ್ ರೆಸಿಡೆನ್ಸಿಯ ಸುತ್ತಮುತ್ತಲಿನ ಸ್ಥಳಗಳನ್ನು ಒಳಗೊಂಡಂತೆ ರೆವೆನ್ಯೂ ಮತ್ತು 'ಬಿ-ಖಾತಾ' ಲೇಔಟ್‌ಗಳ ನಿವಾಸಿಗಳಿಗೆ ಯಾವುದೇ ಮೂಲಸೌಕರ್ಯ ಶುಲ್ಕಗಳನ್ನು ವಿಧಿಸದೆಯೇ ಸಂಪರ್ಕ ಒದಗಿಸುತ್ತದೆ. ಪುಟ 2

## ರಾಜ್ಯದ ಬಿಜೆಪಿ ಅಭ್ಯರ್ಥಿಗಳ ಪರ ಚುನಾವಣೆ ಪ್ರಚಾರಕ್ಕೆ ಪವರ್ ಸ್ಟಾರ್ ಎಂಟ್ರಿ

**ಆಂಧ್ರ:** ಲೋಕಸಭಾ ಚುನಾವಣೆ ಅಖಾಡ ದಿನದಿಂದ ದಿನಕ್ಕೆ ರಂಗೇರುತ್ತಿದೆ. ಸ್ಟಾರ್ ಪ್ರಚಾರಕರ್ತರು ತಮ್ಮ ಪಕ್ಷ ಮತ್ತು ಅಭ್ಯರ್ಥಿಗಳ ಪರ ಅಬ್ಬರದ ಪ್ರಚಾರವನ್ನು ಮಾಡುತ್ತಿದ್ದಾರೆ. ಈ ನಡುವೆ ತೆಲುಗಿನ ಖ್ಯಾತ ನಟ, ರಾಜಕಾರಣಿ ಪವರ್ ಸ್ಟಾರ್ ಪವನ್ ಕಲ್ಯಾಣ್ ಬಳ್ಳಾರಿಗೆ ಬರಲಿದ್ದಾರೆ. ಗಡಿನಾಡಿನಲ್ಲಿ ಅವರು ಪವರ್ ಪ್ರಚಾರ ಮಾಡಲಿದ್ದಾರೆ. ಆಂಧ್ರದ ಗಡಿ ಭಾಗದ ಕ್ಷೇತ್ರಗಳ ಮತದಾರರನ್ನು ಸೆಳೆಯುವುದಕ್ಕಾಗಿ ಬಿಜೆಪಿ ಪಕ್ಷ ಪವನ್ ಕಲ್ಯಾಣ್ ಅವರನ್ನು ಬಳಸಿಕೊಳ್ಳುತ್ತಿದೆ. ಕರ್ನಾಟಕ ರಾಜ್ಯದ ಬಿಜೆಪಿ ಅಭ್ಯರ್ಥಿಗಳ ಪರ ಪವನ್ ಪ್ರಚಾರ ಮಾಡಲಿದ್ದಾರೆ. ಏಪ್ರಿಲ್ 17ರಂದು ಅವರು ಕರ್ನಾಟಕದ ಗಡಿ ಭಾಗದ ಜನರ ಮುಂದೆ ಇರಲಿದ್ದಾರೆ. ಏಪ್ರಿಲ್ 17ರಂದು ರಾಯಚೂರು, ಬಳ್ಳಾರಿ, ಚಿಕ್ಕಬಳ್ಳಾಪುರ ಬಳಿಕ ಬೆಂಗಳೂರಿನಲ್ಲಿ ರೋಡ್ ಷೋ ಆಯೋಜನೆ ಆಗಿದ್ದು, ಬಳ್ಳಾರಿಯ ರಾಯಲ್ ವೃತ್ತದಿಂದ ಎಚ್‌ಎಲ್‌ಸಿ ವೃತ್ತದವರೆಗೆ ಶ್ರೀರಾಮುಲು ಪರ ಬಳ್ಳಾರಿಯಲ್ಲಿ ಪವನ್ ಮತಯಾಚನೆ ಮಾಡಲಿದ್ದಾರೆ.



## ಸಾಹಿತಿ ಕೋಟಿಗಾನಹಳ್ಳಿ ರಾಮಯ್ಯ ಮೇಲೆ ಹಲ್ಲೆ

**ಕೋಲಾರ:** ದೇವಾಲಯದ ಬಳಿ ಮೈಕ್ ಸೆಟ್ ಜೋರು ಶಬ್ದವನ್ನು ಪ್ರಶ್ನೆ ಮಾಡಿದ ಹಿರಿಯ ಸಾಹಿತಿ, ಬರಹಗಾರ, ಪತ್ರಕರ್ತ ಕೋಟಿಗಾನಹಳ್ಳಿ ರಾಮಯ್ಯ ಮೇಲೆ ಹಲ್ಲೆ ಮಾಡಲಾಗಿದೆ. ಕೋಲಾರ ತಾಲೂಕು ಪಾಪರಾಜನಹಳ್ಳಿ ಗ್ರಾಮದಲ್ಲಿ ಇಂದು ಮುಂಜಾನೆ ಈ ಘಟನೆ ನಡೆದಿದೆ. ಮುನೇಶ್ವರ ಸ್ವಾಮಿ ದೇವಾಲಯದ ಬಳಿ ಮೈಕ್ ಶಬ್ದ ಜೋರಾಗಿ ಹಾಕಲಾಗಿತ್ತು. ಇದನ್ನು ಕಡಿಮೆ ಮಾಡುವಂತೆ ಕೇಳಿದ್ದಕ್ಕೆ ಹಲ್ಲೆ ಮಾಡಲಾಗಿದೆ.



ಗ್ರಾಮ ಪಂಚಾಯಿತಿ ಸದಸ್ಯ ಮಂಜುನಾಥ್ ಸೇರಿದಂತೆ ಹಲವರು ಕೋಟಿಗಾನಹಳ್ಳಿ ರಾಮಯ್ಯ ಹಾಗೂ ಅವರ ಜೊತೆಗಿದ್ದ ಮಗನ ಮೇಲೂ ಹಲ್ಲೆ ಮಾಡಿದ್ದಾರೆ. ಹಲ್ಲೆಗೊಳಗಾದ ಕೋಟಿಗಾನಹಳ್ಳಿ ರಾಮಯ್ಯ ಅವರನ್ನು ಕೋಲಾರ ಜಿಲ್ಲಾಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆಯಿಂದ ಕಣ್ಣಿಗೆ ಗಾಯವಾಗಿದ್ದು, ವೃದ್ಧರು ಆಸ್ಪತ್ರೆಗೆ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿದ್ದಾರೆ. ಆಸ್ಪತ್ರೆಗೆ ಎಸ್ಪಿ ನಾರಾಯಣ ಅವರು ಭೇಟಿ ನೀಡಿ ಆರೋಗ್ಯ ವಿಚಾರಣೆ ಮಾಡಿದರಲ್ಲದೆ, ಆರೋಪಿಗಳ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ಈ ಸಂಬಂಧ ಕೋಲಾರ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಬ್ರಹ್ಮಾವರದಲ್ಲಿ ಮಹಿಳೆ ನಾಪತ್ತೆ

ಬ್ರಹ್ಮಾವರ ತಾಲೂಕಿನ ಬಾರ್ಕೂರಿನ ನಿವಾಸಿ ಸಲ್ಮಾಭಾನು (38) ಮಾರ್ಚ್ 10ರಿಂದ ನಾಪತ್ತೆಯಾಗಿದ್ದಾರೆ. ಮಧ್ಯಮ ಮೈಕಟ್ಟು ಹೊಂದಿರುವ ಆಕೆ 122 ಸೆಂ.ಮೀ ಎತ್ತರವಿದ್ದಾರೆ. ಅವರು ಕನ್ನಡ, ಹಿಂದಿ ಮತ್ತು ಉರ್ದು ಭಾಷೆಗಳಲ್ಲಿ ನಿರರ್ಗಳವಾಗಿ ಮಾತನಾಡುತ್ತಾರೆ. ಈಕೆಯ ಬಗ್ಗೆ ಮಾಹಿತಿ ಇದ್ದಲ್ಲಿ ಉಡುಪಿ ನಗರ ಪೊಲೀಸ್ ಠಾಣೆಯನ್ನು ಸಂಪರ್ಕಿಸುವಂತೆ ಉಡುಪಿ ನಗರ ಪೊಲೀಸ್ ಠಾಣೆಯ ಅಧಿಕಾರಿಗಳು ಕೋರಿದ್ದಾರೆ.

# ಕಾಂಗ್ರೆಸ್‌ಗೆ ಕೊಡುವ ಒಂದೊಂದು ಮತ ದಿವಾಳಿತನ, ಭ್ರಷ್ಟಾಚಾರಕ್ಕೆ ಕೊಡುವ ಮತ

**ಬೆಂಗಳೂರು:** ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಕೊಡುವ ಒಂದೊಂದು ಮತವೂ ಆರ್ಥಿಕ ದಿವಾಳಿತನ, ಭ್ರಷ್ಟಾಚಾರ, ದೇಶದ ಅಭದ್ರತೆಗೆ ಕೊಡುವ ಮತ ಆಗುತ್ತೆ ಎಂದು ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಕಿಡಿ ಕಾರಿದ್ದಾರೆ.

ಮಲ್ಲೇಶ್ವರಂನಲ್ಲಿರುವ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಲೋಕಸಭೆ ಚುನಾವಣೆ ನಡೆಯುತ್ತಿದೆ ಅನ್ನೋದನ್ನ ಕಾಂಗ್ರೆಸ್ ನಾಯಕರು ಮರೆತುಹೋಗಿದ್ದಾರೆ ಅನ್ನಿಸ್ತಿದೆ. ರಾಹುಲ್ ನಾಯಕತ್ವ ವಿಫಲವಾಗಿದೆ. ರಾಹುಲ್ ಗಾಂಧಿ ನಾಯಕತ್ವದಲ್ಲಿ ವಿಶ್ವಾಸ ಇಲ್ಲ, ಹಾಗಾಗಿ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಿ ಜನರ ಹಾದಿ ತಪ್ಪಿಸುತ್ತಿದ್ದಾರೆ. ಆದ್ರೆ ನಾವು ಮೋದಿ ಅವರ ಅಭಿವೃದ್ಧಿ ಕಾರ್ಯಗಳ ಮೇಲೆ ಚುನಾವಣೆ ಎದುರಿಸುತ್ತಿದ್ದೇವೆ ಎಂದು ಹೇಳಿದ್ದಾರೆ.

ಸಿದ್ದರಾಮಯ್ಯ ಸರ್ಕಾರ ಕಳೆದ 10 ತಿಂಗಳಲ್ಲಿ ಎಷ್ಟು ಉದ್ಯೋಗ ಸೃಷ್ಟಿ ಮಾಡಿದೆ ಹೇಳಲಿ ಪ್ರಿಯಾಂಕ್ ಖರ್ಗೆ, ಎಂ.ಬಿ ಪಾಟೀಲ್ ಎಕ್ಸ್ ಖಾತೆಯಲ್ಲಿ ಮಾತ್ರ ಉದ್ಯೋಗ ಸೃಷ್ಟಿ ಆಗ್ತಿದೆ ಅಷ್ಟೇ. ಒಂದೇ ಒಂದು ಉದ್ಯೋಗ ಕೊಟ್ಟಿಲ್ಲ ಎಂದು ಕಿಡಿ ಕಾರಿದ್ದಾರೆ.

ಮೋದಿ ಅವರಿಗೆ 2 ಕೋಟಿ ಉದ್ಯೋಗ ಎಲ್ಲಿ ಎಂದು ಕೇಳ್ತಿದ್ದಾರೆ ದೇಶದಲ್ಲಿ 7 ಕೋಟಿ ಹೊಸ



ಉದ್ಯೋಗ ಭವಿಷ್ಯ ನಿಧಿ ಅಡಿ ಸೃಷ್ಟಿ ಆಗಿದೆ. ಹೆಚ್ ಎಎಲ್ ಮುಚ್ಚಲಾಗುತ್ತಿದೆ ಎಂದು ಸುಳ್ಳು ಸುದ್ದಿ ಹಬ್ಬಿಸಿದ್ದರು. ಆದ್ರೆ ಅಲ್ಲಿ 84,000 ಕೋಟಿ ಕೆಲಸ ಆಗಿದೆ. ಈಗ 54,000 ಕೋಟಿ ರೂ. ವೆಚ್ಚದ ಕೆಲಸ ಅಲ್ಲಿ ನಡೆಯುತ್ತಿದೆ. ಈಗ ರಾಹುಲ್ ಗಾಂಧಿ ಕ್ಷಮೆ ಕೇಳ್ತಾರಾ ಅಥವಾ ಡಿಕೆಶಿ ಅವರಿಂದ ಕ್ಷಮೆ ಕೇಳಿಸುತ್ತಾರಾ ಎಂದು ಪ್ರಶ್ನೆ ಮಾಡಿದ್ದಾರೆ.

**ಕಾಂಗ್ರೆಸ್ ದಿವಾಳಿ ಸರ್ಕಾರ:** ಕಾಂಗ್ರೆಸ್ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆಯಡಿ ರಾಜ್ಯ ಸರ್ಕಾರದಿಂದ ಕೊಡಬೇಕಿರುವ ಹಣ ರೈತರಿಗೆ ಕೊಟ್ಟಿಲ್ಲ. ಇದು ದಿವಾಳಿಯಾಗಿರುವ ಸರ್ಕಾರ, ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಕೊಡುವ ಮತ ಆರ್ಥಿಕ ದಿವಾಳಿತನಕ್ಕೆ ಕೊಡುವ ಮತ, ಕಾಂಗ್ರೆಸ್ ಗೆ ಕೊಡುವ ಮತ ಭ್ರಷ್ಟಾಚಾರಕ್ಕೆ ಕೊಡುವ ಮತ, ಕಾಂಗ್ರೆಸ್‌ಗೆ ಕೊಡುವ ಮತ ದೇಶದ ಅಭದ್ರತೆಗೆ ನೀಡುವ ಮತ ಆಗುತ್ತೆ ಅಂದು ಆಕ್ರೋಶ ಹೊರಹಾಕಿದ್ದಾರೆ.

ಇದೇ ವೇಳೆ ಡಿಕೆಶಿ ಹೇಳಿಕೆಗೆ ಟಾಂಗ್ ನೀಡಿದ ಬಿಎಸ್‌ವೈ, ಒಕ್ಕಲಿಗ ಸಿಎಂ ತೆಗೆದವರು ಯಾರೆಂದು ಸ್ವಾಮೀಜಿ ಅವರ ಹತ್ರ ಹೋಗಿ ಅವರೇ ಕೇಳಲಿ, ಅವರೇ ಹೇಳಲಿ. ಡಿ.ಕೆ.ಶಿವಕುಮಾರ್ ಇಂತದ್ದನ್ನ ಬಿಟ್ಟು ಬೇರೆನೂ ಹೇಳಲು ಸಾಧ್ಯ ಒಕ್ಕಲಿಗ ಸಮುದಾಯ ಒಗ್ಗಟ್ಟಾಗಿದ್ದಾರೆ, ನಮ್ಮ ಜೊತೆ ಇದ್ದಾರೆ ಎಂದು ತಿಳಿಸಿದ್ದಾರೆ.

**28 ಕ್ಷೇತ್ರದಲ್ಲೂ ಗೆಲ್ಲುವ ವಿಶ್ವಾಸವಿದೆ:** ರಾಜ್ಯದಲ್ಲಿ 28ಕ್ಕೆ 28 ಲೋಕಸಭಾ ಕ್ಷೇತ್ರ ಗೆಲ್ಲುವ ವಿಶ್ವಾಸವಿದೆ. ಕಾಂಗ್ರೆಸ್ ಸುಳ್ಳು ಆಶ್ವಾಸನೆಯಿಂದ ಅಭಿವೃದ್ಧಿ ಕುಂಠಿತವಾಗಿದೆ. ಬಿಜೆಪಿ 400ಕ್ಕೂ ಹೆಚ್ಚು ಸೀಟು ಗೆದ್ದು, ರಾಜ್ಯದಲ್ಲಿ 28 ಕ್ಷೇತ್ರ ಗೆದ್ದು ಸಂಸದರನ್ನ ದೆಹಲಿಗೆ ಕರೆದುಕೊಂಡು ಹೋಗ್ತೀನಿ ಎಂದು ಸವಾಲ್ ಹಾಕಿದ್ದಾರೆ.

# ಎಲ್ಲಾ ಸೇರಿ ಮತದಾನದ ಹಬ್ಬ ಆಚರಿಸೋಣ



**ಬೆಂಗಳೂರು:** ಏ.26 ರಂದು ನಡೆಯುವ ಮತದಾನದ ಹಬ್ಬವನ್ನು ಎಲ್ಲರೂ ಸೇರಿ ಒಟ್ಟಾಗಿ ಆಚರಿಸೋಣ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಕರೆಕೊಟ್ಟಿದ್ದಾರೆ.

ನಗರದಲ್ಲಿ, ಲೋಕಸಭಾ ಚುನಾವಣೆಯ ಅಂಗವಾಗಿ ಚುನಾವಣಾ ಆಯೋಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಹಾಗೂ ಯೂನಿಯನ್ ಬ್ಯಾಂಕ್ ಸಹಯೋಗದಲ್ಲಿ ವಿಧಾನಸೌಧದ ಗ್ರಾಂಡ್ ಸ್ಟೆಪ್ಸ್ ಮುಂಭಾಗ ಗುರುವಾರ ಹಮ್ಮಿಕೊಂಡಿದ್ದ ಮತದಾನ ಜಾಗೃತಿಯ ಸೈಕಲ್ ಜಾಥಾ (ಸೈಕ್ಲೋಥಾನ್)ಗೆ ಚಾಲನೆ ನೀಡಿ ಅವರು ಮಾತನಾಡಿದರು. ರಾಜ್ಯದಲ್ಲಿ ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ದಕ್ಷಿಣ ಕರ್ನಾಟಕದಲ್ಲಿ ಏಪ್ರಿಲ್ 26 ರಂದು ಹಾಗೂ ಉತ್ತರ ಕರ್ನಾಟಕದಲ್ಲಿ ಮೇ.7 ರಂದು ಮತದಾನ ನಡೆಯುತ್ತಿದೆ. ಮತ ಚಲಾಯಿಸಲು ಅರ್ಹರಿರುವ ಎಲ್ಲರೂ ತಪ್ಪದೆ ಮತ ಚಲಾಯಿಸೋಣ ಎಂದರು.

ಲೋಕಸಭಾ ಚುನಾವಣೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮ ಹಾಗೂ ಜಾಥಾಗಳನ್ನು ಹಮ್ಮಿಕೊಳ್ಳುವ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತಿದೆ. ಇದಕ್ಕೆ ಮತದಾರರು ಸಹಕರಿಸಬೇಕು ಎಂದು ಕೇಳಿಕೊಂಡರು.

**ಸೈಕ್ಲಥಾನ್ ಸಾಗಿದ ಹಾದಿ:** ವಿಧಾನ ಸೌಧದ ಗ್ರಾಂಡ್ ಸ್ಟೆಪ್ಸ್ ಮುಂಭಾಗದಿಂದ, ಕೆ.ಆರ್ ವೃತ್ತದ ನೃಪತುಂಗ ರಸ್ತೆಯ ಮೂಲಕ ಸಾಗಿ, ಹಡ್ಸನ್ ವೃತ್ತ, ಕಸ್ತೂರ್ ಬಾ ರಸ್ತೆ, ಕ್ವೀನ್ಸ್ ರಸ್ತೆ (ಚಿನ್ನಸ್ವಾಮಿ ಕ್ರೀಡಾಂಗಣ)ದಿಂದ, ಡಾ. ಬಿ.ಆರ್ ಅಂಬೇಡ್ಕರ್ ರಸ್ತೆಯ ಮೂಲಕ ವಿಧಾನಸೌಧ ಪೂರ್ವ ದ್ವಾರದ ಬಳಿ ಸೈಕ್ಲೋಥಾನ್ ಮುಕ್ತಾಯಗೊಂಡಿತು. ಈ ವೇಳೆ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಕಾಂತರಾಜು, ಸ್ವೀಪ್ ನೋಡಲ್ ಅಧಿಕಾರಿಯಾದ ಪ್ರತಿಭಾ, ಚುನಾವಣಾ ರಾಯಭಾರಿಗಳಾದ ಅನುಪ್ ಶ್ರೀಧರ್, ನೀತು ವನಜಾಕ್ಷಿ, ಸೈಕ್ಲಿಸ್ಟ್ ಗಳಲ್ಲಿ ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ನಾಗರೀಕರು ಸೇರಿದಂತೆ ಇನ್ನಿತರರು ಭಾಗಿಯಾಗಿದ್ದರು.

## ಭಂಡ್ ಬಿದ್ದಿರೋವ್ರ ಬಗ್ಗೆ ಏನ್ ಹೇಳೋದು

# ಡಿಕೆಶಿ, ಹೆಚ್‌ಡಿಕೆ ಮಧ್ಯೆ ಜಿದ್ದಾಜಿದ್ದಿ

**ಬೆಂಗಳೂರು:** ಲೋಕಸಭಾ ಚುನಾವಣೆಯ ಹೊತ್ತಲ್ಲಿಯೇ ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನಡುವೆ ಜಿದ್ದಾಜಿದ್ದಿ ಆರಂಭವಾಗಿದೆ.





ಇಬ್ಬರು ನಾಯಕರ ಮಧ್ಯೆ ಟಾಕ್ ವಾರ್ ಮುಂದುವರಿದ್ದು, ದೋಸ್ತಿ ನಾಯಕರು ಬುಧವಾರ ಆದಿಚುಂಚನಗಿರಿ ಶ್ರೀಗಳನ್ನು ಭೇಟಿ ಮಾಡಿದ್ದಕ್ಕೆ ಡಿಕೆಶಿ ಕೊಟ್ಟ ಹೇಳಿಕೆಗೆ ಹೆಚ್‌ಡಿಕೆ ತಿರುಗೇಟು ನೀಡಿದ್ದಾರೆ. ಭಂಡ್ ಬಿದ್ದಿರುವವರ ಬಗ್ಗೆ ಏನು ಹೇಳುವುದು , ಇದಕ್ಕೆಲ್ಲ ಯಾಕ್ ತಲೆ ಕೆಡಿಸಿಕೊಳ್ಳಬೇಕು ಎನ್ನುವ ಮೂಲಕ ಮಾಜಿ ಸಿಎಂ ಕಿಡಿಕಾರಿದ್ದಾರೆ.

**ಡಿಕೆಶಿ ಹೇಳಿದ್ದೇನು.. :** ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಆದಿಚುಂಚನಗಿರಿ ಮಠದ ನಿರ್ಮಲಾನಂದ ಸ್ವಾಮೀಜಿಗಳನ್ನು ಭೇಟಿ ಮಾಡಿ ಆಶೀರ್ವಾದ ಪಡೆದುಕೊಂಡಿದ್ದಾರೆ. ದೋಸ್ತಿ ನಾಯಕರು ಶ್ರೀಗಳನ್ನು ಭೇಟಿಯಾಗುತ್ತಿದ್ದಂತೆಯೇ ಕೈ ನಾಯಕರು ಆಕ್ಷೇಪ ವ್ಯಕ್ತಪಡಿಸಿದ್ದರು.

ಒಕ್ಕಲಿಗರು ದಡ್ಡರಲ್ಲ, ಒಕ್ಕಲಿಗ ಸ್ವಾಮೀಜಿಯೂ ದಡ್ಡರಲ್ಲ ಎನ್ನುವ ಮೂಲಕ ನಿರ್ಮಲಾನಂದ ಶ್ರೀಗಳ ವಿರುದ್ಧವೇ ಡಿಕೆಶಿ ಪರೋಕ್ಷವಾಗ್ದಾಳಿ ನಡೆಸಿದ್ದರು. ಅಲ್ಲದೇ ಒಕ್ಕಲಿಗ ಮುಖ್ಯಮಂತ್ರಿಯನ್ನು ಯಾಕೆ ಕೆಳಗಿಳಿಸಿದ್ರು ಅಂತ ಶ್ರೀಗಳನ್ನು ಕೇಳಬೇಕಿತ್ತು ಎಂದಿದ್ದರು. ಡಿಕೆಶಿ ಈ ಹೇಳಿಕೆಗೆ ಹೆಚ್‌ಡಿಕೆ ಇಂದು ತಿರುಗೇಟು ಕೊಟ್ಟರು.

# ಮತದಾರರ ಮೇಲಿನ ಕೋಪಕ್ಕೆ ಡಿಕೆ ಸಹೋದರರ ಗೂಂಡಾಗಿರಿ

**ಬೆಂಗಳೂರು:** ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಅಭ್ಯರ್ಥಿ ಡಾ. ಸಿಎನ್ ಮಂಜುನಾಥ್ ಪರ ಪ್ರಚಾರಕ್ಕೆ ತೆರಳಿದ್ದ ಬಿಜೆಪಿ, ಜೆಡಿಎಸ್ ಕಾರ್ಯಕರ್ತರ ಮೇಲೆ ನಡೆದಿರುವ ಹಲ್ಲೆಯನ್ನು ಬಿಜೆಪಿ ನಾಯಕರು ತೀವ್ರವಾಗಿ ಖಂಡಿಸಿದ್ದು, ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಸೋಲಿನ ಸುಳಿವು ದೊರೆತಿರುವ ಹತಾಶೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮತ್ತು ಡಿಕೆ ಸುರೇಶ್ ಗೂಂಡಾಗಿರಿಗೆ ಇಳಿದಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಟೀಕಿಸಿದ್ದಾರೆ.

ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಅಶೋಕ್, ಡಿಕೆ ಸಹೋದರರು ಮತದಾರರ ಮೇಲಿನ ಕೋಪಕ್ಕೆ ಗೂಂಡಾಗಿರಿಗೆ ಇಳಿದಿದ್ದಾರೆ ಎಂದು ಟೀಕಿಸಿದ್ದಾರೆ.

'ಬೆಂಗಳೂರು ಗ್ರಾಮಾಂತರದಲ್ಲಿ ಸೋಲು ಗ್ಯಾರೆಂಟಿ ಆಗುತ್ತಿದ್ದಂತೆ, ಶಾಶ್ವತವಾಗಿ ಅಟ-ಟಿ-ತಿಚಿಣಟಿರ ಆಗಿ ಉಳಿಯಬೇಕಾಗುತ್ತದಲ್ಲಾ ಎನ್ನುವ ಹತಾಶೆಯಿಂದ ಕಂಗಾಲಾಗಿರುವ ಡಿಕೆ ಶಿವಕುಮಾರ್ ಹಾಗೂ ಅವರ ಸಹೋದರ ಡಿಕೆ ಸುರೇಶ್ ಮತದಾರರ ಮೇಲಿನ ಕೋಪಕ್ಕೆ ಗೂಂಡಾಗಿರಿಗೆ ಇಳಿದಿದ್ದಾರೆ. ಬಿಜೆಪಿ ಕಾರ್ಯಕರ್ತ ಸಹೋದರ ನವೀನ್ ಮೇಲೆ ಕಾಂಗ್ರೆಸ್ಸಿನ ಗೂಂಡಾಗಳು



ಮಾರಣಾಂತಿಕ ಹಲ್ಲೆ ಮಾಡಿದ್ದರೂ ಆತನನ್ನು ಬಂಧಿಸದೆ ಕಾಟಾಚಾರಕ್ಕೆ ಕೇಸ್ ಹಾಕುವ ಮೂಲಕ ಯಾರನ್ನು ರಕ್ಷಣೆ ಮಾಡುತ್ತಿದ್ದೀರಿ ಸಿಎಂ ಸಿದ್ದರಾಮಯ್ಯನವರೇ ಸ್ಟ್ರಾಂಗ್ ಸಿಎಂ ಎಂದು ಹೇಳಿಕೊಳ್ಳುವ ನೀವು ಡಿಕೆ ಸಹೋದರರ ಮುಂದೆ ಅಷ್ಟೊಂದು ವೀಕ್ ಯಾಕಾಗಿದ್ದೀರಿ' ಎಂದು ಅಶೋಕ್ ಪ್ರಶ್ನಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಮತದಾರರು ನಿರ್ಭೀತಿಯಿಂದ ಮತದಾನ ಮಾಡುವ ವಾತಾವರಣ ಕೆಡಿಸಿ ಮತದಾರರಲ್ಲಿ ಭಯದ ವಾತಾವರಣ ಸೃಷ್ಟಿ ಮಾಡುವ ಈ ದುಷ್ಕೃತ್ಯಕ್ಕೆ ಚುನಾವಣಾ ಆಯೋಗ ಕಡಿವಾಣ ಹಾಕಬೇಕು. ಕಾಂಗ್ರೆಸ್ ಪಕ್ಷದ ವಿರುದ್ಧ ಕ್ರಮಕೈಗೊಂಡು ನಿಷ್ಪಕ್ಷಪಾತವಾಗಿ ಅವಕಾಶ ಕಲ್ಪಿಸಿ, ಮತದಾರರಲ್ಲಿ ಧೈರ್ಯ, ವಿಶ್ವಾಸ ತುಂಬುವ ಕೆಲಸ ಮಾಡಬೇಕು ಎಂದು ಅಶೋಕ್ ಆಗ್ರಹಿಸಿದ್ದಾರೆ.

## ಹೆಚ್‌ಡಿಕೆ ನಿರ್ಮಲಾನಂದನಾಥ ಶ್ರೀಗಳ ಫೋನ್ ಟ್ಯಾಪ್ ಮಾಡಿಸಿದ್ರು

**ಮಂಡ್ಯ:** ನಿರ್ಮಲಾನಂದನಾಥ ಶ್ರೀಗಳ ಫೋನ್‌ನ್ನು ಕುಮಾರಸ್ವಾಮಿ ಟ್ಯಾಪ್ ಮಾಡಿಸಿದ್ರು. ಈಗ ಹೇಗೆ ಹೋಗಿ ಶ್ರೀಗಳ ಬಳಿ ಆಶೀರ್ವಾದ ಕೇಳ್ತಾರೆ ಎಂದು ಸಚಿವ



ಚಲುವರಾಯಸ್ವಾಮಿ, ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಮಾಧ್ಯಮದ ಜೊತೆ ಮಾತನಾಡಿದ ಸಚಿವ ಚಲುವರಾಯಸ್ವಾಮಿ, ಹಿಂದೆ ಕುಮಾರಸ್ವಾಮಿ ಅವರು ಸಿಎಂ ಆಗಿದ್ದಾಗ ಆದಿಚುಂಚನಗಿರಿಯ ನಿರ್ಮಲಾನಂದನಾಥ ಸ್ವಾಮೀಜಿ ಅವರ ಫೋನ್‌ನ್ನು ಟ್ಯಾಪ್ ಮಾಡಿದ್ದಾರೆ. ಇದೀಗ ಹೇಗೆ ಅವರ ಬಳಿ ಹೋಗಿ ಕುಮಾರಸ್ವಾಮಿ ಆಶೀರ್ವಾದ ಕೇಳ್ತ ಇದ್ದಾರೆ. ನಾವು ಸಹ ಜೆಎಸ್‌ಎಸ್, ಸಿದ್ದಗಂಗಾ, ಚುಂಚನಗಿರಿ ಮಠಗಳಿಗೆ ನಾವು ಹೋಗಿದ್ದೀವಿ, ಅವರು ಹೋಗಿದ್ದಾರೆ. ಇದು ಚುನಾವಣೆ ವೇಳೆ ಸಹಜವಾಗಿದೆ ಎಂದು ಹೇಳಿಕೆ ನೀಡಿದ್ದಾರೆ.

ಕುಮಾರಸ್ವಾಮಿ, ಸ್ವಾಮೀಜಿ ಫೋನ್ ಟ್ಯಾಪ್ ಮಾಡಿದ್ದಾರೆ. ಸ್ವಾಮೀಜಿಗಳು ಯಾರಿಗೂ ಪ್ರಚಾರ ಮಾಡೋಕೆ ಆಗಲ್ಲ. ಚುಂಚನಗಿರಿ ಮಠ ಒಕ್ಕಲಿಗ ಸಮುದಾಯ ಮಠ ಆದ್ರೂ ಸಹ ರಾಜ್ಯದಲ್ಲಿ ಅತ್ಯಂತ ಜಾತ್ಯತೀತ ಮಠವಾಗಿದೆ. ಎಲ್ಲಾ ಜಾತಿಗಳನ್ನು ಪ್ರೀತಿಸಿ ಬೆಳೆಸಿದವರು ಬಾಲಗಂಗಾಧರನಾಥ ಶ್ರೀಗಳು. ಜೆಡಿಎಸ್‌ನವರು ಬಾಲಗಂಗಾಧರ ಶ್ರೀಗಳಿಗೆ ಎಷ್ಟು ಕಿರುಕುಳ ಕೊಟ್ಟರು ಎಂದು ಸಹ ಗೊತ್ತಿದೆ. ಈಗ ಚುನಾವಣೆ ಬಂದಿದೆ. ಅದಕ್ಕೆ ಮಠಕ್ಕೆ ಕುಮಾರಸ್ವಾಮಿ ಹೋಗ್ತಾ ಇದ್ದಾರೆ ಅಷ್ಟೇ ಎಂದಿದ್ದಾರೆ.

## ಮಳೆ ಆಗಮನ ಸಾಧ್ಯತೆ

ಹೊನ್ನಾವರದಲ್ಲಿ 33.7 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 25.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕಾರವಾರದಲ್ಲಿ 36.3 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 27.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಶಿರಾಲಿಯಲ್ಲಿ 36.8ಡಿಗ್ರಿ ಸೆಲ್ಸಿಯಸ್ ಗರಷ್ಠ ಉಷ್ಣಾಂಶ, 22.4 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ವಿಜಯಪುರದಲ್ಲಿ 38.0 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 23.0 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

ಗದಗದಲ್ಲಿ38.6ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 24.2 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ರಾಯಚೂರಿನಲ್ಲಿ 38.4 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 26.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ.

## ಎನ್‌ಐಎ ವಶಕ್ಕೆ

**ಬಾಂಬರ್ ನನ್ನು ಪತ್ತೆಹಚ್ಚಿದ್ದು ಹೇಗೆ :** ಶಂಕಿತ, ಮುಸ್ಸಾವಿರ್ ಹುಸೇನ್ ಶಾಜಿಬ್ ಪತ್ತೆಗೆ ಆತ ಧರಿಸಿದ್ದ ಕ್ಯಾಪ್‌ನ ಸಹಾಯದಿಂದ ಕಾರ್ಯಾಚಣೆ ನಡೆಸಲಾಗಿತ್ತು. ಮತೀನ್ ತಾಹಾನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಮುಸ್ಸಾವಿರ್ ಹುಸೇನ್ ಶಾಜಿಬ್ ನದ್ದೇ ಕೃತ್ಯ ಎಂಬುದು ದೃಢಪಟ್ಟಿತ್ತು. ನಂತರ ಆತನ ಪತ್ತೆಗೆ ಬಲೆಬೀಸಲಾಗಿತ್ತು. ಶಂಕಿತ ಭಯೋತ್ಪಾದಕ ಕರ್ನಾಟಕ ಮೂಲದವನಾಗಿದ್ದು, ಮಲೆನಾಡು ಪ್ರದೇಶದಲ್ಲಿ ಉಗ್ರಗಾಮಿ ಗುಂಪುಗಳೊಂದಿಗೆ ಸಂಪರ್ಕ ಹೊಂದಿರುವ ಶಂಕೆ ಇದೆ.

ಜೈಲಿನಲ್ಲಿದ್ದವರ ವಿಚಾರಣೆಯೂ ನೆರವಿಗೆ ಬಂತು

ಈಗಾಗಲೇ ಭಯೋತ್ಪಾದನೆ ಚಟುವಟಿಕೆಗಳ ಶಂಕೆಯ ಮೇಲೆ ಜೈಲಿನಲ್ಲಿರುವ ಉಗ್ರಗಾಮಿಗಳನ್ನು ವಿಚಾರಣೆಗೆ ಒಳಪಡಿಸಿದ್ದೂ ಸಹ ಬಾಂಬರ್ ನ ಪತ್ತೆಗೆ ನೆರವಾಯಿತು. ಈ ವೇಳೆ, ಜೈಲಿನಲ್ಲಿದ್ದ ಶಂಕಿತ ಉಗ್ರ, ಶಾರಿಕ್, ಮತೀನ್ ಮತ್ತು ಈಗ ವಶಕ್ಕೆ ಪಡೆಯಲಾಗಿರುವ ಮುಸ್ಸಾವಿರ್ ಹುಸೇನ್ ನಡುವೆ ಸಂಪರ್ಕ ಇರುವುದೂ ಬಹಿರಂಗಗೊಂಡಿತ್ತು. ಕಳೆದ 3-4 ವರ್ಷಗಳಿಂದ ಅಧಿಕಾರಿಗಳಿಂದ ತಪ್ಪಿಸಿಕೊಳ್ಳುತ್ತಿದ್ದರೂ, ಶಂಕಿತನ ಗುರುತು, ವಿಳಾಸ ಮತ್ತು ಇತಿಹಾಸಕ್ಕೆ ಸಂಬಂಧಿಸಿದಂತೆ ಮಹತ್ವದ ಮಾಹಿತಿಯನ್ನು ಕಲೆಹಾಕುವಲ್ಲಿ ಎನ್ ಐಎ ಅಧಿಕಾರಿಗಳು ಯಶಸ್ವಿಯಾಗಿದ್ದರು.

## ಮೋದಿ ಜೈಲಿಗೆ

ಲಾಲು ಪ್ರಸಾದ್ ಹಾಗೂ ಮಿಸಾ ಭಾರತಿ ವಿವಿಧ ಹಗರಣದಲ್ಲಿ ಆಪಾದಿತರು. ಕಳಂಕರಹಿತ ರಾಜಕೀಯ ಜೀವನವನ್ನು ಹೊಂದಿರುವ ಮೋದಿ ಮೇಲೆ ಆರೋಪ ಮಾಡುವುದು ಖಂಡನಾರ್ಹ. ಇಂತಹವರಿಗೆ ಜನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕು ಎಂದು ಜನತೆಗೆ ಮನವಿ ಮಾಡಿದ್ದಾರೆ.

## ನಾನೇ ಸಿಎಂ ಆಗುತ್ತೇನೆ

ನನ್ನ ಮೇಲೆ ಈಗಾಗಲೆ 100 ಕೇಸ್ ಇದೆ, ಇದೊಂದು ಹೆಚ್ಚಲ್ಲ, ಕೇಸ್ ಹಾಕಿ ಅಂದೆ ಎಂದು ಯತ್ನಾಳ್ (ಅಧಿವೇಶನದಲ್ಲಿ ಸಚಿವ ಶಿವನಾಂದ ಪಾಟೀಲ್ ಮತ್ತು ತಮ್ಮ ಮಧ್ಯೆ ನಡೆದ ಮಾತಿನ ಜಟಾಪಟಿಯನ್ನು) ಸಭೆಯಲ್ಲಿ ಹೇಳಿದರು.

ಇಂದು ಗ್ಯಾರಂಟಿ ಗ್ಯಾರಂಟಿ ಅಂತಿದ್ದಾರೆ, ಆದರೆ ದೇಶ ಉಳಿದರೆ ಮಾತ್ರ ಗ್ಯಾರಂಟಿ ಜಾರಿಯಲ್ಲಿರುತ್ತದೆ. ದೇಶ ಉಳಿಯದಿದ್ದರೆ, ಮುಸ್ಲಿಂರೆಲ್ಲ ಒಂದಾದರೆ ಹಿಂದೂಗಳ ಜಮೀನು ಉಳಿಯಲ್ಲ, ಮನೆನೂ ಉಳಿಯಲ್ಲ. ಒಂದು ಮತಾಂತರವಾಗಬೇಕು, ಇಲ್ಲ ಸಾಯಬೇಕು ಇವೆರಡೇ ಆಯ್ಕೆ ಉಳಿಯುತ್ತೆ. ನಮ್ಮ ಅಜ್ಜ, ಮುತ್ತಜ್ಜರು ಟಿಪ್ಪು ಸುಲ್ತಾನ್ ವಿರುದ್ಧ, ಔರಂಗಜೇಬನ ವಿರುದ್ಧ ಹೋರಾಟ ಮಾಡಿದ್ದಕ್ಕೆ ಹಿಂದೂಗಳು ಉಳಿದಿದ್ದೇವೆ. ನಾವು ಯಾರಾದರೂ ಹಿಂದೂಗಳಾಗಿ ಉಳಿದಿದ್ದರೆ ಛತ್ರಪತಿ ಶಿವಾಜಿ ಮಹಾರಾಜರ ಪುಣ್ಯದಿಂದ ಎಂದರು.

## ತರಕಾರಿ ವ್ಯಾಪಾರಿಯಾದ ಅಭ್ಯರ್ಥಿ

ತಾನು ಅಂದಿನ ಭಾರತದ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ಅವರಿಂದ ಪದ್ಮಶ್ರೀ ಪ್ರಶಸ್ತಿಯನ್ನು ಪಡೆದಿದ್ದೇನೆ, ತಾನು ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ನೀರು ಮತ್ತು ನೈರ್ಮಲ್ಯ ಸೌಲಭ್ಯಗಳನ್ನು ಒದಗಿಸುವಲ್ಲಿ ತೊಡಗಿಸಿಕೊಂಡಿದ್ದೇನೆ ಎಂದು ಹೇಳಿದ್ದಾರೆ.

## ಮೊದಲನೇ ಪುಟದಿಂದ...

ದಾಮೋದರನ್ ಅವರು ತಮ್ಮ 21 ನೇ ವಯಸ್ಸಿನಲ್ಲಿ ತಮ್ಮ ಸಮಾಜ ಸೇವೆಯನ್ನು ಪ್ರಾರಂಭಿಸಿದರು ಮತ್ತು ತಮ್ಮ ಜೀವಿತಾವಧಿಯಲ್ಲಿ ಒಂಬತ್ತು ಪ್ರಧಾನ ಮಂತ್ರಿಗಳ ಅಧಿಕಾರಾವಧಿಯಲ್ಲಿ ಸೇವೆ ಸಲ್ಲಿಸಿದ್ದಾರೆ ಎನ್ನುವ ಮಾಹಿತಿ ಹಂಚಿಕೊಂಡರು.

ಇಂದು ನಾನು ನನ್ನ ಸಂಸದೀಯ ಕ್ಷೇತ್ರಕ್ಕೆ ಒಳಪಡುವ ಗಾಂಧಿ ಮಾರ್ಕೆಟ್ ಪ್ರದೇಶದಲ್ಲಿ ನನ್ನ ಪ್ರಚಾರವನ್ನು ಪ್ರಾರಂಭಿಸಿದ್ದೇನೆ, ನಾನು ಹೋದಲ್ಲೆಲ್ಲಾ ನನಗೆ ಅದ್ಭುತ ಸ್ವಾಗತ ಸಿಗುತ್ತಿದೆ ಎಂದರು. ತಿರುಚ್ಚಿಯನ್ನು ಸ್ವಚ್ಛ ಮತ್ತು ಹಸಿರು ನಗರವನ್ನಾಗಿ ಮಾಡಲು ನಾವು ಕೆಲಸ ಮಾಡಬೇಕಾಗಿದೆ, ನಗರದಲ್ಲಿ ರಿಂಗ್ ರೋಡ್ ನಿರ್ಮಾಣವಾಗುವಂತೆ ನೋಡಿಕೊಳ್ಳುತ್ತೇನೆ ಎಂದಿದ್ದಾರೆ.

ದಕ್ಷಿಣ ಭಾರತದ ಹಳ್ಳಿಗಳು ಮತ್ತು ಕೊಳೆಗೇರಿಗಳಲ್ಲಿ ನೈರ್ಮಲ್ಯ ಪ್ರಚಾರಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟ ಸಮಾಜ ಸೇವೆಯನ್ನು ಗುರುತಿಸಿ ಈ ಪದ್ಮಶ್ರೀ ಪ್ರಶಸ್ತಿ ನೀಡಲಾಗಿದೆ.

ಸ್ವತಂತ್ರ ಅಭ್ಯರ್ಥಿ ಒಂದು ದಿನದ ಮಟ್ಟಿಗೆ ಕ್ಷೌರಿಕನಾಗಿದ್ದಾರೆ. ತಮಿಳುನಾಡಿನ ರಾಮೇಶ್ವರಂನಲ್ಲಿ ಈ ಘಟನೆ ನಡೆದಿದೆ. ಅಭ್ಯರ್ಥಿಯೊಬ್ಬರು ಸಲೂನ್ ನಲ್ಲಿ ಕ್ಷೌರ ಮಾಡುತ್ತಿರುವುದು ಕಂಡುಬಂದಿದೆ. ಎಎನ್ ಐ ವಿಡಿಯೋವನ್ನು ಹಂಚಿಕೊಂಡಿದೆ, ಇದರಲ್ಲಿ 2024ರ ಲೋಕಸಭಾ ಚುನಾವಣೆಯಲ್ಲಿ ಏಕಾಂಗಿಯಾಗಿ ಸ್ಪರ್ಧಿಸಿರುವ ಅಭ್ಯರ್ಥಿ ಕ್ಷೌರಿಕ ಕೆಲಸವನ್ನು ಮಾಡುತ್ತಿರುವುದನ್ನು ಕಾಣಬಹುದು. ಸ್ವತಂತ್ರ ಅಭ್ಯರ್ಥಿ ಪಾರಿರಾಜನ್ ಚುನಾವಣಾ ಪ್ರಚಾರದ ಸಮಯದಲ್ಲಿ ಒಂದು ದಿನ ಕ್ಷೌರಿಕನಾಗಿ ಕೆಲಸ ಮಾಡಿದ್ದಾರೆ.

## ಚುನಾವಣಾ ಬಹಿಷ್ಕಾರ

ಆರ್‌ಎಲ್‌ಎಫ್ ಲೇಔಟ್ ನಮ್ಮ ಸುತ್ತಮುತ್ತಲಿನ ಜನರು ಬಳಸುವ ಉದ್ಯಾನವನಗಳಂತಹ ಸಾಮಾನ್ಯ ಮೂಲಸೌಕರ್ಯಗಳನ್ನು ಸಹ ಹೊಂದಿದೆ ಎಂದು ಪತ್ರದಲ್ಲಿ ನಿವಾಸಿಗಳು ಉಲ್ಲೇಖಿಸಿದ್ದಾರೆ.

ಬಿಡಿಎ ಅನುಮೋದಿತ ಲೇಔಟ್‌ಗಳಾದ ರಘುವನಹಳ್ಳಿಯ ಬಿಸಿಎಂಸಿ ಲೇಔಟ್, ನಾರಾಯಣನಗರ ಹಂತ 1 ಮತ್ತು ಹಂತ 2, ದೊಡ್ಡಕಲ್ಲಸಂದ್ರ, ಬಾಲಾಜಿ ಲೇಔಟ್, ವಾಜರಹಳ್ಳಿ, ಬಿಡಿಎ ನೌಕರರ ಬಡಾವಣೆ, ದೊಡ್ಡಕಲ್ಲಸಂದ್ರ ಮತ್ತು ಬಿಸಿಸಿ ಎಚ್‌ಎಸ್ ಲೇಔಟ್, ವಾಜರಹಳ್ಳಿ ಬಿಡಬ್ಲ್ಯುಎಸ್‌ಎಸ್‌ಬಿ ನೀರಿನ ಸಂಪರ್ಕದ ಪ್ರಯೋಜನ ಪಡೆದಿರುವುದು ನಮಗೆ ತಿಳಿದು ಬಂದಿದೆ. ಯಾವುದೇ ಮೂಲಸೌಕರ್ಯ ಶುಲ್ಕವನ್ನು ಪಾವತಿಸದೆ ಮತ್ತು ಇಂಡಿವಿಜುವಲ್ ಹೌಸ್ ಗಳಿಗೆ ಕೇವಲ ಸಂಪರ್ಕ ಶುಲ್ಕ ಅಷ್ಟೇ ವಿಧಿಸಿ ನೀರಿನ ಸಂಪರ್ಕ ಕಲ್ಪಿಸಲಾಗಿದೆ ಎಂದು ಸಂಘವು ಪತ್ರದಲ್ಲಿ ತಿಳಿಸಿದೆ.

ನಾವು ಬೋರ್‌ವೆಲ್ ಮೂಲಕ ನೀರು ಸರಬರಾಜು ಮಾಡುತ್ತಿದ್ದೇವೆ. ಆದರೆ, ಸದ್ಯ ಬೋರ್‌ವೆಲ್ ಗಳು ಬತ್ತಿ ಹೋಗಿದ್ದು, ಖಾಸಗಿ ಟ್ಯಾಂಕರ್‌ಗಳ ಮೇಲೆ ಹೆಚ್ಚಿನ ದರ ನೀಡಿ ಅವಲಂಬಿತರಾಗಿದ್ದೇವೆ ಎಂದು ಸಂಘದ ಸದಸ್ಯರು ಹೇಳಿದ್ದಾರೆ.

ಕಳೆದ 20 ವರ್ಷಗಳಿಂದ ಜಲ ಮಂಡಳಿಯ ನೀರಿನ ಸಂಪರ್ಕ ಪಡೆಯಲು ಪ್ರಯತ್ನಿಸುತ್ತಿದ್ದೇವೆ ಎಂದು ನಿವಾಸಿಗಳು ಹೇಳಿದ್ದಾರೆ. ನಮ್ಮ ಸಂಘದ ಮೂಲಕ ಆರ್‌ಎಲ್‌ಎಫ್ ನಿವಾಸಿಗಳು ಜಲ ಮಂಡಳಿ ಜತೆ ಕಾವೇರಿ ನೀರಿನ ಸಂಪರ್ಕಕ್ಕಾಗಿ ಮಾತುಕತೆ ನಡೆಸಿದ್ದಾರೆ. ಆದರೆ, ನಮಗೆ 2.3 ಕೋಟಿ ರೂ. ವರೆಗೆ ಪಾವತಿಸಲು ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಜತೆಗೆ, ಸಮಸ್ಯೆ ಬಗೆಹರಿಸದಿದ್ದರೆ ಮುಂಬರುವ ಲೋಕಸಭಾ ಚುನಾವಣೆ ಮಾತ್ರವಲ್ಲದೆ ಮುಂದಿನ ಚುನಾವಣೆಗಳನ್ನೂ ಬಹಿಷ್ಕರಿಸಲು ನಿರ್ಧರಿಸಿದ್ದೇವೆ ಎಂದು ತಿಳಿಸಿದ್ದಾರೆ.

## ಬರ್ತ್ ಡೇ ಗಿಫ್ಟ್

ಈ ಕುರಿತು ಮೊದಲ ಬಾರಿಗೆ ಮಾರ್ಚ್ 21 ರಂದು ವರದಿ ಮಾಡಿದಾಗ, ಸುಮಾರು 50,000 ಅರ್ಜಿಗಳು ಸಲ್ಲಿಕೆಯಾಗಿದ್ದವು ಎಂದು 'ಟೈಮ್ಸ್ ಆಫ್ ಇಂಡಿಯಾ' ವರದಿ ತಿಳಿಸಿದೆ. ಉಳಿದ ಅರ್ಜಿಗಳು ನಂತರ ಸಲ್ಲಿಕೆಯಾಗಿದ್ದವು.

ಒಟ್ಟಾರೆಯಾಗಿ, ರಾಜ್ಯದಲ್ಲಿ ಜನವರಿಯಿಂದ 10 ಲಕ್ಷಕ್ಕೂ ಹೆಚ್ಚು ಮತದಾರರನ್ನು ಪಟ್ಟಿಗೆ ಸೇರ್ಪಡೆ ಮಾಡಲಾಗಿದೆ. ಈ ಪೈಕಿ 5.9 ಲಕ್ಷ ಮಂದಿ ಏಪ್ರಿಲ್ 26ರಂದ ಮತದಾನ ನಡೆಯುವ ದಕ್ಷಿಣ ಕರ್ನಾಟಕದ ಭಾಗಗಳಲ್ಲಿ ಪಟ್ಟಿಗೆ ಸೇರ್ಪಡೆಯಾಗಿದ್ದಾರೆ.

ಕರ್ನಾಟಕದ ಪ್ರಮುಖ 28 ಲೋಕಸಭಾ ಕ್ಷೇತ್ರಗಳ ಪೈಕಿ ದಕ್ಷಿಣ ಕರ್ನಾಟಕದ 14 ಕ್ಷೇತ್ರಗಳಿಗೆ ಏಪ್ರಿಲ್ 26 ರಂದು ಮತ್ತು ಉತ್ತರ ಕರ್ನಾಟಕದ 14 ಕ್ಷೇತ್ರಗಳಿಗೆ ಮೇ 7 ರಂದು ಮತದಾನ ನಡೆಯಲಿದೆ.

## ಮಾಡುತ್ತಿದ್ದಾರೆ

ಚುನಾವಣಾ ಆಯೋಗಕ್ಕೂ ದೂರು ನೀಡಲಿದ್ದೇವೆ ಎಂದು ಅವರು ತಿಳಿಸಿದರು.

'ಡಾಕ್ಟರ್ ವರ್ಸಸ್ ಡಾಕು' ಎಂಬ ಪದ ಬಳಕೆ ಬಗ್ಗೆಯೂ ಮಂಜುನಾಥ್ ಆಕ್ಷೇಪ ವ್ಯಕ್ತಪಡಿಸಿದರು. ಈ ರೀತಿ ಟೀಕೆಗಳನ್ನು ಮಾಡಬಾರದು. ಚುನಾವಣೆಯಲ್ಲಿ ವೈಯಕ್ತಿಕ ಟೀಕೆಗಳನ್ನು ಮಾಡುವುದು ಸರಿಯಲ್ಲ. ನಮ್ಮ ತತ್ವ ಸಿದ್ಧಾಂತಗಳ ಆಧಾರದಲ್ಲಿಯೇ ಪ್ರಚಾರ ಮಾಡಬೇಕು ಎಂದರು.

ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ. ಸಿಎನ್ ಮಂಜುನಾಥ್ ಪರ ಪ್ರಚಾರ ನಡೆಸಿದ್ದಕ್ಕೆ ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಅಂಚೆಪಾಳ್ಯದಲ್ಲಿ ಕೆಂಪನಹಳ್ಳಿ ಗ್ರಾಮ ಪಂಚಾಯತಿ ಜೆಡಿಎಸ್ ಬೆಂಬಲಿತ ಸದಸ್ಯ ಮಂಜುನಾಥ್ ಎಂಬವರ ಮೇಲೆ ಹಲ್ಲೆ ನಡೆಸಲಾಗಿತ್ತು. ಕೆಂಪನಹಳ್ಳಿ ನಿವಾಸಿ ಬೋರೇಗೌಡ ಮತ್ತು ಅವರ ಬೆಂಬಲಿಗರು ಹಲ್ಲೆ ಮಾಡಿದ್ದಾರೆ ಎನ್ನಲಾಗಿತ್ತು.

ಮತ್ತೊಂದೆಡೆ, ಮಂಜುನಾಥ್ ಪರ ಪ್ರಚಾರ ಮಾಡಿದ್ದ ಬಿಜೆಪಿ ಕಾರ್ಯಕರ್ತ ನವೀನ್ ಮೇಲೆ ಕಾಂಗ್ರೆಸ್ಸಿನ ಗೂಂಡಾಗಳು ಮಾರಣಾಂತಿಕ ಹಲ್ಲೆ ನಡೆಸಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಆರೋಪಿಸಿದ್ದರು. ಬೆಂಗಳೂರು ಗ್ರಾಮಾಂತರದಲ್ಲಿ ಸೋಲು ಗ್ಯಾರೆಂಟಿ ಆಗುತ್ತಿದ್ದಂತೆ, ಹತಾಶೆಯಿಂದ ಕಂಗಾಲಾಗಿರುವ ಡಿಕೆ ಶಿವಕುಮಾರ್ ಹಾಗೂ ಅವರ ಸಹೋದರ ಡಿಕೆ ಸುರೇಶ್ ಮತದಾರರ ಮೇಲಿನ ಕೋಪಕ್ಕೆ ಗೂಂಡಾಗಿರಿಗೆ ಇಳಿದಿದ್ದಾರೆ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದರು.

## ಅತ್ಯಾಚಾರ

ಈ ವಿಚಾರವು ಎಲ್ಲಿಯೂ ಹೊರಬರಬಾರದೆಂದು ತಾಯಿ ಆಕೆ ಹಾಗೂ ಆಕೆಯ ಸಹೋದರ ಇಬ್ಬರಿಗೂ ಥಳಿಸಿ ಚಿತ್ರಹಿಂಸೆ ನೀಡುತ್ತಿದ್ದರು. ಹಿಂಸೆಯನ್ನು ಸಹಿಸಲಾಗದೆ, ಮಗಳು ಜನವರಿ 20 ರಂದು ತನ್ನ ಗಾಜಿಯಾಬಾದ್ ನಿವಾಸದಿಂದ ಓಡಿಹೋಗಿದ್ದಾಳೆ ಮತ್ತು ನಂತರ ದೆಹಲಿಯ ಬೀದಿಗಳಲ್ಲಿ ಅಲೆದಾಡುತ್ತಿದ್ದಳು.

ಅದೃಷ್ಟವಶಾತ್ ಆಕೆಯನ್ನು ದೆಹಲಿ ಪೊಲೀಸರು ರಕ್ಷಿಸಿ ಮಕ್ಕಳ ಕಲ್ಯಾಣ ಸಮಿತಿಯ ಆಶ್ರಯದಲ್ಲಿ ಇರಿಸಿದ್ದಾರೆ. ವೈದ್ಯಕೀಯ ಪರೀಕ್ಷೆ ಬಳಿಕ ಬಾಲಕಿ ಲೈಂಗಿಕ ದೌರ್ಜನ್ಯಕ್ಕೆ ಒಳಗಾಗಿರುವುದು ಸತ್ಯ ಎನ್ನುವುದು ಬಹಿರಂಗಗೊಂಡಿದೆ. ನಾಲ್ಕು ವರ್ಷಗಳ ಹಿಂದೆ ತನ್ನ ತಂದೆಯ ನಿಧನದ ನಂತರ, ತಾನು ಮತ್ತು ಸಹೋದರ ತಮ್ಮ ತಾಯಿಯ ಅಜ್ಜಿಯೊಂದಿಗೆ ವಾಸಿಸುತ್ತಿದ್ದುದಾಗಿ ಹೇಳಿದ್ದಾಳೆ.

ಕಳೆದ ವರ್ಷ, ತಾಯಿ ಅವರನ್ನು ಕರೆದುಕೊಂಡು ಬಂದಿದ್ದಳು, ಬಳಿಕ ದೌರ್ಜನ್ಯಕ್ಕೆ ಬಲಿಯಾಗಬೇಕಾಯಿತು, ಸಹೋದರನೂ ಕೂಡ ಓಡಿಹೋಗಿರುವುದಾಗಿ ತಿಳಿಸಿದ್ದಾಳೆ. ತಂದೆಯ ಮರಣದ ನಂತರ ತಾಯಿ ವೇಶ್ಯಾವಾಟಿಕೆಯಲ್ಲಿ ತೊಡಗಿರುವುದು ಗೊತ್ತಾದ ನಂತರ ಮನೆ ತೊರೆಯದಿದ್ದರೆ ದೊಡ್ಡವನಾದ ಮೇಲೆ ತನ್ನನ್ನೂ ಈ ದಂಧೆಗೆ ತಳ್ಳುತ್ತಿದ್ದಳು ಎಂದು ಹೇಳಿದ್ದಾಳೆ.

ಜನವರಿ 20ರಂದು ಮಗಳು ಕಾಣೆಯಾದ ಬಳಿಕ ತಾಯಿ ನಾಪತ್ತೆಯಾಗಿರುವ ಬಗ್ಗೆ ದೂರು ದಾಖಲಿಸಿರಲಿಲ್ಲ. ತನ್ನ ತಾಯಿ ಮತ್ತು ರಾಜು ಅಪರಾಧವನ್ನು ಮುಚ್ಚಿಡಲು ತನಗೆ ಚಿತ್ರಹಿಂಸೆ ನೀಡುತ್ತಿದ್ದರು ಮತ್ತು ಈ ಬಗ್ಗೆ ಯಾರಿಗೂ ಹೇಳದಂತೆ ನೋಡಿಕೊಳ್ಳಲು ಬೆದರಿಕೆ ಹಾಕುತ್ತಿದ್ದರು ಎಂದು ಬಾಲಕಿ ತಿಳಿಸಿದ್ದು, ಇಬ್ಬರನ್ನು ಬಂಧಿಸಲಾಗಿದೆ.

## ವಶ

ನಂತರ ಪೇಸ್ಟ್ ರೂಪದಲ್ಲಿದ್ದ ಚಿನ್ನವನ್ನು ಹೊರತೆಗೆಯಲಾಯಿತು. ಈ ವೇಳೆ, 24-ಕ್ಯಾರೆಟ್ ನ 812 ಗ್ರಾಂ ಚಿನ್ನ ಇರುವುದು ತಿಳಿದುಬಂತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.

# ಸೀರಿಯಲ್ ನಟ ಸ್ಕಂದ ಅಶೋಕ್ ಇನ್‌ಸ್ಟಾಗ್ರಾಮ್ ಹ್ಯಾಕ್ ವಂಚನೆಗೆ ಯತ್ನ!

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಇತ್ತೀಚೆಗೆ ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿವೆ. ಒಬ್ಬರಿಲ್ಲೊಬ್ಬರು ಒಂದಿಲ್ಲೊಂದು ಪ್ರಕರಣಗಳಲ್ಲಿ ವಂಚನೆಗೆ ಒಳಗಾಗುತ್ತಿದ್ದಾರೆ. ಅದೇ ರೀತಿ ಸೀರಿಯಲ್ ನಟ ಸ್ಕಂದ ಅಶೋಕ್ ಅವರ ಸೋಷಿಯಲ್ ಮೀಡಿಯಾ ಖಾತೆಯನ್ನು ಹ್ಯಾಕ್ ಮಾಡಿ ವಂಚನೆಗೆ ಯತ್ನಿಸಿರುವ ಪ್ರಕರಣ ಬೆಳಕಿಗೆ ಬಂದಿದೆ.



ಸೈಬರ್ ವಂಚಕರು ಸ್ಕಂದ ಅಶೋಕ್ ಅವರ ಇನ್‌ಸ್ಟಾಗ್ರಾಮ್ ಖಾತೆಯನ್ನು ಹ್ಯಾಕ್ ಮಾಡಿ ಅವರ ಫಾಲೋವರ್ಸ್‌ಗಳಿಗೆ ಮೆಸೇಜ್ ಕಳುಹಿಸಿ, ಹಣಕ್ಕೆ ಬೇಡಿಕೆಯಿಟ್ಟಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ಅಶೋಕ್ ಮೈಕ್ರೋ ಲೇಔಟ್ ಪೊಲೀಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾರೆ. ಬಳಿಕ ಪೊಲೀಸರು ಅಕೌಂಟ್ ಹ್ಯಾಕ್ ಆದ ಲೊಕೇಷನ್

ಸ್ಕಂದ ಅಶೋಕ್ ಅವರ ಇನ್‌ಸ್ಟಾಗ್ರಾಮ್ ಖಾತೆಯನ್ನ ದುರ್ಬಳಕೆ ಮಾಡಿಕೊಂಡು ವಂಚನೆಗೆ ಯತ್ನಿಸಿರುವ ಘಟನೆ ಮೈಕ್ರೋ ಲೇಔಟ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಪರಿಶೀಲಿಸಿದ್ರೆ ಚೆನ್ನೈ ಹಾಗೂ ಬೆಂಗಳೂರು ಮತ್ತು ನೈಜೀರಿಯಾ ಸ್ಥಳಗಳಲ್ಲಿ ಪತ್ತೆಯಾಗಿದೆ. ಸದ್ಯ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ದೆಹಲಿ ಮುಖ್ಯ ಕಾರ್ಯದರ್ಶಿ ವಿರುದ್ಧ ಎಫ್‌ಐಆರ್

**ಡೆಹ್ರಾಡೂನ್/ನವದೆಹಲಿ:** ವಿವಿಧ ಹಗರಣಗಳ ದಾಖಲೆಗಳನ್ನು ಕಳವು ಮಾಡಿಸಿದ್ದಾರೆ ಎಂಬ ಆರೋಪದ ಮೇಲೆ ದೆಹಲಿ ಮುಖ್ಯ ಕಾರ್ಯದರ್ಶಿ ನರೇಶ್ ಕುಮಾರ್ ಮತ್ತು ಸಹಾಯಕ ಅಧಿಕಾರಿ ವೈವಿವಿಜೆ ರಾಜಶೇಖರ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಉತ್ತರಾಖಂಡದ ಅಲ್ಮೋರಾ ಪಟ್ಟಣದ ನ್ಯಾಯಾಲಯದ ಆದೇಶದ ಮೇರೆಗೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಇದೇ ಮಾರ್ಚ್ 2ರಂದು ನ್ಯಾಯಾಲಯವು ಅಧಿಕಾರಿಗಳ ವಿರುದ್ಧ ಪ್ಲೆಸೆಂಟ್ ವ್ಯಾಲಿ ಫೌಂಡೇಶನ್ ಎನ್‌ಜಿಒ ಸಂಸ್ಥೆ ನೀಡಿದ್ದ ದೂರನ್ನು ಸ್ವೀಕರಿಸಿತ್ತು. ಕೋರ್ಟ್ ದೆಹಲಿ ಸರ್ಕಾರದ ಕಾರ್ಯದರ್ಶಿಗಳ ವಿರುದ್ಧ ಕೇಸ್ ದಾಖಲಿಸಿ ತನಿಖೆ ನಡೆಸುವಂತೆ ಕಂದಾಯ ಪೊಲೀಸರಿಗೆ ಸೂಚಿಸಿತ್ತು. ಕೋರ್ಟ್ ಆದೇಶದ ಮೇರೆಗೆ ಪೊಲೀಸರು ಐಪಿಸಿ ಸೆಕ್ಷನ್ 392 (ದರೋಡೆ), 447 (ಕ್ರಿಮಿನಲ್ ಅತಿಕ್ರಮಣ), 120-ಬಿ (ಕ್ರಿಮಿನಲ್ ಪಿತೂರಿ), 504 (ಉದ್ದೇಶಪೂರ್ವಕ ಅವಮಾನ) ಮತ್ತು 506 (ಕ್ರಿಮಿನಲ್ ಬೆದರಿಕೆ) ಮತ್ತು ಎಸ್‌ಸಿ-ಎಸ್ಟಿ ಕಾಯ್ದೆ ಅಡಿಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

**ಎನ್‌ಜಿಒ ನೀಡಿದ ದೂರಿನಲ್ಲಿ ಏನಿದೆ:** ಕಳೆದ ಫೆಬ್ರವರಿ 14 ರಂದು ದಡಕಡ ಗ್ರಾಮದಲ್ಲಿ ಎನ್‌ಜಿಒ ನಡೆಸುತ್ತಿರುವ ಶಾಲೆಗೆ ಅಧಿಕಾರಿಗಳು ನಾಲ್ವರನ್ನು ಕಳುಹಿಸಿದ್ದರು. ಕಾರ್ಯದರ್ಶಿಕಡೆಯವರು ಎಂದು ಹೇಳಿಕೊಂಡ ನಾಲ್ವರು ಎನ್‌ಜಿಒ ಜಂಟಿ ಕಾರ್ಯದರ್ಶಿ ಕಚೇರಿ ಕೊಠಡಿಯನ್ನು ಧ್ವಂಸಗೊಳಿಸಿದರು. ಜೊತೆಗೆ ಅವರು ಪಾಲುದಾರರಾಗಿದ್ದ ಹಗರಣಗಳ ಸಾಕ್ಷ್ಯಾಧಾರಗಳಿರುವ ಕಡತಗಳು, ದಾಖಲೆಗಳು ಮತ್ತು ಪೆನ್ ಡ್ರೈವ್‌ಗಳನ್ನ ತೆಗೆದುಕೊಂಡು ಹೋಗಿದ್ದಾರೆ. ಅಲ್ಲದೇ ಎನ್‌ಜಿಒ ಅಧಿಕಾರಿಗಳು ತಮ್ಮ ವಿರುದ್ಧ ವಿಜಿಲೆನ್ಸ್ ಇಲಾಖೆ



ಮತ್ತು ಇತರ ವೇದಿಕೆಗಳಲ್ಲಿ ಸಲ್ಲಿಸಿರುವ ಭ್ರಷ್ಟಾಚಾರದ ದೂರುಗಳನ್ನು ತಕ್ಷಣವೇ ಹಿಂಪಡೆಯದೇ ಇದ್ದರೆ ಅವರನ್ನ ಬಂಧಿಸಲಾಗುವುದು ಎಂದು ಬೆದರಿಕೆ ಹಾಕಿದ್ದಾರೆಂದೂ ದೂರುದಾರರು ತಿಳಿಸಿದ್ದಾರೆ.

ಈ ವೇಳೆ ಅವರು ತಂದಿದ್ದ ಪತ್ರಗಳಿಗೆ ಸಹಿ ಹಾಕುವಂತೆ ಒತ್ತಾಯಿಸಿದರು, ಅದನ್ನ ವಿರೋಧಿಸಿದಾಗ ದುಷ್ಕರ್ಮಿಗಳು ಕಚೇರಿಯ ಡ್ರಾಯರ್‌ನಲ್ಲಿಟ್ಟಿದ್ದ 63,000 ರೂ. ನಗದನ್ನೂ ದೋಚಿಕೊಂಡು ಹೋಗಿದ್ದಾರೆ ಎಂದು ತಮ್ಮ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ದೂರನ್ನು ಪರಿಶೀಲಿಸಿದ ಅಲ್ಮೋರಾ ಕೋರ್ಟ್‌ನ ಮ್ಯಾಜಿಸ್ಟ್ರೇಟ್ ಅವರ ಆದೇಶದ ಮೇರೆಗೆ ಗೋವಿಂದಪುರದ ಪೊಲೀಸ್ ಉಪನಿರೀಕ್ಷಕರು ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ ಎಂದು ಅಲ್ಮೋರಾದ ಜಿಲ್ಲಾ ಮ್ಯಾಜಿಸ್ಟ್ರೇಟ್ ವಿನಿತ್ ತೋಮರ್ ತಿಳಿಸಿದ್ದಾರೆ.

ಲೋಕಸಭಾ ಕ್ಷೇತ್ರದ ಬಿಜೆಪಿ, ಜೆಡಿಎಸ್ ಕಾರ್ಯಕರ್ತರ ಸಮನ್ವಯ ಸಭೆ

# ದೇಶದ ಉಳಿವಿಗೆ ಮೋದಿ ಬೆಂಬಲ: ಜಿ.ಟಿ.ದೇವೇಗೌಡ



**ಮೈಸೂರು:** ರಾಜಕೀಯವಾಗಿ ಎಚ್.ಡಿ.ಕೋಟೆ ತಾಲ್ಲೂಕು ಮಾಜಿ ಪ್ರಧಾನ ಮಂತ್ರಿ ಎಚ್.ಡಿ.ದೇವೇಗೌಡರಿಗೆ ಶಕ್ತಿ ಕೊಟ್ಟ ತಾಲ್ಲೂಕು. ಇದನ್ನು ತಾವು ಎಂದಿಗೂ ಮರೆಯುವುದಿಲ್ಲ ಎಂದು ಶಾಸಕ ಜಿ.ಟಿ.ದೇವೇಗೌಡ ತಿಳಿಸಿದರು

ಪಟ್ಟಣದ ಕನಕ ಭವನದಲ್ಲಿ ನಡೆದ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ಸಮನ್ವಯ ಸಭೆ ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ದೇಶ ಉಳಿಯಬೇಕಾದರೆ ಮೋದಿ ಮತ್ತೆ ಪ್ರಧಾನಿಯಾಗಬೇಕು ಎಂಬ ಉದ್ದೇಶದಿಂದ 92 ವರ್ಷದ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಬಿಜೆಪಿ ಬೆಂಬಲಿಸಿದ್ದಾರೆ. ಸಮಾನತೆ ಹಕ್ಕು ಕೊಡಬೇಕು ಎನ್ನುವ ಉದ್ದೇಶದಿಂದ ರಾಮನಾಥ್ ಕೋವಿಂದ್ ಮತ್ತು ಗಿರಿಜನ ಮಹಿಳೆಯನ್ನು ರಾಷ್ಟ್ರಪತಿ ಮಾಡಿದ್ದು, ಇದೇ ಬಿಜೆಪಿ ಪಕ್ಷ ಎಂದರು. ದೇಶದಲ್ಲಿ ಬಿಜೆಪಿ ಗೆದ್ದರೆ, ಸಂವಿಧಾನ ಬದಲಾವಣೆ ಮಾಡುತ್ತಾರೆ ಎನ್ನುತ್ತಾರೆ. ತುರ್ತು ಪರಿಸ್ಥಿತಿ ಹೇರಿದ ಸಂದರ್ಭದಲ್ಲಿ ಅಂದಿನ ಪ್ರಧಾನಿ ಇಂದಿರಾಗಾಂಧಿ ಸಂವಿಧಾನ ತಿದ್ದುಪಡಿ ಮಾಡಿದ್ದರು. ಇದನ್ನು ಮರೆ ಮಾಚಿದ ಕಾಂಗ್ರೆಸ್ ಪಕ್ಷವು, ಬಿಜೆಪಿ ಸಂವಿಧಾನ ತಿದ್ದುಪಡಿ ಮಾಡುತ್ತದೆ ಎಂದು ಸುಖಾಸುಮ್ಮನೇ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ದೂರಿದರು.

ಚುನಾವಣಾ ಉಸ್ತುವಾರಿ ಮತ್ತು ಮಾಜಿ ಶಾಸಕ ಪ್ರೀತಂಗೌಡ ಮಾತನಾಡಿ, ನಮ್ಮ ಮುಂದಿರುವುದು ದೇಶದ ಚುನಾವಣೆ. ಯಾವುದೋ ಪಂಚಾಯಿತಿ ಚುನಾವಣೆಯಲ್ಲ. ಹತ್ತು ಕೆಜಿ ಅಕ್ಕಿ ಕೊಡುತ್ತೇನೆ ಎಂದು ಹೇಳಿದ ಕಾಂಗ್ರೆಸ್, ಕೇಂದ್ರ ಸರ್ಕಾರ ಐದು ಕೆ.ಜಿ ಅಕ್ಕಿಯನ್ನು ತಾವು ಕೊಡುತ್ತಿರುವುದಾಗಿ ಬಿಂಬಿಸುತ್ತಿದೆ. ರಾಜ್ಯದಲ್ಲಿ 28ಕ್ಕೆ 28 ಸ್ಥಾನ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟ ಗೆಲ್ಲುವ ವಾತಾವರಣ ಸೃಷ್ಠಿಯಾಗಿದೆ ಎಂದರು. ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ಮಾತನಾಡಿ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಅಭ್ಯರ್ಥಿಗಳು 97 ಸಾವಿರ ಮತ ಪಡೆದಿದ್ದಾರೆ. ಈ ಚುನಾವಣೆಯಲ್ಲಿ ಎರಡೂ ಪಕ್ಷಗಳು ಒಟ್ಟಿಗೆ ಸೇರಿರುವುದರಿಂದ 1 ಲಕ್ಷಕ್ಕೂ ಹೆಚ್ಚು ಮತಗಳಿಸುವ ಅವಕಾಶ ಇದೆ. ಕಾರ್ಯಕರ್ತರು, ಯಾವುದೇ ಬೇರೆ ರೀತಿಯಲ್ಲಿ ಆಲೋಚನೆ ಮಾಡದೇ, ಲೋಕಸಭಾ ಬಿಜೆಪಿ ಅಭ್ಯರ್ಥಿ ಬಾಲರಾಜು ಅವರಿಗೆ ಮತ ಹಾಕಬೇಕು ಎಂದರು. ಬಿಜೆಪಿ ಮುಖಂಡ ಎಚ್.ಡಿ.ಕೋಟೆ ಬ್ಲಾಕ್ ಅಧ್ಯಕ್ಷ ಶಂಭೂಗೌಡ, ಗುರುಸ್ವಾಮಿ, ಜೆಡಿಎಸ್ ಪಕ್ಷದ ಎಚ್.ಡಿ.ಕೋಟೆ ಬ್ಲಾಕ್ ರಾಜೇಂದ್ರ, ಗೋಪಾಲಸ್ವಾಮಿ, ಬಿಜೆಪಿ ಎಸ್‌ಟಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಕೆ.ಎಂ.ಕೃಷ್ಣನಾಯಕ, ಟಿಎಪಿಸಿಎಂಎಸ್ ಅಧ್ಯಕ್ಷ ಮೊತ್ತ ಬಸವರಾಜಪ್ಪ, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ, ಮುಖಂಡ ಜಯಪ್ರಕಾಶ್ ಚಿಕ್ಕಣ್ಣ ಇದ್ದರು.

## ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಗುರುಪಾದಸ್ವಾಮಿ ಬಿಜೆಪಿ ಸೇರ್ಪಡೆ

**ಮೈಸೂರು:** ಪ್ರಧಾನಿ ನರೇಂದ್ರ ಮೋದಿ ಏ.14ರಂದು ಸಂಜೆ 4ಕ್ಕೆ ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ಬೃಹತ್ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು-ಕೊಡಗು, ಮಂಡ್ಯ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯ ಲಕ್ಷಾಂತರ ಮತದಾರರು ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು.

ಎನ್‌ಡಿಎ ಮೈತ್ರಿಕೂಟದ ಮಂಡ್ಯ ಅಭ್ಯರ್ಥಿ ಎಚ್.ಡಿ. ಕುಮಾರಸ್ವಾಮಿ, ಪಕ್ಷದ ನಾಯಕ ಬಿ.ಎಸ್. ಯಡಿಯೂರಪ್ಪ ಸೇರಿದಂತೆ ಹಲವು ನಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಮೂರು ಕ್ಷೇತ್ರದಲ್ಲಿ ಈಗಾಗಲೇ ಎನ್‌ಡಿಎ ಅಭ್ಯರ್ಥಿಗಳು ಗೆಲ್ಲುವ ವಾತಾವರಣ ನಿರ್ಮಾಣವಾಗಿದೆ. ಮೋದಿ ಭೇಟಿ ಗೆಲುವಿನ ಅಂತರ ಹೆಚ್ಚಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನ ಗ್ಯಾರಂಟಿ ಯೋಜನೆಗಳು ಚುನಾವಣೆಯಲ್ಲಿ ಯಾವುದೇ ಪರಿಣಾಮ ಬೀರುವುದಿಲ್ಲ. ಸರ್ಕಾರ ಒಂದು ಕೈಯಲ್ಲಿ ಕೊಟ್ಟು ಇನ್ನೊಂದು ಕೈಯಲ್ಲಿ ಕಸಿಯುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಅಭಿವೃದ್ಧಿ ಶೂನ್ಯವಾಗಿದೆ. ಕಿಸಾನ್ ಸಮ್ಮಾನ್ ಯೋಜನೆ ಹಣ ಬಂದ್ ಮಾಡಿದೆ. ಸ್ಕಾಲರ್‌ಶಿಪ್ ನಿಲ್ಲಿಸಿದೆ. ಹಾಲು? ವಿದ್ಯುತ್ ದರ ಹೆಚ್ಚಿಸಿದೆ. ಹೊಲಕ್ಕೆ ವಿದ್ಯುತ್ ಪರಿವರ್ತಕ ಹಾಕಿಸಿಕೊಳ್ಳಲು ರೈತರು 3 ಲಕ್ಷ ಕಟ್ಟಬೇಕಿದೆ ಎಂದು ಟೀಕಿಸಿದರು.

### ವೇದಿಕೆ ನಿರ್ಮಾಣಕ್ಕೆ ಚಾಲನೆ

ಪ್ರಧಾನಿ ಭೇಟಿ ಹಿನ್ನೆಲೆಯಲ್ಲಿ ಮಹಾರಾಜ ಕಾಲೇಜು ಮೈದಾನದಲ್ಲಿ ಬೃಹತ್ ವೇದಿಕೆ ನಿರ್ಮಾಣಕ್ಕೆ ಪಕ್ಷದ ನಗರ ಘಟಕದ ಅಧ್ಯಕ್ಷ ಎಲ್. ನಾಗೇಂದ್ರ, ಗುರುವಾರ ಚಾಲನೆ ನೀಡಿದರು. ಮೈಸೂರು?ಕೊಡಗು ಕ್ಷೇತ್ರದ ಬಿಜೆಪಿ ಸಹ ಉಸ್ತುವಾರಿ ಪ್ರೀತಂ ಗೌಡ ಗೈರಾದರು. ಒಂದು ಲಕ್ಷಕ್ಕೂ ಅಧಿಕ ಮಂದಿ ಈ ಸಮಾವೇಶದಲ್ಲಿ ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ಪಕ್ಷದ ಮುಖಂಡರು ತಿಳಿಸಿದರು. ಎಸ್‌ಪಿಜಿ ಅಧಿಕಾರಿಗಳು ನಗರದಲ್ಲಿ ಬೀಡು ಬಿಟ್ಟಿದ್ದು ಗುರುವಾರ ವೇದಿಕೆ ನಿರ್ಮಾಣ ಹಾಗೂ ಭದ್ರತೆಗೆ ಕೈಗೊಂಡ ಸಿದ್ಧತೆಗಳನ್ನು ಪರಿಶೀಲಿಸಿದರು.

ಇದೇ ಸಂದರ್ಭ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಗುರುಪಾದಸ್ವಾಮಿ ತಮ್ಮ ಬೆಂಬಲಿಗರೊಂದಿಗೆ ಬಿಜೆಪಿಗೆ ಸೇರಿದರು.

ಶಾಸಕ ಟಿ.ಎಸ್.ಶ್ರೀವತ್ಸ, ಚಾಮರಾಜನಗರ ಕ್ಷೇತ್ರದ ಅಭ್ಯರ್ಥಿ ಬಾಲರಾಜ್, ಪಕ್ಷದ ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಜಿಲ್ಲಾ ಗ್ರಾಮಾಂತರ ಘಟಕದ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ನಗರ ಘಟಕದ ಅಧ್ಯಕ್ಷ ನಾಗೇಂದ್ರ, ಹಾಗೂ ಪಕ್ಷದ ಮುಖಂಡರು ಜೊತೆಗಿದ್ದರು.



## ಮಹಾರಾಷ್ಟ್ರದ ಮತದಾರರಿಗೆ ವೇತನ ಸಹಿತ ರಜೆ ಘೋಷಣೆ

**ಬೆಂಗಳೂರು:** ಮಹಾರಾಷ್ಟ್ರ ರಾಜ್ಯದ ಲೋಕಸಭೆಗೆ ಸಾರ್ವತ್ರಿಕ ಚುನಾವಣೆ ಘೋಷಣೆಯಾಗಿದ್ದು, ದಿನಾಂಕ:26.04.2024ರ ಶುಕ್ರವಾರದಂದು ಮತದಾನ ನಡೆಯಲಿದೆ. ಮಹಾರಾಷ್ಟ್ರ ರಾಜ್ಯವು ಕರ್ನಾಟಕ ರಾಜ್ಯದ ನೆರೆ ರಾಜ್ಯವಾಗಿರುವುದರಿಂದ ಮಹಾರಾಷ್ಟ್ರ ರಾಜ್ಯದಲ್ಲಿ ಮತದಾರರಾಗಿರುವವರು ಕರ್ನಾಟಕ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾಧ್ಯತೆ ಇರುವುದರಿಂದ ಅಂತಹ ಮತದಾರರಿಗೆ ಮತದಾನದ ದಿನಾಂಕದಂದು ಬೀದರ್ ಜಿಲ್ಲೆಯಲ್ಲಿನ ಕೈಗಾರಿಕೆಗಳು, ಕಾರ್ಖಾನೆಗಳು ಹಾಗೂ ಇನ್ನಿತರೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಾರಾಷ್ಟ್ರ ರಾಜ್ಯದ ಮತದಾರರಿಗೆ ಮಾತ್ರ ಸೀಮಿತವಾಗಿ ಮತದಾನ ಮಾಡಲು ಅನುಕೂಲವಾಗುವಂತೆ Representation of People's Act, 1951ರ ಸೆಕ್ಷನ್-135ಬಿ ಅಡಿಯಲ್ಲಿ ವೇತನ ಸಹಿತ ರಜೆಯನ್ನು ಘೋಷಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮುಸ್ಲಿಂ ಬಾಂಧವರಿಂದ ಸಂಭ್ರಮದ ರಂಜಾನ್ ಆಚರಣೆ

**ಪಿರಿಯಾಪಟ್ಟಣ:** ಪಟ್ಟಣದ ಜಿನ್ನಾ ತುಲ್ ಪಿರ್ದೋಷ ಮಸೀದಿಯಲ್ಲಿ ಈದುಲ್ ಫಿತರ್ ಸಮಾಜದವರು ರಂಜಾನ್ ಹಬ್ಬದ ಪ್ರಯುಕ್ತ ವಿಶೇಷ ಪ್ರಾರ್ಥನೆ ನೆರವೇರಿತು.
ಅನೇಕ ವರ್ಷಗಳಿಂದ ನಡೆದುಕೊಂಡು ಬಂದಂತಹ ಸೂಫಿ ಸಂತ ಪದ್ದತಿಯ ಅಹಲೆಸುನ್ನತ್ ವಲ್ಲ ಪ್ರಕಾರ ಪ್ರಾರ್ಥನೆ ಸಲ್ಲಿಸಲಾಯಿತು. ಹಬ್ಬದಲ್ಲಿ ವ್ರತದಾರಿಗಳು ಪ್ರಾರ್ಥನೆಯ ಬಳಿಕ ಪರಸ್ಪರ ಆಲಂಗಿಸಿಕೊಂಡು ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಬುಧವಾರ ಸಂಜೆ ಚಂದ್ರ ದರ್ಶನವಾಗುತ್ತಿದ್ದಂತೆ ಗುವಾರ ರಂಜಾನ್ ಆಚರಣೆಗಾಗಿ ನಿರ್ಧಾರ ಕೈಗೊಂಡರು. ತಾಲೂಕಿನ ಎಲ್ಲಾ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ, ಪರಸ್ಪರ ಶುಭಾಶಯ ವಿನಿಮಯ ನಡೆಯಿತು. ಮಧ್ಯಾಹ್ನ ವಿಶೇಷ ಖಾದ್ಯವಾದ ಸುರಕುರಮಾ ಸವಿದು ಹಬ್ಬ ಆಚರಿಸಿದರು. ಮೌಲ್ವಿಗಳು ಶಾಂತಿ, ಸಮೃದ್ಧಿ, ಉತ್ತಮ ಮಳೆ ಹಾಗೂ ಬೆಳೆಗಾಗಿ ಬೇಡಿಕೊಂಡರು. ಬಡವರ ಮನೆಗಳಿಗೆ ತೆರಳಿದ ಜನರು ಬಟ್ಟೆ, ಹಣ ನೀಡಿ ಹಬ್ಬದ ಶುಭಾಶಯ ಕೋರಿದರು. ಪ್ರಾರ್ಥನೆ ನಂತರ ನಾನಾ ಧರ್ಮೀಯರಿಗೆ ಶುಭ ಕೋರಿದ ಮುಸ್ಲಿಂ ಸಮುದಾಯದವರು ಅಪ್ಪುಗೆಯ ಮೂಲಕ ಈದ್ ಮುಬಾರಕ್ ಎಂದರು. ಈ ಸಂದರ್ಭದಲ್ಲಿ ಮಸೀದಿಯ ಧರ್ಮ ಗುರುಗಳಾದ ಮೌಲಾನ ಲಾಯಿಕ ಅಹಮದ್ ಅವರ ನೇತೃತ್ವದಲ್ಲಿ ವಿಶೇಷ ನಮಾಝ್ ನಿರ್ವಹಿಸಿದ ಬಳಿಕ ಧಾರ್ಮಿಕ ಪ್ರವಚನ ನೀಡಲಾಯಿತು. ಈ ಸಂದರ್ಭದಲ್ಲಿ ಮಸೀದಿ ಅಧ್ಯಕ್ಷರಾದ ಗಫಾರ್ ಅಹಮದ್ ಅವರು ವಿಶೇಷ ನಮಾಝ್ ಬಗ್ಗೆ ಮಾಹಿತಿ ನೀಡಿದರು. ಪ್ರಾರ್ಥನೆಯಲ್ಲಿ ಮಸೀದಿ ಉಪಾಧ್ಯಕ್ಷ ಸೈಯದ್ ಅನ್ಸಾರ್, ಕಾರ್ಯದರ್ಶಿ ಮಹಮ್ಮದ್ ಅತಮಲ, ಮುಖಂಡರಾದ ನೌಪಿವುಲ್ಲಾ, ನೌಷಾದ್, ಮಹಮದ್ ರಜಾಕ್, ಜಾವೀದ್ ಖಾನ್, ಗೌಸ್ ಬೈ ಸೇರಿದಂತೆ ಉಪಸ್ಥಿತರಿದ್ದರು.



## ಬಿಜೆಪಿ ಅಭ್ಯರ್ಥಿ ಬಾಲ್‌ರಾಜ್ ಪರ ಹರ್ಷವರ್ಧನ್ ಮತಯಾಚನೆ

**ಮೈಸೂರು :** ನಂಜನಗೂಡು ಮುಂಬರುವ ಚಾಮರಾಜನಗರ ಜಿಲ್ಲೆ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿ ಬಾಲ್ ರಾಜ್ ಪರ ಪಟ್ಟಣದಲ್ಲಿ ಮಾಜಿ ಶಾಸಕ ಹರ್ಷವರ್ಧನ್ ಮತ್ತು ಪಟ್ಟಣದ ಅಧ್ಯಕ್ಷ ಸಿದ್ದರಾಜು ನೇತೃತ್ವದಲ್ಲಿ ನೂರಾರು ಮುಖಂಡರು ಅಧ್ಯಕ್ಷರು ಮಾಜಿ ಅಧ್ಯಕ್ಷರು ಮಂಡಲ ಅಧ್ಯಕ್ಷರು ಒಬಿಸಿ ಅಧ್ಯಕ್ಷರು ಭಾಗವಹಿಸಿ ಬಿಜೆಪಿ ಅಭ್ಯರ್ಥಿ ಬಾಲ್ ರಾಜ್ ಪರ ಅಂಗಡಿಗಳಲ್ಲಿ ಮತ್ತು ಒಕ್ಕಲಗೇರಿ ಬಡಾವಣೆ ಚಾಮಲಾಪುರ ಬೀದಿ ಮುಡಿಕಟ್ಟೆ ರಾಜಾಜಿ ಕಾಲೋನಿ, ಸರಸ್ವತಿ ಕಾಲೋನಿ ಕಾಯಿ ಅಂಗಡಿ ಬೀದಿ ಸೇರಿದಂತೆ ದೇವಸ್ಥಾನದ ಹಿಂಭಾಗದ ಅಂಗಡಿಗಳಲ್ಲಿ ಮತ್ತು ಬಡಾವಣೆಗಳ ಮುಖಂಡರ ಮನೆಗಳಿಗೆ ತೆರಳಿ ಮತಯಾಚನೆ ಮಾಡಿದರು

ಶ್ರೀ ಗುರು ರಾಘವೇಂದ್ರ ದರ್ಶನ ಪಡೆದು ಮುಂದುವರೆದು ಮಾತನಾಡಿದ ಮಾಜಿ ಶಾಸಕ ಹರ್ಷವರ್ಧನ್ ಚಾಮರಾಜನಗರ ಜಿಲ್ಲೆ ವಿಧಾನಸಭಾ ಚುನಾವಣೆಯಲ್ಲಿ ಈ ಬಾರಿ ಬಿಜೆಪಿ ಪಕ್ಷದ ಅಭ್ಯರ್ಥಿ ಬಾಲ್ ರಾಜ್ ಗೆಲ್ಲುವ ಎಲ್ಲಾ ವಾತಾವರಣ ಇದೆ ನಮ್ಮ ಪಕ್ಷದಿಂದ ಒಳ್ಳೆಯ ಉತ್ತಮ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದೇವೆ ಇವರು ಕೂಡ ಒಂದು ಬಾರಿ ಶಾಸಕರಾಗಿ ಉತ್ತಮ ಕೆಲಸ ಮಾಡಿದ್ದಾರೆ ಅಧಿಕಾರ ಇದ್ದರೂ ಇಲ್ಲದಿದ್ದರೂ ಜನಗಳ ಜೊತೆ ಇವರ ಒಡನಾಟ ಇದೆ ಕೇಂದ್ರದಲ್ಲಿ ನರೇಂದ್ರ ಮೋದಿಜಿ ಅವರು ಹತ್ತು ವರ್ಷಗಳ ಅಧಿಕಾರದಲ್ಲಿ ಉತ್ತಮ ಕೆಲಸ ಮಾಡಿದ್ದಾರೆ ಮತ್ತೆ ಚಾಮರಾಜನಗರ ಜಿಲ್ಲೆ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಜಯಬೇರಿ ಬಾರಿಸುತ್ತಾರೆ ಅದರಿಂದ ಪ್ರತಿಯೊಂದು ಕ್ಷೇತ್ರದಲ್ಲೂ ಕೂಡ ಒಗ್ಗಟ್ಟಿನ ಪ್ರದರ್ಶನ ತೋರಿಸಿ ಕೇಂದ್ರದಲ್ಲಿ ಮತ್ತೆ ನರೇಂದ್ರ ಮೋದಿಜಿ ಪ್ರಮಾಣವಚನ ಸ್ವೀಕರಿಸಬೇಕಾದರೆ ಈ ಭಾಗದಿಂದ ಬಾಲರಾಜ್ ಅವರನ್ನು ಅತ್ಯಧಿಕ ಮತದಿಂದ ಗೆಲ್ಲಿಸಿ ಕಳಿಸೋಣ ಎಂದು ಹೇಳಿದರು

ಪಟ್ಟಣ ಅಧ್ಯಕ್ಷ ಸಿದ್ದರಾಜು ಮಾತನಾಡಿ ನರೇಂದ್ರ ಮೋದಿಜಿ ಅವರ ಆಡಳಿತ ಅವಧಿಯಲ್ಲಿ ಅವರು ಮಾಡಿದ ಕಾರ್ಯ ವೈಖರಿಗಳನ್ನು ಮೆಚ್ಚಿ ಚಾಮರಾಜನಗರ ಜಿಲ್ಲೆ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಅಲೆ ಎದ್ದಿದೆ ಇದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಪಟ್ಟಣದ ಎಲ್ಲಾ ಮುಖಂಡರು ಸೇರಿ ಈ ಬಾರಿ ಹೆಚ್ಚಿನ ಲೀಡ್ ಕೊಡುತ್ತೇವೆ ಎಂದರು

ಈ ಸಂದರ್ಭದಲ್ಲಿ ಕೃಷ್ಣಪ್ಪಗೌಡ ಚಿಕ್ಕರಂಗನಾಯಕ ದೇವ ರಸನಹಳ್ಳಿ ಗ್ರಾಮ ಪಂಚಾಯತಿ ಸದಸ್ಯ ಗೋವರ್ಧನ್ ನಗರಸಭೆ ಸದಸ್ಯ ಕಪಿಲೇಶ್ ಮಾದೇವ ಪ್ರಸಾದ್ ಮುಖಂಡರಾದ ಬಾಲ್ ಚಂದ್ರ, ಅವಿನಾಶ್ ಗೌಡ ಶಂಕ್ರಪ್ಪ ಮಹೇಶ್ ಕೃಷ್ಣ ರಾಘವೇಂದ್ರ, ಸೇರಿದಂತೆ ಇತರರಿದ್ದರು.



ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿಕೆ

## ಆಡಳಿತ ಪರ ಅಲೆ ನೋಡುತ್ತಿದ್ದೇವೆ

**ಚಾಮರಾಜನಗರ:** 10 ವರ್ಷಗಳ ನರೇಂದ್ರಮೋದಿ ಆಡಳಿತ ವೈಖರಿಗೆ ಜನರು ಮೆಚ್ಚಿದ್ದು 10 ವರ್ಷಗಳ ನಂತರವೂ ಕೂಡ ಆಡಳಿತ ವಿರೋಧಿ ಅಲೆಯ ಬದಲಾಗಿ ಆಡಳಿತ ಪರ ಅಲೆ ನೋಡುತ್ತಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ರೋಟರಿ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನರೇಂದ್ರಮೋದಿ ಅವರು ನುಡಿದಂತೆ ನಡೆದ ಪ್ರಧಾನಿಯಾಗಿದ್ದಾರೆ. 2047ರ ವೇಳೆ ಭಾರತ ಅಭಿವೃದ್ಧಿ ದೇಶವಾಗುವ ನಿಟ್ಟಿನಲ್ಲಿ ಸಂಕಲ್ಪ ಇಟ್ಟುಕೊಂಡಿದ್ದಾರೆ. ಬಿಜೆಪಿ, ಜೆಡಿಎಸ್ ರಾಜ್ಯದಲ್ಲಿ ಒಗ್ಗಟ್ಟಿನಿಂದ ಚುನಾವಣೆಯನ್ನು ಎದುರಿಸುತ್ತಿದ್ದು ಇದರಲ್ಲಿ ದೇಶದ ಹಿತದೃಷ್ಟಿ ಬಿಟ್ಟರೆ ಬೇರೆ ಯಾವುದೇ ಸ್ವಾರ್ಥವಿಲ್ಲ.

ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 10 ತಿಂಗಳು ಕಳೆದಿದೆ. ಅಧಿಕಾರದ ಅಮಲಿನಲ್ಲಿ ತೇಲುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ದಿನೇ ದಿನೇ ಕಳೆದಂತೆ ಜ್ಞಾನೋದಯವಾಗುತ್ತಿದೆ. ರಾಜ್ಯದ ಮುಖ್ಯಮಂತ್ರಿಗಳಿಗೆ ಸತ್ಯತ ಅರಿವಾಗುತ್ತಿದೆ. ಅಧಿಕಾರಕ್ಕೆ ಬಂದು 10 ತಿಂಗಳಲ್ಲಿ ಗ್ಯಾರಂಟಿಗಳ ಬಗ್ಗೆ ಪ್ರಚಾರವನ್ನು ತೆಗೆದುಕೊಳ್ಳುತ್ತಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ಪಿಎಂ ಕಿಸಾನ್ ಸಮ್ಮಾನ್ ಯೋಜನೆಯಡಿ ಯಡಿಯೂರಪ್ಪ ಅವರು ರೈತರಿಗೆ ನೀಡುತ್ತಿದ್ದ 4 ಸಾವಿರ ರೂ. ಗಳನ್ನು ತಡೆ ಹಿಡಿಯುವ ಕೆಲಸ ಮಾಡಿದೆ.

ಬಸವರಾಜಬೊಮ್ಮಾಯಿ ಸಿಎಂ ಆಗಿದ್ದಾಗ ರೈತರ ಮಕ್ಕಳಿಗೆ ಅನುಕೂಲ ಕಲ್ಪಿಸುವ



ನಿಟ್ಟಿನಲ್ಲಿ ವಿದ್ಯಾಸಿರಿ ಯೋಜನೆಯನ್ನು ಜಾರಿಗೆ ತರಲಾಗಿತ್ತು. ಇದಕ್ಕೂ ಕೂಡ ಕಲ್ಲು ಹಾಕುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡಿದೆ. ಹಾಲಿನ ದರ ಜಾಸ್ತಿ ಮಾಡುತ್ತಿದ್ದಾರೆ. ಬಿಜೆಪಿ ಸರ್ಕಾರ ಇದ್ದಾಗ ಹೈನುಗಾರಿಕೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ 3 ರೂ. ಪ್ರೋತ್ಸಾಹಧನ ನೀಡಲಾಗುತ್ತಿತ್ತು. ಅದರ ನಂತರ 5 ರೂ. ಆಯಿತು. ಕಾಂಗ್ರೆಸ್ ಸರ್ಕಾರ ಬಂದಾಗ 670 ಕೋಟಿ ಬಾಕಿ ಉಳಿಸಿಕೊಂಡಿದ್ದಾರೆ. ಅಲ್ಲದೇ ಹೈನುಗಾರಿಕೆ ಪ್ರೋತ್ಸಾಹಧನ ಕೂಡ ತಡೆ ಹಿಡಿಯಲಾಗಿದೆ. ಶಾಲಾ ಕಾಲೇಜು ಮಕ್ಕಳಿಗೆ ಸ್ಕಾಲರ್ ಶಿಪ್ ಕೂಡ ನಿಲ್ಲಿಸಿದ್ದಾರೆ. ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದಾಗ ಎಲ್ಲ ಸಮಾಜಗಳ ಅಭಿವೃದ್ಧಿ

ನಿಗಮಗಳಾಗಿತ್ತು. ಅನುದಾನವನ್ನು ದ್ವಿಗುಣ ಮಾಡುತ್ತಾರೆ ಎಂಬ ಭಾವನೆ ಇತ್ತು. ಆದರೆ, ಬಿಜೆಪಿ ಸರ್ಕಾರ ನೀಡಿದ್ದ ಅನುದಾನವನ್ನು ಕಡಿತಗೊಳಿಸಿದ್ದಾರೆ. ತೆರಿಗೆ, ವಿದ್ಯುತ್ ದರ ಜಾಸ್ತಿ ಮಾಡಲಾಗಿದೆ. ಶೇ.30 ಬಸ್ ಟಿಕೆಟ್ ದರ ಕೂಡ ಏರಿಕೆ ಮಾಡಲಾಗಿದೆ. ರೈತ ಟಿಸಿ ಅಳವಡಿಸಿಕೊಳ್ಳಲು 3 ಲಕ್ಷ ರೂ. ಕಟ್ಟಬೇಕಿದೆ. ಬಜೆಟ್‌ನಲ್ಲಿ ಇಟ್ಟಿದ್ದ ಎಸ್‌ಇಪಿ, ಟಿಎಸ್‌ಪಿ ಅನುದಾನವನ್ನು ವರ್ಗಾವಣೆ ಮಾಡಲಾಗಿದೆ. 24 ಸಾವಿರ ಕೋಟಿ ಗ್ಯಾರಂಟಿಗಳಿಗೆ ವರ್ಗಾವಣೆ ಮಾಡಿದ್ದಾರೆ ಎಂದು ದೂರಿದರು.

ಇದೇ ಸಂದರ್ಭದಲ್ಲಿ ಬಿ.ವೈ.ವಿಜಯೇಂದ್ರ ಅವರು ಕೊಳ್ಳೇಗಾಲ ಹಾಗೂ ಹನೂರು ಪಟ್ಟಣಗಳಲ್ಲಿ ಬೃಹತ್ ರೋಡ್ ಷೋ ನಡೆಸಿ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್ ಪರ ಮತ ಪ್ರಚಾರ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜ್, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್, ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್, ಹನೂರು ಶಾಸಕ ಎಂ.ಆರ್.ಮಂಜುನಾಥ್, ಪ್ರೊ.ಕೆ.ಆರ್. ಮಲ್ಲಿಕಾರ್ಜುನಪ್ಪ ಸೇರಿದಂತೆ ಇತರರಿದ್ದರು.

## ಸಂಭ್ರಮದ ರಂಜಾನ್ ಆಚರಣೆ

**ಹುಳಿಯಾರು:** ಮುಸ್ಲಿಂರ ಪ್ರಮುಖ ಹಬ್ಬಗಳಲ್ಲಿ ಒಂದಾಗಿರುವ ಈದ್-ಉಲ್-ಫಿತರ್(ರಂಜಾನ್) ಹಬ್ಬವನ್ನು ಗುರುವಾರದಂದು ಪಟ್ಟಣದ ಮುಸ್ಲಿಂ ಬಾಂಧವರು ಸಡಗರ ಸಂಭ್ರಮದಿಂದ ಆಚರಿಸುವ ಮೂಲಕ ಕಳೆದ ಒಂದು ತಿಂಗಳ ಉಪವಾಸಕ್ಕೆ ಅಂತ್ಯ ಹಾಡಿದ್ದಾರೆ. ಸುಗಂಧದ್ರವ್ಯ ಲೇಪಿತ ಹೊಸಬಟ್ಟೆಗಳನ್ನು ತೊಟ್ಟ ಮುಸ್ಲಿಂ ಸಮುದಾಯದವರು ಪಟ್ಟಣದ ಜಾಮೀಯಾ, ಸೂರಾನಿ, ಮದೀನಾ ಮಸೀದಿಯಲ್ಲಿ ಪ್ರಾರ್ಥನೆ ನಡೆಸಿದರು. ನಂತರ ಧರ್ಮಗುರುಗಳೊಂದಿಗೆ ಈದ್ಗಾ ಮೈದಾನಕ್ಕೆ ಆಗಮಿಸಿ ನಮಾಜ್ ಮಾಡಿ, ಒಬ್ಬರಿಗೊಬ್ಬರು ಅಪ್ಪಿಕೊಳ್ಳುವ ಮೂಲಕ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಶಾಸಕ ಸಿ.ಬಿ.ಸುರೇಶ್‌ಬಾಬು ಅವರು ಈದ್ಗಾ ಮೈದಾನಕ್ಕೆ ಆಗಮಿಸಿ ಶುಭ ಕೋರಿದರು. ಧರ್ಮಗುರು ಮಾತನಾಡಿ ಮಹಮದ್ ಪೈಗಂಬರರರ ನೆನಪಾಗಿ ಹಾಗೂ ತ್ಯಾಗ, ದಾನದ ಸಂಕೇತವಾಗಿ ಹಬ್ಬದ ಅಚರಣೆ ನಡೆದುಕೊಂಡು ಬಂದಿದೆ ಎಂದರು. ಶ್ರೀಮಂತರು, ಬಡವರೆನ್ನುವ ಭೇದಭಾವವಿಲ್ಲದೆ ಒಂದು ತಿಂಗಳಕಾಲ ಉಪವಾಸ ವ್ರತಾಚರಣೆ ಮಾಡುತ್ತಾ ಅಲ್ಲಾನನ್ನು ಸ್ಮರಿಸಿರುವುದಾಗಿ ತಿಳಿಸಿದರು. ರಂಜಾನ್ ದಾನದ ಹಬ್ಬವಾಗಿದ್ದು ಉಳ್ಳವರು ಇಲ್ಲದವರಿಗೆ ತಮ್ಮ ಕೈಕೆಲಾದ ಬಟ್ಟೆ, ಪಾತ್ರೆ ಸೇರಿದಂತೆ ಇನ್ನಿತರ ವಸ್ತುಗಳನ್ನು ದಾನ ಮಾಡುತ್ತಾರೆ ಎಂದರು. ದೊಡ್ಡವರು, ಪುಟ್ಟಪುಟ್ಟ ಮಕ್ಕಳು ಹೊಸಬಟ್ಟೆ ತೊಟ್ಟು ಹಬ್ಬ ಶುಭಾಶಯ ಹಂಚಿಕೊಂಡರೆ, ಮನೆಯ ಮಹಿಳೆಯರು ಬಗೆಬಗೆಯ ಖಾದ್ಯಗಳನ್ನು ಸಿದ್ದಪಡಿಸಿದ್ದರು. ಪ್ರಾರ್ಥನೆ ಮುಗಿಸಿದ ನಂತರ ಸ್ನೇಹಿತರೊಂದಿಗೆ ಮನೆಮಂದಿಯೆಲ್ಲಾ ಸೇರಿ ಊಟ ಮಾಡುವ ಮೂಲಕ ಸಡಗರ ಸಂಭ್ರಮದಿಂದ ರಂಜಾನ್ ಆಚರಣೆ ನಡೆಸಿದರು.



## ಬಾಲಕಿಯರ ಸಕಾರಿ ಕಾಲೇಜಿಗೆ ಶೇ.90 ಫಲಿತಾಂಶ

**ಹುಳಿಯಾರು:** ಮಾರ್ಚ್-2024 ರಲ್ಲಿ ನಡೆದ ದ್ವಿತೀಯ ಪಿ.ಯೂ.ಸಿ. ಪರೀಕ್ಷೆಯ ಫಲಿತಾಂಶ ಹೊರಬಿದಿದ್ದು ಹುಳಿಯಾರಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಶೇ.90 ಫಲಿತಾಂಶ ಲಭಿಸಿದೆ.





ಕಲಾ ವಿಭಾಗದಲ್ಲಿ 30 ಮಂದಿ ಪರೀಕ್ಷೆ ಬರೆದಿದ್ದು 26 ಮಂದಿ ಉತ್ತೀರ್ಣರಾಗಿ ಶೇ.87 ಫಲಿತಾಂಶ ಬಂದಿದೆ. ಇದರಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ 4 ಮಂದಿ, ಪ್ರಥಮ ಶ್ರೇಣಿಯಲ್ಲಿ 11 ಮಂದಿ, ದ್ವಿತೀಯ ಶ್ರೇಣಿಯಲ್ಲಿ 4 ಮಂದಿ, ತೃತೀಯ ಶ್ರೇಣಿಯಲ್ಲಿ 7 ಮಂದಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ 39 ಮಂದಿ ಪರೀಕ್ಷೆ ಬರೆದಿದ್ದು 36 ಮಂದಿ ಉತ್ತೀರ್ಣರಾಗುವ ಮೂಲಕ ಶೇ.92 ಫಲಿತಾಂಶ ಬಂದಿದೆ. ಇದರಲ್ಲಿ 7 ಮಂದಿ ಅತ್ಯುನ್ನತ ಶ್ರೇಣ, 24 ಮಂದಿ ಪ್ರಥಮ, 5 ಮಂದಿ ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಕಲಾ ವಿಭಾಗದಲ್ಲಿ ವೈ.ಬಿ.ರಂಜಿತ (572), ಜಿ.ಆರ್.ಗಾಯಿತ್ರಿ (542), ಕಾವ್ಯ (518), ಬಿ.ಕೆ.ರಮ್ಯ (511), ಎಚ್.ಆರ್. ಶ್ವೇತ (507), ವೈ.ಜೆ.ಚಂದನ (505) ಡಿಸ್ಟಿಂಕ್ಷನ್ ನಲ್ಲಿ ಪಾಸಾದ ವಿದ್ಯಾರ್ಥಿಗಳಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಸಿ.ಎಲ್.ಚೈತ್ರ (577), ಬಿ.ಎಸ್.ಚಂದನ (570), ಕೆ.ವಿ.ಪಲ್ಲವಿ (557), ಟಿ.ಜಿ.ತಾರಾ (551), ಆಲ್ಮಾಸ್ ಬಾನು (543), ವೈ.ಉಮಾ (520), ಭವ್ಯ (515), ವಿ.ಅಂಜು (506), ತ್ರಿಶಾರಮೇಶ್ (500) ಡಿಸ್ಟಿಂಕ್ಷನ್‌ನಲ್ಲಿ ಪಾಸಾದ ವಿದ್ಯಾರ್ಥಿಗಳಾಗಿದ್ದಾರೆ. ಕಲಾ ವಿಭಾಗದಲ್ಲಿ ವೈ.ಬಿ.ರಂಜಿತಾ ಎಂಬ ವಿದ್ಯಾರ್ಥಿನಿ ಇತಿಹಾಸ ವಿಷಯದಲ್ಲಿ ನೂರಕ್ಕೆ ನೂರು ಅಂಕಗಳನ್ನು ಪಡೆದು ವೈಯಕ್ತಿಕ ಸಾಧನೆ ಮಾಡಿದ್ದಾರೆ.

ಬಿಜೆಪಿ ರಾಷ್ಟ್ರೀಯ ಮುಖಂಡ ಇಲಿಯಾಸ್ ಅಹಮದ್ ಅಭಿಪ್ರಾಯ

# ಮುಸ್ಲಿಮರು ಮೈಸೂರು ಅರಸರ ಕೊಡುಗೆಗಳ ಫಲಾಭವಿಗಳು

**ಮೈಸೂರು :** ಮುಸ್ಲಿಂ ಸಮುದಾಯವು ಮೈಸೂರು ಅರಸರು ಈ ನಾಡಿಗೆ ನೀಡಿದ ಹತ್ತು ಹಲವಾರು ಕೊಡುಗೆಗಳ ಫಲಾನುಭವಿಗಳಾಗಿದ್ದು, ಲೋಕಸಭಾ ಚುನಾವಣೆಯಲ್ಲಿ ರಾಜವಂಶಸ್ಥರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಬೆಂಬಲ ನೀಡಬೇಕಿದೆ ಎಂದು ಬಿಜೆಪಿಯ ಹಿರಿಯ ಮುಖಂಡರಾದ ಇಲಿಯಾಸ್ ಅಹಮದ್ ಹೇಳಿದರು.

ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಆಳ್ವಿಕೆಯಲ್ಲಿ ಸರ್ ಮಿರ್ಜಾ ಇಸ್ಮಾಯಿಲ್ ಅವರನ್ನು ದಿವಾನರನ್ನಾಗಿ ಮಾಡಿಕೊಂಡಿದ್ದು ಅಂದಿನ ಕಾಲದಲ್ಲಿ ಮುಸ್ಲಿಂ ಸಮುದಾಯಕ್ಕೆ ಸಂದ ದೊಡ್ಡ ಗೌರವವಾಗಿದೆ. ಮೈಸೂರು ಅರಸರು ನಗರದಲ್ಲಿ ಮುಸ್ಲಿಂ ಸಮುದಾಯಕ್ಕೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ಅಲ್ಲದೇ ಕೆಆರ್‌ಎಸ್ ಅಣೆಕಟ್ಟು, ಕೆಆರ್ ಆಸ್ಪತ್ರೆ, ಮೈಸೂರು ವಿಶ್ವವಿದ್ಯಾಲಯ ಸೇರಿದಂತೆ ಹತ್ತು ಹಲವಾರು ಜನೋಪಯೋಗಿ ಕಾರ್ಯಗಳ ಫಲವನ್ನು ಮುಸ್ಲಿಂ ಸಮುದಾಯವೂ ಅನುಭವಿಸುತ್ತಿದೆ. ಹೀಗಾಗಿ ನಾವು ಯದುವೀರ್ ಅವರಿಗೆ ಬೇಷರತ್ ಬೆಂಬಲ ನೀಡುತ್ತಿದ್ದೇವೆ ಎಂದರು.

ಮೈಸೂರಿನ ಮುಸ್ಲಿಂ ಸಮುದಾಯದ ಜತೆ ರಾಜಮನೆತನದ ಸಂಬಂಧ ಇಂದಿಗೂ ಅತ್ಯಂತ ಸೌಹಾರ್ದವಾಗಿದೆ. ದಸರಾ ಸಂದರ್ಭ ಸೇರಿದಂತೆ ಅರಮನೆಯ ಹಲವಾರು ಕಾರ್ಯಕ್ರಮಗಳಲ್ಲಿ ಮುಸ್ಲಿಂ ಸಮುದಾಯದ ಕುಶಲ ಕರ್ಮಿಗಳು, ತಂತ್ರಜ್ಞರು, ಕಾರ್ಮಿಕರು ಇಂದಿಗೂ ಪಾಲ್ಗೊಳ್ಳುತ್ತಿದ್ದಾರೆ. ಹೀಗಾಗಿ ಈ ಲೋಕಸಭಾ ಚುನಾವಣೆಯಲ್ಲಿ ನಾವು ಅವರನ್ನು ಬೆಂಬಲಿಸಿ ಸಂಸತ್ತಿಗೆ ಆಯ್ಕೆ ಮಾಡುವುದು ಒಡೆಯರ್ ಕುಟುಂಬಕ್ಕೆ ಸಲ್ಲಿಸುವ ಅರ್ಥಪೂರ್ಣ ಕೊಡುಗೆ ಎಂದರು. ನಾವು ಮುಸ್ಲಿಂ ಮೊಹಲ್ಲಾಗಳಿಗೆ ತೆರಳಿ ಯದುವೀರ್ ಅವರ ಪರವಾಗಿ ಪ್ರಚಾರ ನಡೆಸುತ್ತೇವೆ. ಕಳೆದ ಚುನಾವಣೆಯಲ್ಲಿ ಶೇ.2 ರಷ್ಟು ಮುಸ್ಲಿಂ ಮತಗಳು ಬಿಜೆಪಿಗೆ ಬಂದಿದ್ದವು. ಈ ಬಾರಿ ಈ ಸಂಖ್ಯೆ ಹೆಚ್ಚಳವಾಗುತ್ತದೆ. ರಾಜಕೀಯಕ್ಕೆ ಬರುವ ವ್ಯಕ್ತಿಗಳು ಪ್ರತಿಷ್ಠೆಗೆ ಅಥವಾ ಹಣ ಮಾಡಲು ಬರುತ್ತಾರೆ ಎಂಬ ಮಾತು ಎಲ್ಲೆಡೆ ಕೇಳಿಬರುತ್ತಿರುವ ಇಂದಿನ ಕಾಲದಲ್ಲಿ ಯದುವೀರ್ ಅವರು ರಾಜವಂಶಸ್ಥರು, ಇವರಿಗೆ ಹಣ ಮಾಡುವುದು, ಅಧಿಕಾರ ಹಿಡಿಯುವುದು ಎಂಬ ಯಾವುದೇ ಆಸೆ ಆಕಾಂಕ್ಷೆ ಇಲ್ಲ. ಕೇವಲ ಜನಸೇವೆಗಾಗಿ ರಾಜಕೀಯಕ್ಕೆ ಬರುತ್ತಿದ್ದಾರೆ. ರಾಜವಂಶಸ್ಥರು ಚುನಾವಣೆಯಲ್ಲಿ ಗೆದ್ದರೆ ಅರಮನೆ ಬಿಟ್ಟು ಹೊರಗೆ ಬರುವುದಿಲ್ಲ. ಜನರ ಕೈಗೆ ಸಿಗುವುದಿಲ್ಲ ಎಂದು ಅವರ ಬಗ್ಗೆ ಕಾಂಗ್ರೆಸ್ ಪಕ್ಷದವರು ಸಾಕಷ್ಟು ಅಪಪ್ರಚಾರ ಮಾಡುತ್ತಿದ್ದಾರೆ. ಇದೆಲ್ಲಾ ಸುಳ್ಳು. ಅವರು ಚುನಾವಣೆಯಲ್ಲಿ ಗೆದ್ದರೆ ನಮ್ಮ ಸಂಸದರಾಗಿರುತ್ತಾರೆ. ಜನರ ಕೈಗೆ ಸುಲಭವಾಗಿ ಸಿಗಲು ಕಚೇರಿ ಮಾಡಿದ್ದಾರೆ. ನಮ್ಮ ಕುಂದು ಕೊರತೆಗಳನ್ನು ಅವರಲ್ಲಿ ಹೇಳಿಕೊಳ್ಳಬಹುದು ಎಂದು ಹೇಳಿದರು.




ಯದುವೀರ್ ಅವರು ಇನ್ನೂ ಯುವಕರು. ಈ ನಾಡಿನ ಅಭಿವೃದ್ಧಿಯ ಹರಿಕಾರರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ವಂಶಸ್ಥರು. ಅವರಿಗೆ ಈ ನಾಡನ್ನು ಅಭಿವೃದ್ಧಿ ಮಾಡುವುದನ್ನು ಬಿಟ್ಟು ಬೇರೇನೂ ಗುರಿ ಇಲ್ಲ. ಅವರನ್ನು ಗೆಲ್ಲಿಸಿದರೆ ಒಬ್ಬ ಸಮರ್ಥ, ವಿದ್ಯಾವಂತ ನಾಯಕನನ್ನು ನಾವು ಸಂಸತ್ತಿಗೆ ಕಳಿಸಿದ ಕೀರ್ತಿ ನಮ್ಮ ಮೈಸೂರು-ಕೊಡಗು ಮತದಾರರಿಗೆ ಸಿಗುತ್ತದೆ ಎಂದು ಇಲಿಯಾಸ್ ಅಹಮದ್ ಹೇಳಿದರು.

ಬಿಜೆಪಿಯ ತ್ರಿಬಲ್ ತಲಾಖ್ ನಿಷೇದ ನಮ್ಮ ರಾಷ್ಟ್ರದಲ್ಲಿ ಮಾತ್ರವಲ್ಲಿ ಹಲವು ರಾಷ್ಟ್ರಗಳಲ್ಲಿ ಈ ಕಾನೂನು ಜಾರಿಯಲ್ಲಿದೆ. ಹಿಜಾಬ್, ಹಲಾಲ್ ಮುಂತಾದ ಕೆಲವು ಅಹಿತಕರ ಘಟನೆಗಳು ಆಯಾ ಪ್ರಾಂತ್ಯದ ಸ್ಥಳೀಯ ರಾಜಕೀಯ ಸಮಸ್ಯೆಗಳು. ಇದಕ್ಕೂ ಪಕ್ಷಕ್ಕೂ ಸಂಬಂಧವಿಲ್ಲ. ಅಲ್ಲದೇ ಮುಸ್ಲಿಂ ಮತಗಳು ಬೇಡ ಎಂದು ಪ್ರಧಾನಿಯಾಗಲಿ ನಮ್ಮ ಪಕ್ಷವಾಗಲಿ ಹೇಳಿಲ್ಲ. ಅದು ಕೆಲವು ಮುಖಂಡರ ಮಾತುಗಳಾಗಿವೆ. ಅದಕ್ಕೆ ಪಕ್ಷದಲ್ಲಿ ಯಾವುದೇ ಮನ್ನಣೆ ಇಲ್ಲ. ನಮ್ಮದು ಸಬ್ಕಾ ಸಾತ್, ಸಬ್ಕಾ ವಿಕಾಸ್ ಮತ್ತು ಸಬ್ಕಾ ವಿಶ್ವಾಸ್ ಎಂಬುದು ಪಕ್ಷದ ನಿಲುವು ಎಂದು ಇಲಿಯಾಸ್ ಅಹಮದ್ ಸಮರ್ಥಿಸಿಕೊಂಡರು.

ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾ ಮುಖಂಡರಾದ ಹನೀಫ್, ಝಿಯಾವುಲ್ಲಾ, ಇರ್ಫಾನ್ ಅಹಮದ್, ಆಫ್ತಾಬ್ ಅಹಮದ್, ನೂರ್ ಅಹಮದ್, ರಿಯಾಜ್, ಜಿಯಾವುಲ್ಲಾ ಖಾನ್ ಮುಂತಾದವರು ಇದ್ದರು.

## ಪಂಚನಾಮೆ ಆಧಾರದಲ್ಲಿ ಎಫ್‌ಐಆರ್ ಸರಿಯಲ್ಲ

**ಬೆಂಗಳೂರು:** ಮದ್ಯವನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿರುವ ಆರೋಪಿಗಳಿಂದ ಮದ್ಯದ ಬಾಟಲ್‌ಗಳನ್ನು ವಶಪಡಿಸಿಕೊಂಡು ಪಂಚನಾಮೆ ನಡೆಸಿದ್ದ ಆಧಾರದಲ್ಲಿ ಎಫ್‌ಐಆರ್ ದಾಖಲಿಸಿಕೊಳ್ಳಲು ಕಾನೂನಿನಲ್ಲಿ ಅವಕಾಶವಿಲ್ಲ ಎಂದು ಅಭಿಪ್ರಾಯಪಟ್ಟಿರುವ ಹೈಕೋರ್ಟ್, ಇಬ್ಬರು ಆರೋಪಿಗಳಿಗೆ ವಿಚಾರಣಾಧೀನ ನ್ಯಾಯಾಲಯ ವಿಧಿಸಿದ್ದ ಶಿಕ್ಷೆ ರದ್ದುಗೊಳಿಸಿದೆ. ಕಾನೂನುಬಾಹಿರವಾಗಿ ಮದ್ಯಸಾಗಾಟ ಆರೋಪದಲ್ಲಿ ಶಿಕ್ಷೆಗೆ ಗುರಿಯಾಗಿದ್ದ ದಯಾನಂದ ಮತ್ತು ರವಿ ಎಂಬುವರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಸ್ ರಾಚಯ್ಯ ಅವರ ಏಕಸದಸ್ಯ ಪೀಠ ಪುರಸ್ಕರಿಸಿದೆ.

ಯಾವುದೇ ಆರೋಪ ಎದುರಾದಲ್ಲಿ ಮಾಹಿತಿದಾರರು ಸಹಿ ಹಾಕಿ ನೀಡಿದ ದೂರಿನಿಂದ ಎಫ್‌ಐಆರ್ ದಾಖಲಿಸಬಹುದಾಗಿದೆ. ಇಲ್ಲವೇ, ನಿಖರ ಮಾಹಿತಿಯ ಆಧಾರದಲ್ಲಿ ಪೊಲೀಸ್ ಅಧಿಕಾರಿ ದೂರು ದಾಖಲಿಸಿಕೊಂಡು ಎಫ್‌ಐಆರ್ ದಾಖಲಿಸುತ್ತಾರೆ. ಈ ಎರಡರಲ್ಲಿಯೂ ಮಾಹಿತಿಯನ್ನು ಮೊದಲು ಲಿಖಿತವಾಗಿ ದಾಖಲಿಸಿಕೊಂಡು ನಂತರ ತನಿಖೆ ನಡೆಸುತ್ತಾರೆ. ಆದರೆ, ಪ್ರಸ್ತುತ ಪ್ರಕರಣದಲ್ಲಿ ಈ ಪ್ರಕ್ರಿಯೆ ನಡೆದಿಲ್ಲ. ಬದಲಿಗೆ ಮದ್ಯವನ್ನು ಅಕ್ರಮವಾಗಿ ಸಾಗಾಟ ಮಾಡುತ್ತಿದ್ದವರಿಂದ ಮದ್ಯ ವಶಪಡಿಸಿಕೊಂಡು ಪಂಚನಾಮೆ ನಡೆಸಿದ ಆಧಾರದಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಇದು ಕಾನೂನುಬಾಹಿರ ಕ್ರಮ. ಈ ಅಂಶ ಪರಿಗಣಿಸದೆ ಶಿಕ್ಷೆ ವಿಧಿಸಿರುವುದು ದೋಷದಿಂದ ಕೂಡಿದೆ ಎಂದು ನ್ಯಾಯಾಲಯ ಹೇಳಿದೆ.

# ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಚುನಾವಣೆ

# ಎರಡು ಬ್ಯಾಲೆಟ್ ಯುನಿಟ್ ಬಳಕೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಚುನಾವಣೆಗೆ 29 ಅಭ್ಯರ್ಥಿಗಳು ಸ್ಪರ್ಧಿಸಿರುವ ಹಿನ್ನೆಲೆಯಲ್ಲಿ 2 ಬ್ಯಾಲೆಟ್ ಯುನಿಟ್ ಗಳನ್ನು ಚುನಾವಣೆಗೆ ಬಳಸಲಾಗುವುದೆಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದರು.

ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಲೋಕಸಭಾ ಚುನಾವಣೆ ಸಂಬಂಧ ಕರೆಯಲಾಗಿದ್ದ ಅಭ್ಯರ್ಥಿಗಳು ಹಾಗೂ ಅವರ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾನತಾಡಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಚುನಾವಣೆಗೆ ಒಟ್ಟು 29 ಅಭ್ಯರ್ಥಿಗಳು ಹಾಗೂ ನೋಟಾ ಇರುವುದರಿಂದ ಚುನಾವಣೆಯಲ್ಲಿ ಎರಡು ಬ್ಯಾಲೆಟ್ ಯುನಿಟ್ ಗಳನ್ನು ಬಳಕೆ ಮಾಡಲಾಗುತ್ತಿದೆ. ಒಟ್ಟು 5576 ಬಿ.ಯು, 2788 ಸಿಯು ಹಾಗೂ 3012 ವಿ.ವಿ.ಪಿ.ಎ.ಟಿ ಬಳಸಲಾಗುವುದು. ಎರಡನೇ ಹಂತದ ರ್ಯಾಂಡಮೈಜೇಷನ್ ಅನ್ನು ಚುನಾವಣಾ ಸಾಮಾನ್ಯ ವೀಕ್ಷಕರ ನೇತೃತ್ವದಲ್ಲಿ ಹಾಗೂ ಚುನಾವಣಾ ಅಭ್ಯರ್ಥಿಗಳ ಸಮ್ಮುಖದಲ್ಲಿ ಕೈಗೊಂಡು ವಿಧಾನಸಭಾ ಕ್ಷೇತ್ರವಾರು ಮತಗಟ್ಟೆಗಳಿಗೆ ಇ.ವಿ.ಎಂ/ಬಿ.ಯು ಮತಯಂತ್ರಗಳನ್ನು ಹಂಚಿಕೆ ಮಾಡಲಾಗುವುದೆಂದು ಚುನಾವಣಾಧಿಕಾರಿಗಳು ತಿಳಿಸಿದರು.

ಚುನಾವಣೆಗೆ ಮತದಾರರ ಪಟ್ಟಿಯಲ್ಲಿ 9,83,775 ಪುರುಷರು, 9,97,306 ಮಹಿಳೆಯರು ಹಾಗೂ ಇತರರು 266 ಸೇರಿದಂತೆ ಒಟ್ಟು 19,81,347 ಮತದಾರರಿದ್ದಾರೆ. ಒಟ್ಟು 420 ಮತದಾರರು ಸೇವಾ ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ 390 ಪುರುಷರು, 30 ಮಹಿಳೆಯರಿದ್ದಾರೆ. ಇವರಿಗೆ ಈಗಾಗಲೇ ಇ.ಟಿ.ಪಿ.ಬಿ.ಎಂ.ಎಸ್ ತಂತ್ರಾಂಶದಲ್ಲಿ ಇ-ಬ್ಯಾಲೆಟ್ ಪೇಪರನ್ನು ಅಪ್ ಲೋಡ್ ಮಾಡಲಾಗಿದೆ. 2024ರ ಜನವರಿ 22 ನಂತರ ಹೊಸದಾಗಿ ನೋಂದಣಿಯಾಗಿರುವ ಯುವ ಮತದಾರರಿಗೆ ಮತದಾರರ ಗುರುತಿನ ಚೀಟಿಯನ್ನು ಶೀಘ್ರ ಅಂಚೆ ಮೂಲಕ ಕಳುಹಿಸಲು ಕ್ರಮವಹಿಸಲಾಗಿದೆ ಎಂದರು.

ಮತದಾರರಿಗೆ ಮತಗಟ್ಟೆಯ ವಿವರ, ಮತದಾನದ ದಿನಾಂಕ, ಸಮಯ ಹಾಗೂ ಮತದಾರರ ವಿವರವುಳ್ಳ ಮತದಾರರ ಮಾಹಿತಿ ಚೀಟಿ (ವೋಟರ್ ಇನ್ಫರ್ ಮೇಶನ್ ಸ್ಲಿಪ್) ಚೀಟಿಯನ್ನು ಮತದಾನದ ದಿನಕ್ಕಿಂತ ಐದು ದಿನ ಮುಂಚಿತವಾಗಿ ಬಿ.ಎಲ್.ಓ ಗಳ ಮುಖಾಂತರ ವಿತರಿಸಲಾಗುವುದು. ಒಟ್ಟು 2326 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಈ ಪೈಕಿ ನಗರ ಪ್ರದೇಶದಲ್ಲಿ 536 ಹಾಗೂ ಗ್ರಾಮಾಂತರ ಪ್ರದೇಶದಲ್ಲಿ 1790 ಇರಲಿವೆ ಎಂದು ಚುನಾವಣಾಧಿಕಾರಿಗಳು ವಿವರಿಸಿದರು.



ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 85 ವರ್ಷ ಮೇಲ್ಪಟ್ಟ 1639 ಮತದಾರರು ಮತ್ತು 763 ವಿಕಲಚೇತನ ಮತದಾರರು ಸೇರಿದಂತೆ ಒಟ್ಟು 2402 ಮತದಾರರು ಮನೆಯಿಂದ ಮತದಾನ ಮಾಡಲು ಆಯ್ಕೆ ಮಾಡಿಕೊಂಡಿದ್ದಾರೆ. ಇವರಿಗೆ ಏಪ್ರಿಲ್ 13 ರಿಂದ 18 ರವರೆಗೆ ಐದು ದಿನಗಳ ಕಾಲ ಮನೆ ಮತದಾನ ನಡೆಯಲಿದೆ ಎಂದು ತಿಳಿಸಿದರು.

ಅಗತ್ಯ ಸೇವೆಯಡಿ ಬರುವ 782 ಮತದಾರರಿಗೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ದೇವನಹಳ್ಳಿ ತಾಲ್ಲೂಕು ಕಚೇರಿಯಲ್ಲಿ ಅಂಚೆ ಮತದಾನ ಕೇಂದ್ರವನ್ನು ಸ್ಥಾಪಿಸಲಾಗಿದೆ. ಇಲ್ಲಿ ಏಪ್ರಿಲ್ 19 ರಿಂದ 21 ರವರೆಗೆ ಮೂರು ದಿನಗಳ ಕಾಲ ಮತದಾನಕ್ಕೆ ಅವಕಾಶ ಮಾಡಿಕೊಡಲಾಗಿದೆ ಎಂದರು.

ಅಭ್ಯರ್ಥಿಗಳ ಚುನಾವಣಾ ವೆಚ್ಚಗಳ ನಿರ್ವಹಣಾ ವಹಿಯನ್ನು ಏಪ್ರಿಲ್ 12, 18 ಹಾಗೂ 24 ರಂದು ಚುನಾವಣಾ ವೆಚ್ಚ ವೀಕ್ಷಕರು ಪರಿಶೀಲಿಸಲಿದ್ದಾರೆ. ಮತದಾನದ ಪೂರ್ವ 48 ಗಂಟೆಗಳಲ್ಲಿ ಧ್ವನಿವರ್ಧಕಗಳ ಬಳಕೆ ನಿಷೇಧಿಸಲಾಗಿದೆ. ಬಹಿರಂಗ ಪ್ರಚಾರವು ಏಪ್ರಿಲ್ 24 ರಂದು ಸಂಜೆ 6 ಗಂಟೆಗೆ ಕೊನೆಗೊಳ್ಳಲಿದ್ದು, ಈ ಅವಧಿಯ ನಂತರ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ 8 ವಿಧಾನಸಭಾ ಕ್ಷೇತ್ರದ ಮತದಾರರಲ್ಲದವರು ಕ್ಷೇತ್ರ ವ್ಯಾಪ್ತಿಯಿಂದ ಹೊರಗೆ ಹೋಗಬೇಕಿದೆ. ಈ ಕುರಿತು ಚುನಾವಣಾ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ ಎಂದರು.

ದೇವನಹಳ್ಳಿ ತಾಲ್ಲೂಕಿನ ಮುದುರ್ಗುರ್ಕಿಯ ನಾಗಾರ್ಜುನ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ ಎಣಿಕಾ ಕೇಂದ್ರವಾಗಿದ್ದು, ಇಲ್ಲಿ ಏಪ್ರಿಲ್ 26 ರಂದು ಮತದಾನ ಮುಕ್ತಾಯವಾದ ನಂತರ ಮತ ಚಲಾಯಿಸಲಾಗಿರುವ ಇ.ವಿ.ಎಂ ಗಳನ್ನು ಭದ್ರತಾ ಕೊಠಡಿಯಲ್ಲಿ ಭದ್ರಪಡಿಸಿ ಕೇಂದ್ರ ಮೀಸಲು ಪೊಲೀಸ್ ಪಡೆಗೆ ಹಸ್ತಾಂತರಿಸಲಾಗುವುದು. ಇಲ್ಲಿಯೂ ಜೂನ್ 4 ರವರೆಗೆ ಅಭ್ಯರ್ಥಿಗಳ ಪರ ಏಜೆಂಟ್ ನಿಯೋಜಿಸಿಕೊಳ್ಳಲು ಅವಕಾಶವಿರುತ್ತದೆ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದರು.

ಚುನಾವಣಾ ಕರ್ತವ್ಯ ಅಧಿಕಾರಿ, ಸಿಬ್ಬಂದಿಯವರಿಗೆ ಮತ ಚಲಾವಣೆಗೆ ಮಾಡಲಾಗಿರುವ ವ್ಯವಸ್ಥೆಗಳು, ಸೌಲಭ್ಯ ಕೇಂದ್ರ ಇನ್ನಿತರ ವಿವರಗಳನ್ನು ಸಭೆಯಲ್ಲಿ ವಿವರಿಸಲಾಯಿತು.

ಬೆಂಗಳೂರು ಗ್ರಾಮಾಂತ ಜಿಲ್ಲೆಯ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಬೆಂಗಳೂರು ಗ್ರಾಮಾಂತ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ಎನ್. ಅನುರಾಧ, ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್. ನಾಗೇಶ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಚಿಕ್ಕಬಳ್ಳಾಪುರ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಇತರೆ ಸಹಾಯಕ ಚುನಾವಣಾಧಿಕಾರಿಗಳು, ಅಭ್ಯರ್ಥಿಗಳು, ಅವರ ಪರ ಪ್ರತಿನಿಧಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## 13 ರಿಂದ 18 ರವರೆಗೆ ಹಿರಿಯರು, ಅಂಗವಿಕಲ ಮತದಾರರಿಗೆ ಮನೆ ಮತದಾನ

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ 8 ವಿಧಾನಸಭಾ ಕ್ಷೇತ್ರಗಳಲ್ಲಿ ಮನೆ ಮತದಾನ ಆಯ್ಕೆ ಮಾಡಿಕೊಳ್ಳಲಾದ 85 ವರ್ಷ ಮೇಲ್ಪಟ್ಟ ಹಿರಿಯ ಮತದಾರರು ಹಾಗೂ ವಿಕಲಚೇತನ ಮತದಾರರಿಗೆ ಏಪ್ರಿಲ್ 13 ರಿಂದ 18 ರವರೆಗೆ ಮನೆಯಿಂದಲೇ ಮತದಾನ ಮಾಡುವ ಕಾರ್ಯ ನಡೆಯಲಿದ್ದು, ಮತದಾರರು ತಾವು ನೀಡಲಾದ ವಿಳಾಸದಲ್ಲಿ ಹಾಜರಿದ್ದು, ಮನೆ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದ್ದಾರೆ. ಮನೆ ಮತದಾನಕ್ಕೆ ಈಗಾಗಲೇ ಅಗತ್ಯ ಸಿಬ್ಬಂದಿ ನೇಮಕ ಮಾಡಲಾಗಿದೆ. ಮನೆ ಮತದಾನಕ್ಕೆ ಆಯ್ಕೆ ಮಾಡಿಕೊಳ್ಳಲಾದ ಮತದಾರರು ತಾವು ನೀಡಲಾಗಿರುವ ವಿಳಾಸದಲ್ಲಿ ಹಾಜರಿದ್ದು, ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕೆಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ. 85 ವರ್ಷ ಮೇಲ್ಪಟ್ಟ 1639 ಮತದಾರರು ಮನೆ ಮತದಾನಕ್ಕೆ ಆಯ್ಕೆ ಮಾಡಿಕೊಂಡಿದ್ದಾರೆ. ಇವರಲ್ಲಿ ಗೌರಿಬಿದನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 306, ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ 288, ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ 208, ಯಲಹಂಕ ವಿಧಾನಸಭಾ ಕ್ಷೇತ್ರದಲ್ಲಿ 325. ಹೊಸಕೋಟೆ ವಿಧಾನಸಭಾ ಕ್ಷೇತ್ರದಲ್ಲಿ 120, ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 85, ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ 159, ನೆಲಮಂಗಲ ವಿಧಾನಸಭಾ ಕ್ಷೇತ್ರದಲ್ಲಿ 148 ಮತದಾರರಿದ್ದಾರೆ. 763 ವಿಕಲಚೇತನ ಮತದಾರರು ಮನೆ ಮತದಾನಕ್ಕೆ ಆಯ್ಕೆ ಮಾಡಿಕೊಂಡಿದ್ದಾರೆ. ಇವರಲ್ಲಿ ಗೌರಿಬಿದನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 237, ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ 168, ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ 84, ಯಲಹಂಕ ವಿಧಾನಸಭಾ ಕ್ಷೇತ್ರದಲ್ಲಿ 49. ಹೊಸಕೋಟೆ ವಿಧಾನಸಭಾ ಕ್ಷೇತ್ರದಲ್ಲಿ 37, ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 24, ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ 107, ನೆಲಮಂಗಲ ವಿಧಾನಸಭಾ ಕ್ಷೇತ್ರದಲ್ಲಿ 57 ಮತದಾರರಿದ್ದಾರೆ ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದ್ದಾರೆ.

## ಬಯಲುಸೀಮೆ ಭಾಗಕ್ಕೆ ನ್ಯಾಯ ಕೊಡಿಸುವ ಅವಕಾಶ ನೀಡಬೇಕು

**ವಿಜಯಪುರ(ದೇವನಹಳ್ಳಿ):** ಲೋಕಸಭಾ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಡಾ.ಕೆ.ಸುಧಾಕರ್ ಅವರ ಗೆಲುವಿಗಾಗಿ ಪ್ರತಿಯೊಬ್ಬ ಕಾರ್ಯಕರ್ತರು, ತಾವೇ ಅಭ್ಯರ್ಥಿಯೆಂದು ಭಾವಿಸಿಕೊಂಡು ಮತಗಳಿಕೆಗೆ ಕೆಲಸ ಮಾಡಬೇಕು ಎಂದು ಬಮೂಲ್ ನಿರ್ದೇಶಕ ಇರಿಗೇನಹಳ್ಳಿ ಶ್ರೀನಿವಾಸ್ ಕರೆ ನೀಡಿದರು. ಹೋಬಳಿಯ ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹರಳೂರು ನಾಗೇನಹಳ್ಳಿ ಗ್ರಾಮದ ಜೆಡಿಎಸ್ ಮುಖಂಡ ಕಲ್ಯಾಣಬಾಬು ಅವರ ಮನೆಯ ಬಳಿ ಮಂಗಳವಾರ ಆಯೋಜಿಸಿದ್ದ ಪಂಚಾಯಿತಿ ವ್ಯಾಪ್ತಿಯ ಮುಖಂಡರ ಚುನಾವಣಾ ಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು. ಬಿಜೆಪಿ ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಂಡಿರುವುದು ಅಧಿಕಾರಕ್ಕಾಗಿ ಅಲ್ಲ, ಈ ರಾಜ್ಯದ ಸರ್ವತೋಮುಖ ಅಭಿವೃದ್ಧಿ ಹಾಗೂ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವುದಕ್ಕಾಗಿ ಆಗಿದೆ. ಕೇಂದ್ರದಲ್ಲಿ ಈ ಬಾರಿಯೂ ನರೇಂದ್ರಮೋದಿ ಅವರು ಮೂರನೇ ಬಾರಿಗೆ ಪ್ರಧಾನಿಯಾಗುವುದನ್ನು ತಪ್ಪಿಸಲು ಯಾರಿಂದಲೂ ಸಾಧ್ಯವಾಗುವುದಿಲ್ಲ. ನಮ್ಮ ಭಾಗದ ಸಂಸದರು ಮೈತ್ರಿ ಅಭ್ಯರ್ಥಿಯಾಗಿದ್ದರೆ ನಮಗೆ ಕೇಂದ್ರದಲ್ಲಿ ಉತ್ತಮ ಬೆಂಬಲ ಸಿಗಲಿದೆ. ಕಾಂಗ್ರೆಸ್ ಅಭ್ಯರ್ಥಿ ಗೆದ್ದರೆ ಹೋದರೆ ಏನೂ ಪ್ರಯೋಜನವಾಗುವುದಿಲ್ಲ ಎಂದರು. ಜೆಡಿಎಸ್ ಮುಖಂಡ ಕಲ್ಯಾಣ್ ಕುಮಾರ್ ಬಾಬು ಮಾತನಾಡಿ, ರಾಜ್ಯದಲ್ಲಿ ಎಚ್.ಡಿ.ದೇವೇಗೌಡ, ಹಾಗೂ ಎಚ್.ಡಿ.ಕುಮಾರಸ್ವಾಮಿ ಅವರು, ಪೂರ್ವಾಪರಗಳನ್ನು ಯೋಚನೆ ಮಾಡಿದ ನಂತರವೇ ಮೈತ್ರಿ ಮಾಡಿಕೊಳ್ಳುವ ತೀರ್ಮಾನ ಮಾಡಿದ್ದಾರೆ. ಜೆಡಿಎಸ್ ಪಕ್ಷದ ಕಾರ್ಯಕರ್ತರು, ಪ್ರತಿಯೊಬ್ಬರೂ ಮೈತ್ರಿ ಧರ್ಮ ಪಾಲನೆ ಮಾಡುವ ಮೂಲಕ ಡಾ.ಕೆ.ಸುಧಾಕರ್ ಅವರನ್ನು ಗೆಲ್ಲಿಸಿಕೊಳ್ಳುವ ಮೂಲಕ ಬಯಲುಸೀಮೆ ಭಾಗಕ್ಕೆ ನ್ಯಾಯ ಕೊಡಿಸುವ ಅವಕಾಶವನ್ನು ಅವರಿಗೆ ನಾವು ನೀಡಬೇಕು ಎಂದರು. ಮುಖಂಡರಾದ ಕೋರಮಂಗಲ ವೀರಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷ ಎಂ.ಜಗದೀಶ್, ಹೋಬಳಿ ಜೆಡಿಎಸ್ ಘಟಕದ ಅಧ್ಯಕ್ಷ ಪುರ ಕೃಷ್ಣಪ್ಪ, ಚಿಕ್ಕನಹಳ್ಳಿ ಸುಬ್ಬಣ್ಣ, ಗೊಡ್ಲುಮುದ್ದೇನಹಳ್ಳಿ ನಾರಾಯಣಸ್ವಾಮಿ, ಮುರಳಿ, ಮುಂತಾದವರು ಹಾಜರಿದ್ದರು.



ವಿಜಯಪುರ ಹೋಬಳಿ ಹರಳೂರು ನಾಗೇನಹಳ್ಳಿ ಗ್ರಾಮದಲ್ಲಿ ಬಿಜೆಪಿ, ಜೆಡಿಎಸ್ ಮುಖಂಡರು, ಚುನಾವಣೆಯ ಸಿದ್ದತೆಗಾಗಿ ಸಭೆ ನಡೆಸಿದ ಸಭೆಯಲ್ಲಿ ಬಮೂಲ್ ನಿರ್ದೇಶಕ ಇರಿಗೇನಹಳ್ಳಿ ಶ್ರೀನಿವಾಸ್ ಮಾತನಾಡಿದರು.

## ಚುನಾವಣಾ ವೆಚ್ಚ ಸಂಬಂಧ ಪ್ರಕ್ರಿಯೆ ಬಗ್ಗೆ ನಿಗಾ ವಹಿಸಿ

**ಚಿಕ್ಕಬಳ್ಳಾಪುರ:** ಮುಕ್ತ, ನ್ಯಾಯಸಮ್ಮತ, ಪಾರದರ್ಶಕವಾಗಿ, ಚುನಾವಣೆ ನಡೆಯಲು ಚುನಾವಣಾ ವೆಚ್ಚ ಸಂಬಂಧ ನಿಯೋಜಿತ ಅಧಿಕಾರಿಗಳು ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸುವಂತೆ ರಾಜ್ಯ ವಿಶೇಷ ವೆಚ್ಚ ವೀಕ್ಷಕರಾದ ಬಿ.ಮುರಳಿ ಕುಮಾರ್ ಅವರು ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಲೋಕಸಭಾ ಚುನಾವಣಾ ಸಂಬಂಧ ವೆಚ್ಚ ನಿಗಾ ಕುರಿತು ಇಂದು ನಡೆದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾನತಾಡಿದರು. ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಿ ಸಾಗಿಸಲಾಗುವ ಹಣ, ಮದ್ಯ ಇನ್ನಿತರ ಸಾಮಗ್ರಿಗಳ ಬಗ್ಗೆ ಕುಲಂಕಷವಾಗಿ ಪರಿಶೀಲಿಸಬೇಕು. ವಸ್ತುಗಳು ಎಲ್ಲಿಂದ ಬರುತ್ತಿದೆ, ಯಾವ ಪ್ರದೇಶಕ್ಕೆ ತಲುಪುತ್ತಿದೆ ಎಂಬ ದಾಖಲೆಗಳನ್ನು ನೋಡಬೇಕು. ಯಾವುದೇ ಅಕ್ರಮಗಳಿಗೆ ಅವಕಾಶವಾಗದಂತೆ ಕಟ್ಟೆಚ್ಚರ ವಹಿಸಬೇಕು ಎಂದು ವಿಶೇಷ ವೆಚ್ಚ ವೀಕ್ಷಕರು ನಿರ್ದೇಶನ ನೀಡಿದರು.

ವಾಣಿಜ್ಯ ತೆರಿಗೆ, ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಮುತುವರ್ಜಿಯಿಂದ ಎಲ್ಲವನ್ನು ಪರಿಶೀಲನೆ ಮಾಡಬೇಕು. ಚುನಾವಣಾ ಸಮಯವಾದ್ದರಿಂದ ವಿಶೇಷ ಗಮನ ಇರಬೇಕು. ವಾಣಿಜ್ಯ ವಹಿವಾಟು, ಹಣಕಾಸು ವ್ಯವಹಾರಗಳ ಬಗ್ಗೆ ಸಂಪೂರ್ಣವಾಗಿ ನಿಗಾ ಇಟ್ಟಿರಬೇಕು. ಪರಸ್ಪರ ಸಮನ್ವಯ ಸಹಕಾರ ಪಡೆದುಕೊಂಡು ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರ ವಹಿಸಬೇಕೆಂದು ವಿಶೇಷ ವೆಚ್ಚ ವೀಕ್ಷಕರು ತಿಳಿಸಿದರು.

ಬ್ಯಾಂಕುಗಳಲ್ಲಿ ನಡೆಯುವ ವಹಿವಾಟಿನ ಬಗ್ಗೆ ಹೆಚ್ಚು ಪರಿಶೀಲಿಸಬೇಕಿದೆ. ಯಾವುದೇ ಅಸಹಜ ವಹಿವಾಟುಗಳು ಕಂಡುಬಂದಲ್ಲಿ ಅಗತ್ಯ ಕ್ರಮ ತೆಗೆದುಕೊಳ್ಳಬೇಕು. ಹಣವರ್ಗಾವಣೆಯಂತಹ ಪ್ರಕ್ರಿಯೆಯನ್ನು ಗಮನಿಸಬೇಕು ಎಂದರು. ಚೆಕ್ ಪೋಸ್ಟ್ ಗಳಲ್ಲಿ ಪರಿಶೀಲನೆ ಸಂಬಂಧ ವಹಿಗಳು ನಿರ್ವಹಣೆ ಮಾಡಬೇಕು. ವಾಹನಗಳ ವಿವರ ಇನ್ನಿತರ ಅಂಶಗಳನ್ನು ದಾಖಲು ಮಾಡಿಕೊಳ್ಳಬೇಕು. ಉಲ್ಲಂಘನೆ ಪ್ರಕರಣಗಳು ಕಂಡುಬಂದಲ್ಲಿ ಕೂಡಲೇ ಕ್ರಮ ವಹಿಸಬೇಕು. ಪಾರದರ್ಶನವಾಗಿ ಚುನಾವಣೆ ನಡೆಯಲು ಎಲ್ಲಾ ಪೂರಕ ಅಗತ್ಯ ಕ್ರಮಗಳನ್ನು ನಿರ್ವಹಿಸಬೇಕು ಎಂದು ರಾಜ್ಯ ವಿಶೇಷ ವೆಚ್ಚ ವೀಕ್ಷಕರಾದ ಬಿ.ಮುರಳಿ ಕುಮಾರ್ ಅವರು ತಿಳಿಸಿದರು. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವೆಚ್ಚ ವೀಕ್ಷಕರಾದ ದೆಬಾಶಿಶ್ ಮಜುಮ್ ದಾರ್ ಅವರು ಕ್ಷೇತ್ರದ ಕಾರ್ಯ ನಿರ್ವಹಣೆ ಸಂಬಂಧ ಅಗತ್ಯ ಸೂಚನೆಗಳನ್ನು ನೀಡಿದರು. ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಪಿ.ಎನ್. ರವೀಂದ್ರ, ಬೆಂಗಳೂರು ಗ್ರಾಮಾಂತ ಜಿಲ್ಲೆಯ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ, ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಬೆಂಗಳೂರು ಗ್ರಾಮಾಂತ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಕೆ.ಎನ್. ಅನುರಾಧ, ಚಿಕ್ಕಬಳ್ಳಾಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್. ನಾಗೇಶ್, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಚಿಕ್ಕಬಳ್ಳಾಪುರ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ಹಾಗೂ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



## ಅಧಿಕಾರಿ, ಸಿಬ್ಬಂದಿಗೆ ಮತ ಚಲಾಯಿಸಲು ಅಂಚೆ ಮತದಾನ ಕೇಂದ್ರ ಸ್ಥಾಪನೆ

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ 8 ವಿಧಾನಸಭಾ ಕ್ಷೇತ್ರಗಳಲ್ಲಿ ಈಗಾಗಲೇ 12 ಡಿ ನಮೂನೆ ಸಲ್ಲಿಸಿರುವ ಅಗತ್ಯ ಸೇವೆಯಡಿಯಲ್ಲಿ ಬರುವ ಅಧಿಕಾರಿ, ಸಿಬ್ಬಂದಿಗೆ ಮತದಾನಕ್ಕಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಮಧ್ಯಭಾಗವಾದ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ದೇವನಹಳ್ಳಿ ತಾಲ್ಲೂಕು ಕಚೇರಿಯಲ್ಲಿ ಅಂಚೆ ಮತದಾನ ಕೇಂದ್ರ ತೆರೆಯಲಾಗಿದೆ. ಈಗಾಗಲೇ 12 ಡಿ ನಮೂನೆ ಸಲ್ಲಿಸಿರುವ ಅಗತ್ಯ ಸೇವೆಯಡಿಯಲ್ಲಿ ಬರುವ ಅಧಿಕಾರಿ, ಸಿಬ್ಬಂದಿ ಮತದಾರರ ಪಟ್ಟಿಯನ್ನು ಅನುಭಂದ-12 ರಲ್ಲಿ ಸಿದ್ಧಪಡಿಸಿದ್ದು, ಅದರಂತೆ ಸದರಿ 782 ಮತದಾರರಿಗೆ ಏಪ್ರಿಲ್ 19 ರಿಂದ 21 ರವರೆಗೆ 3 ದಿನಗಳ ಕಾಲ ದೇವನಹಳ್ಳಿ ತಾಲ್ಲೂಕು ಕಚೇರಿಯಲ್ಲಿ ಸ್ಥಾಪಿಸಲಾಗಿರುವ ಅಂಚೆ ಮತದಾನ ಕೇಂದ್ರದಲ್ಲಿ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಆಯ್ಕೆ ಮಾಡಿಕೊಳ್ಳಲಾದ ಮತದಾರರು (ಅಗತ್ಯ ಸೇವೆಯಲ್ಲಿ ಬರುವಂತಹ ಅಧಿಕಾರಿ/ನೌಕರರು) ಸದರಿ ದಿನಗಳಂದು ದೇವನಹಳ್ಳಿ ತಾಲ್ಲೂಕು ಕಚೇರಿಗೆ ಹಾಜರಾಗಿ ಮತದಾನದ ಪಕ್ರಿಯೆಯಲ್ಲಿ ಪಾಲ್ಗೊಳ್ಳುವಂತೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಂಜಾನ್ ಉಪವಾಸ ಆಚರಣೆಯಿಂದ ಮನಸು ಹಾಗೂ ದೇಹ ಎರಡು ಶುದ್ಧಿಯಾಗುತ್ತದೆ

ವಿಜಯಪುರ; ಮುಸ್ಲಿಂ ಬಾಂಧವರಿಗೆ ಪ್ರತಿ ವರ್ಷ ರಂಜಾನ್ ಹಬ್ಬದ ಸಂದರ್ಭದಲ್ಲಿ ಉಪವಾಸದ ಕಟ್ಟುಪಾಡು ಇದ್ದು ತಿಂಗಳು ಪೂರ ಅದನ್ನು ಕಟ್ಟುನಿಟ್ಟಾಗಿ ಆಚರಿಸುವುದರಿಂದ ನಮ್ಮ ದೇಹ ಹಾಗೂ ಮನಸ್ಸು ಶುದ್ಧಿಯಾಗುವುದರೊಂದಿಗೆ ನೀವು ಅಲ್ಲಾಹುವಿಗೂ ಪ್ರೀತಿಯಾಗುತ್ತದೆ ಎಂದು ಜಾಮಿಯಾ ಮಸೀದಿಯ ಮೌಲಾನ ಇಮಾಮ್ ಸಾಬ್ ರವರು ತಿಳಿಸಿದರು. ಅವರು ಪಟ್ಟಣದ ಈದ್ಗಾ ಮೈದಾನದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ನೆರೆದಿದ್ದು, ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದ್ದ, ಸಾವಿರಾರು ಮಂದಿ ಮುಸ್ಲಿಂ ಬಾಂಧವರನ್ನುದ್ದೇಷಿಸಿ ತಮ್ಮ ಆಶೀರ್ವಚನದಲ್ಲಿ ತಿಳಿಸಿದರು. ರಂಜಾನ್ ಹಬ್ಬದ ಪ್ರಯುಕ್ತ ಬೆಳಗಿನಿಂದಲೇ ಮುಸ್ಲಿಂ ಬಾಂಧವರು, ಮಕ್ಕಳು ನೂತನ ವಸ್ತ್ರಗಳನ್ನು ಧರಿಸಿ ಪಟ್ಟಣದ ಕುಬಾ, ಆಕ್ಸಾ, ಮಹಮದೀಯ, ನೂರಾನಿ, ಮತ್ತಿತರೆ 12 ಮಸೀದಿಗಳಿಂದ ಮೆರವಣಿಗೆಯಲ್ಲಿ ಹೊರಟು ಜಾಮಿಯಾ ಮಸೀದಿಗೆ ಆಗಮಿಸಿ, ಅಲ್ಲಿಂದ ಲಾಂಛನಗಳೊಂದಿಗೆ ಪಟ್ಟಣದ ಮುಖ್ಯ ಬೀದಿಗಳಲ್ಲಿ ಅಲ್ಲಾಹು ನಾಮ ಸ್ಮರಣೆ ಮಾಡುತ್ತಾ ಮೆರವಣಿಗೆಯೊಂದಿಗೆ ಚಿಕ್ಕಬಳ್ಳಾಪುರ ರಸ್ತೆಯಲ್ಲಿನ ಈದ್ಗಾ ಮೈದಾನಕ್ಕೆ ಆಗಮಿಸಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮುಸ್ಲಿಂ ಹಲವಾರು ಸಂಘ ಸಂಸ್ಥೆಗಳವರು ಪ್ರಾರ್ಥನೆಗಾಗಿ ಆಗಮಿಸಿದ ಮುಸ್ಲಿಂ ಬಾಂಧವರಿಗೆ ಬಿಸಿಲಿನ ಕಾರಣ ಶಾಮಿಯಾನ ಹಾಕಿಸಿದ್ದು ಕುಡಿಯುವ ನೀರು ತಂಪಾದ ಪಾನೀಯಗಳನ್ನು ವಿತರಿಸುವ ವ್ಯವಸ್ಥೆ ಮಾಡಿದ್ದರು. ಜಾಮಿಯಾ ಮಸೀದಿಯ ಆಡಳಿತ ಅಧಿಕಾರಿ ಸಾಧಿಕ್ ಪಾಶ, ಮಾಜಿ ಆಡಳಿತ ಅಧಿಕಾರಿಗಳಾದ ಹಜ್ರತ್, ಮುಖಂಡರುಗಳಾದ ಸೈಫುಲ್ಲಾ, ಆಸಿಫ್,ಜಂಗ್ಲೀ ಪೀರ್ ಬಾಬಾ ದರ್ಗದ ಖಲೀಂ, ಪುರಸಭಾ ಸದಸ್ಯರುಗಳು ಹಾಗೂ ಮಾಜಿ ಸದಸ್ಯರುಗಳು ಉಪಸ್ಥಿತರಿದ್ದರು.



## ಕಾಂಗ್ರೆಸ್ ಒಡೆದಾಳುವ ನೀತಿಯ ಕೃಪಾಪೋಷಿತ ನಾಟಕ ಮಂಡಳಿ

**ಕೋಲಾರ:** ಕಾಂಗ್ರೆಸ್ ಪಕ್ಷ ದಲಿತ ಸಮುದಾಯಗಳನ್ನು ಎಡ-ಬಲ, ಚಿಕ್ಕದು -ದೊಡ್ಡದು ಎಂದು ವಿಭಜಿಸುವುದರ ಮೂಲಕ ಸಮುದಾಯವನ್ನು ಹೊಡೆಯುತ್ತಿರುವುದು ಶೋಭೆ ತರುವಂತದ್ದಲ್ಲ, ಕಾಂಗ್ರೆಸ್ ಪಕ್ಷ ಒಡೆದಾಳುವ ನೀತಿಯ ಕೃಪಾಪೋಷಿತ ನಾಟಕ ಮಂಡಳಿಯಾಗಿದ್ದು ದಲಿತ ಸಮುದಾಯ ತಲೆಕೆಡಿಸಿಕೊಳ್ಳದೆ ಜಾಗರೂಕತೆಯಿಂದ ರಾಷ್ಟ್ರ ಕಟ್ಟುವ ನಿಟ್ಟಿನಲ್ಲಿ ಮೈತ್ರಿ ಪಕ್ಷದ ಅಭ್ಯರ್ಥಿ ಮಲ್ಲೇಶ್ ಬಾಬುರವರ ಪರ ಕೆಲಸ ಮಾಡಬೇಕು ಬಿಜೆಪಿ ಪಕ್ಷ ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ತತ್ವದ ಅಡಿಯಲ್ಲಿ ಮಾನವತಾ ಸಂದೇಶವನ್ನು ಸಾರುತ್ತದೆ ಎಂದುಸಂಸದ ಎಸ್ ಮುನಿಸ್ವಾಮಿ ತಿಳಿಸಿದರು.

ನಾರಾಯಣಿ ಕನ್ವೆನ್ಷನ್ ಹಾಲ್ ನಲ್ಲಿನ ದಲಿತ ಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಆಯೋಜಿಸಲಾಗಿದ್ದ ಸ್ವಾಭಿಮಾನಿ ಸಮಾವೇಶ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ನಿರಂತರವಾಗಿ ದಲಿತ ಸಮುದಾಯಗಳನ್ನು ತುಳಿಯುತ್ತಾ ಬಂದಿದೆ, ಅಸ್ಪೃಶ್ಯರ ದಲಿತರ ಆಶಾ ಜ್ಯೋತಿಯಾದ ಬಾಬಾ ಸಾಹೇಬ್ ಅಂಬೇಡ್ಕರ್ ರವರನ್ನು ಚುನಾವಣೆಯಲ್ಲಿ ಸೋಲಿಸಲಾಯಿತು. ಅಂದಿನ ಕಾಂಗ್ರೆಸ್ ಪ್ರಧಾನಿ ನೆಹರುರವರು ಅಂಬೇಡ್ಕರ್ ರವರನ್ನು ಸೋಲಿಸುವಂತೆ ಪ್ರಚಾರ ಮಾಡಿದ್ದರು, ಅಂಬೇಡ್ಕರ್ ನಿಧನದ ನಂತರ ಶವಸಂಸ್ಕಾರಕ್ಕೆ ಅವಕಾಶ ನೀಡಲಿಲ್ಲ ಹಾಗೂ ರಾಷ್ಟ್ರದ ಅತ್ಯುನ್ನತ ಪ್ರಶಸ್ತಿಯಾದ ಡಾಕ್ಟರೇಟ್ ಪದವಿಯನ್ನು ನೀಡಲು ಮೀನಾ ಮೇಷ ಎನಿಸಿತು ಕಾಂಗ್ರೆಸ್ ಅನಾಧಿಕಾಲದಿಂದಲೂ ಅಂಬೇಡ್ಕರ್ ರವರನ್ನು ಮತ್ತು ದಲಿತ ಸಮುದಾಯವನ್ನು ಜಾತಿ ಹೆಸರಿನಲ್ಲಿ ಹೊಡೆದಾಳುವ ಮೂಲಕ ದಮನ ಮಾಡಲು ಹೊರಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮಾತನಾಡಿ, ಧರ್ಮದ ರಕ್ಷಣೆಗೆ ಭಗವದ್ಗೀತೆ ಎಷ್ಟು ಪವಿತ್ರವೋ ಅಷ್ಟೇ ಪವಿತ್ರವಾಗಿ ದೇಶವನ್ನು ಮುನ್ನಡೆಸಲು ಬಾಬಾ ಸಾಹೇಬ್ ಅಂಬೇಡ್ಕರ್ ರವರು ರಚಿಸಿರುವ ಸಂವಿಧಾನ ಪವಿತ್ರವಾಗಿದೆ ಬಾಬಾ ಸಾಹೇಬರು ತುಳಿತಕ್ಕೆ ಒಳಗಾದ ಅಸ್ಪೃಶ್ಯ ಸಮಾಜ ಮಹಿಳೆಯರ ಹಕ್ಕುಗಳಿಗೆ ಧ್ವನಿಯಾಗಿ ನಿಂತು ಸಂವಿಧಾನವನ್ನು ರಚಿಸಿದರು ಆದರೆ ಇಂದು ಕಾಂಗ್ರೆಸ್ ಪಕ್ಷ ಅಂಬೇಡ್ಕರ್ ರವರ ಹೆಸರನ್ನು ಹೇಳಿ ಮತ ಕೇಳುತ್ತಿದೆಯೇ ಹೊರತು ದಲಿತ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿಲ್ಲ ಮೈತ್ರಿ ಅಭ್ಯರ್ಥಿ ಮಲ್ಲೇಶ್ ಬಾಬು , ವಿಧಾನ ಪರಿಷತ್ ಸದಸ್ಯ ಇಂಚರ ಗೋವಿಂದರಾಜು, ಎಸ್ಸಿ ಮೋರ್ಚ ಜಿಲ್ಲಾಧ್ಯಕ್ಷ ಕಪಾಲಿ ಶಂಕರ್, ದಲಿತ ಮುಖಂಡ ಶ್ರೀನಿವಾಸ್ ಚಲಪತಿ, ಜಿಲ್ಲಾ ಮುಖಂಡರಾದ ಕೆ ಚಂದ್ರಾರೆಡ್ಡಿ, ಬಿಜೆಪಿ ಜಿಲ್ಲಾಧ್ಯಕ್ಷ ವೇಣುಗೋಪಾಲ್ ಉಪಸ್ಥಿತರಿದ್ದರು.



### ಸಿಬ್ಬಂದಿ 300 ಕಿ.ಮೀ ಬಸ್‌ನಲ್ಲಿ ಬಂದು ಮತದಾನ ಮಾಡಿದುದ್ದರ ಪರಿಣಾಮ

# ಮತದಾನಕ್ಕಾಗಿ ಸರ್ಕಾರಿ ರಜೆ ಘೋಷಣೆ

**ಹುಳಿಯಾರು:** ಏ.26 ಮತ್ತು ಮೇ.7 ರಂದು ಕರ್ನಾಟಕ ರಾಜ್ಯದಲ್ಲಿ ನಡೆಯುವ ಲೋಕಸಭಾ ಚುನಾವಣೆ-2024 ರ ನಿಮಿತ್ತ ರಾಜ್ಯ ಸರ್ಕಾರವು ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವಂತಹ ಮತದಾರರು ಮತ ಚಲಾಯಿಸಲು ಅನುಕೂಲವಾಗುವಂತೆ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳಿಗೆ ನೆಗೋಷಿಯೇಬಲ್ ಇನ್ಸುಮೆಂಟ್ಸ್ ಆಕ್ಟ್ 1891 ರ ಪ್ರಕಾರ ಸಾರ್ವತ್ರಿಕ ರಜೆಯನ್ನು ಸರ್ಕಾರವು ಘೋಷಿಸಿದೆ ಹಾಗೂ 1951 ರ ಪ್ರಜಾಪ್ರತಿನಿಧಿ ಕಾಯ್ದೆಯ ಕಲಂ 135 (ಬಿ) ರಡಿಯಲ್ಲಿ ವೇತನ ಸಹಿತ ರಜೆ ನೀಡಲು ಆದೇಶಿಸಿದೆ. ಅದರಂತೆ ಕೆಎಸ್‌ಆರ್‌ಟಿಸಿ ಇದೇ ಪ್ರಥಮ ಬಾರಿಗೆ ತಮ್ಮ ಸಿಬ್ಬಂದಿ ಮತಚಲಾಯಿಸಲು ಅನುಕೂಲ ಆಗುವಂತೆ ರಜೆ ಘೋಷಿಸಿದೆ.

» ಪ್ರಥಮ ಬಾರಿಗೆ ತಮ್ಮ ಸಿಬ್ಬಂದಿ ಮತಚಲಾಯಿಸಲು ಅನುಕೂಲ

ಇಲ್ಲಿಯವರೆಗೆ ಕೆಎಸ್‌ಆರ್‌ಟಿಸಿ ಚಾಲಕ ಹಾಗೂ ನಿರ್ವಾಹಕರುಗಳು ಯಾವುದೇ ಚುನಾವಣೆಯ ಸಂದರ್ಭದಲ್ಲಿ ಮತದಾನಕ್ಕಾಗಿ ಕೆಎಸ್‌ಆರ್ ಟಿಸಿ ಸಂಸ್ಥೆಯಿಂದ ಯಾವುದೇ ರೀತಿಯ ವಿಶೇಷ ಸವಲತ್ತನ್ನು ಮಾಡಿಕೊಟ್ಟಿರುವುದಿಲ್ಲ. ಆದರೆ ಈ ಹಿಂದೆ ನಡೆದ ವಿಧಾನಸಭೆ ಚುನಾವಣೆಯಲ್ಲಿ ತುಮಕೂರು ಜಿಲ್ಲೆಯ ತುರುವೇಕೆರೆ ಘಟಕನ ಚಾಲಕ ಶಿವಲಿಂಗಯ್ಯ 2023 ರ ಮೇ. 9 ರಂದು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲ್ಪಟ್ಟಿದ್ದರು. ಅವರು ಚುನಾವಣಾ ಅಧಿಕಾರಿ ಹಾಗೂ ಘಟಕ ವ್ಯವಸ್ಥಾಪಕರಲ್ಲಿ ಮತ ಚಲಾವಣೆ ಮಾಡಬೇಕಾಗಿ ತಿಳಿಸಿದರೂ ಸಹ ಅವರನ್ನು ಬಲವಂತದಿಂದ ಚುನಾವಣಾ ಕರ್ತವ್ಯಕ್ಕೆ ಚಿಕ್ಕನಾಯಕನಹಳ್ಳಿಯಿಂದ ಪಾವಗಡಕ್ಕೆ ಕಳಿಸಲಾಗಿತ್ತು. ನಂತರ ನನಗೆ ಮತದಾನ ಮಾಡಲು ಅವಕಾಶ ಕೊಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದರು. ಅದರಂತೆ ಕೆಎಸ್‌ಆರ್‌ಟಿಸಿ ಅಧಿಕಾರಿಗಳು ಇತಿಹಾಸದಲ್ಲಿ ಪ್ರಥಮ ಎನ್ನುವಂತೆ ಸುಮಾರು 300 ಕಿಲೋಮೀಟರ್ ದೂರದ ಅಂದರೆ ತುರುವೇಕೆರೆಯಿಂದ ತುಮಕೂರು, ಮಧುಗಿರಿ ಮಾರ್ಗವಾಗಿ ಪಾವಗಡ ಹತ್ತಿರ ಆಂಧ್ರ, ಗಡಿ ಪ್ರದೇಶದಲ್ಲಿ ಚುನಾವಣಾ ಕರ್ತವ್ಯದಲ್ಲಿದ್ದ ಶಿವಲಿಂಗಯ್ಯನವರಿಗೆ ತನ್ನ ಮತದಾನ ಕೇಂದ್ರ, ಹುಳಿಯಾರು ಹೋಬಳಿಯ ತಮ್ಮಡಿಹಳ್ಳಿ ಗೊಲ್ಲರಹಟ್ಟಿಗೆ ಖಾಲಿ ಬಸ್ ನಲ್ಲಿ ಕೂರಿಸಿಕೊಂಡು ಕರೆದಂತೆ ಮತದಾನ ಮಾಡಿಸಲಾಗಿತ್ತು.

ಈ ಬಗ್ಗೆ ಆ ಸಂದರ್ಭದಲ್ಲಿ ನಮ್ಮ ಪತ್ರಿಕೆ ವಿಸ್ತೃತವಾದ ವರದಿಯನ್ನು ಪ್ರಕಟಿಸಿತು. ಆ ವರದಿ ಆಧರಿಸಿ ಎಸ್.ಎಲ್.ಲೋಕೇಶ್ ಹುಳಿಯಾರ್ ರವರು ಚುನಾವಣೆಯಲ್ಲಿ ಕೆಎಸ್‌ಆರ್‌ಟಿಸಿ ಸಿಬ್ಬಂದಿಗೆ ಮತದಾನಕ್ಕೆ ಅವಕಾಶ ಮಾಡಿಕೊಡಬೇಕೆಂದು ಮುಖ್ಯ ಚುನಾವಣಾ ಆಯೋಗ ಕರ್ನಾಟಕ ಸರ್ಕಾರ. ರಾಜ್ಯಪಾಲರು ಕರ್ನಾಟಕ ಸರ್ಕಾರ ಹಾಗೂ ವ್ಯವಸ್ಥಾಪಕ ನಿರ್ದೇಶಕರು ಕೆಎಸ್‌ಆರ್‌ಟಿಸಿ ಅವರಲ್ಲಿ ಮನವಿ ಸಲ್ಲಿಸಿರುತ್ತಾರೆ. ಅವರ ಮನವಿ ಹಾಗೂ ನಮ್ಮ ಪತ್ರಿಕೆಯ ವರದಿ ಆಧರಿಸಿ ಸರ್ಕಾರದ ವತಿಯಿಂದ ವ್ಯವಸ್ಥಾಪಕ ನಿರ್ದೇಶಕರಿಗೆ ಅಧಿಸೂಚನೆ ನೀಡಿರುತ್ತಾರೆ. ಅಧಿಸೂಚನೆ ಆಧರಿಸಿ ವ್ಯವಸ್ಥಾಪಕ ನಿರ್ದೇಶಕರು ಮತದಾನದ ದಿನವನ್ನು ಸರ್ಕಾರಿ ರಜೆ ದಿನವೆಂದು ಘೋಷಿಸಿ ಆದೇಶ ಹೊರಡಿಸಿರುತ್ತಾರೆ.

ಕ.ರಾ.ರ.ಸಾ.ನಿಗಮವು ಅಗತ್ಯ ಸೇವೆಯಡಿಯಲ್ಲಿ ಬರುವುದರಿಂದ ಏ.26 ಹಾಗೂ ಮೇ.7 ರಂದು ನಡೆಯುವ ಲೋಕಸಭಾ ಚುನಾವಣೆ ದಿನದಂದು ಆಯಾ ಲೋಕಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ನಿಗಮದ ಕೇಂದ್ರ, ಕಛೇರಿ, ವಿಭಾಗೀಯ ಕಛೇರಿಗಳು, ತರಬೇತಿ ಕೇಂದ್ರಗಳಿಗೆ ಸಾರ್ವತ್ರಿಕ ರಜೆ ಘೋಷಿಸಿದೆ. ಘಟಕ, ವಿಭಾಗೀಯ ಕಾರ್ಯಾಗಾರ ಪ್ರಾದೇಶಿಕ ಕಾರ್ಯಾಗಾರ, ಕರಾಸಾ ಮುದ್ರಣಾಲಯ ಹಾಗೂ ಕರಾಸಾ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉದ್ಯೋಗಿಗಳಿಗೆ ಮತದಾನದ ದಿನಾಂಕದಂದು ವೇತನ ಸಹಿತ ರಜೆಯನ್ನು ನೀಡುವುದು.

ಈ ಹಿನ್ನೆಲೆಯಲ್ಲಿ ಚುನಾವಣಾ ದಿನದಂದು ಅವಶ್ಯಕತೆಗೆ ಅನುಗುಣವಾಗಿ ಕನಿಷ್ಠ ಸಂಖ್ಯೆಯಲ್ಲಿ ಸಿಬ್ಬಂದಿಗಳನ್ನು ಬಳಸಿಕೊಳ್ಳುವುದು. ಮುಂದುವರೆದು, ಚುನಾವಣಾ ದಿನದಂದು ಕರ್ತವ್ಯದ ಮೇಲಿರುವ ಸಿಬ್ಬಂದಿಗಳಿಗೆ ಅವರ ಅನುಕೂಲಕ್ಕನುಗುಣವಾಗಿ ಕರ್ತವ್ಯಕ್ಕೆ ಹಾಜರಾಗುವ ಮುನ್ನ ಅಥವಾ ಕರ್ತವ್ಯದ ಅವಧಿಯ ಮಧ್ಯೆ ಮತ ಚಲಾಯಿಸಲು ಅವಕಾಶವನ್ನು ಮಾಡಿಕೊಡುವಂತೆ/ಅನುಮತಿ ನೀಡುವಂತೆ ಸೂಕ್ತಾಧಿಕಾರಿಗಳು ಆದೇಶಿಸಿರುತ್ತಾರೆ.

ಇದರಿಂದ ಬಹಳ ದಿನಗಳಿಂದ ಮತದಾನದಿಂದ ವಂಚಿತರಾಗುತ್ತಿದ್ದ ಹಾಗೂ ಮತದಾನ ಮಾಡಲು ಹೋಗಿ ಗೈರು ಹಾಜರಿ ಆಗುತ್ತಿದ್ದಂತಹ ಸಾವಿರಾರು ಚಾಲನ ಸಿಬ್ಬಂದಿಗಳಿಗೆ ಈ ಆದೇಶದಿಂದ ಉಪಯೋಗವಾಗಿರುತ್ತದೆ. ಇದಕ್ಕಾಗಿ ಶ್ರಮಿಸಿದ ಪತ್ರಿಕೆ ಹಾಗೂ ಎಸ್.ಎಲ್.ಲೋಕೇಶ್ ಹುಳಿಯಾರ್ ರವರಿಗೆ ಕೆಎಸ್‌ಆರ್‌ಟಿಸಿ ಸಿಬ್ಬಂದಿಗಳು ಕೃತಜ್ಞತೆ ಸಲ್ಲಿಸಿರುತ್ತಾರೆ.

## ಟೈಮ್ಸ್ ಪಿಯು ಕಾಲೀಜಿಗೆ ಶೇ.100 ಫಲಿತಾಂಶ

**ತಿಪಟೂರು :** ತಿಪಟೂರಿನಲ್ಲಿ ನಮ್ಮ ಕಾಲೇಜು ಪ್ರಾರಂಭವಾದ ನಂತರದ ದ್ವಿತೀಯ ಪಿಯುಸಿ ಪರೀಕ್ಷೆಯ ಮೊದಲನೆ ಬಾರಿಯೇ ನಮ್ಮ ಟೈಮ್ಸ್ ಪಿಯು ಕಾಲೇಜು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ಪಡೆದಿರುವುದು ನಮಗೆಲ್ಲರಿಗೂ ಸಂತಸದ ವಿಷಯ ಎಂದು ಟೈಮ್ಸ್ ಸಮೂಹ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ. ಗಂಗಾಧರ್ ಸಂತಸ ವ್ಯಕ್ತಪಡಿಸಿದರು.

ನಗರದ ಟೈಮ್ಸ್ ಪಿಯು ಕಾಲೇಜಿನಲ್ಲಿ ಬುಧವಾರ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆ ಬರೆದ 89 ವಿದ್ಯಾರ್ಥಿಗಳಲ್ಲಿ 54 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ, ಉಳಿದ 35 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿನಿ ಸಾಹಿತ್ಯ ರಾಜ್ಯಕ್ಕೆ 12ನೇ ರ್‍ಯಾಂಕ್, ಪೂರ್ವಿಕ 13ನೇ ರ್‍ಯಾಂಕ್, ಅಕ್ಷತಾ 14ನೇ ರ್‍ಯಾಂಕ್ ಹಾಗೂ ಶೃಂಗ ಮತ್ತು ಸಿಂಚನಾ ಸಿ. 15ನೇ ರ್‍ಯಾಂಕ್, ನಂದನಾ 16ನೇ ರ್‍ಯಾಂಕ್ ಪಡೆಯುವ ಮೂಲಕ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ನಮ್ಮ ಕಾಲೇಜಿನ ಮೇಲೆ ನಂಬಿಕೆಯಿಟ್ಟು ಪೋಷಕರು ಕಳುಹಿಸಿದ್ದು ಅವರ ನಂಬಿಕೆಯನ್ನು ಉಳಿಸಿಕೊಳ್ಳುತ್ತೇವೆ. ಸರ್ಕಾರಿ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ಓದಿದ ಮಕ್ಕಳು ನಮ್ಮ ಕಾಲೇಜಿಗೆ ದಾಖಲಾಗಿ ಉತ್ತಮ ಅಂಕಗಳನ್ನು ಪಡೆದುಕೊಂಡಿದ್ದಾರೆ. ಪಠ್ಯದ ಜೊತೆಗೆ ಸಿಇಟಿ, ನೀಟ್, ಕೆಸಿಟಿಯಂತಹ ಕೋಚಿಂಗ್ ನಡೆಸಲಾಗುತ್ತಿದೆ. ನುರಿತ ಉಪನ್ಯಾಸಕರು, ಸುಸಜ್ಜಿತ ಪ್ರಯೋಗಾಲಯಗಳು ಸೇರಿದಂತೆ ಉತ್ತಮ ಸೌಲಭ್ಯಗಳನ್ನು ನಮ್ಮ ಕಾಲೇಜು ಹೊಂದಿದೆ. ಕಾಲೇಜು ಪ್ರಾರಂಭವಾಗಿ ಎರಡು ವರ್ಷವಾಗಿದ್ದು ಪ್ರಸ್ತುತ ದ್ವಿತೀಯ ಪಿಯುಸಿ ಫಲಿತಾಂಶ ನಮ್ಮ ಕಾಲೇಜಿನ ಮೊದಲ ಫಲಿತಾಂಶವಾಗಿದ್ದು, ಉಪನ್ಯಾಸಕರ ಶ್ರಮಕ್ಕೆ ತಕ್ಕ ಪ್ರತಿಫಲ ಮೊದಲ ವರ್ಷದಲ್ಲಿಯೇ ದೊರಕಿದ್ದು ಮುಂದಿನ ದಿನಗಳಲ್ಲಿ ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಪ್ರಥಮ ರ್‍ಯಾಂಕ್ ಪಡೆಯುವತ್ತ ಶ್ರಮಿಸಲಿದ್ದೇವೆ. ಎಲ್ಲರ ಸಹಕಾರ, ಪ್ರೋತ್ಸಾಹದೊಂದಿಗೆ ಮುನ್ನಡೆದುಕೊಂಡು ಹೋಗುತ್ತಿದ್ದು ಪೋಷಕರ ಸಹಕಾರಕ್ಕೆ ನಾವು ಕೃತಜ್ಞರಾಗಿದ್ದೇವೆ ಎಂದರು.

ಈ ಸಂದರ್ಭದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಾದ ಸಾಹಿತ್ಯ ಮತ್ತು ಪೂರ್ವಿಕಾರರನ್ನು ಸನ್ಮಾನಿಸಲಾಯಿತು. ಸುದ್ದಿಗೋಷ್ಠಿಯಲ್ಲಿ ಟೈಮ್ಸ್ ಕಾಲೇಜಿನ ಆಡಳಿತಾಧಿಕಾರಿ ಅನೂಪ್, ಪ್ರಾಂಶುಪಾಲ ಬಿ. ಪ್ರದೀಪ್, ಉಪನ್ಯಾಸಕ ಯೋಗೀಶ್ ಹಾಗೂ ಮತ್ತಿತರರಿದ್ದರು.



# ಎತ್ತಿನ ಹೊಳೆ ಯೋಜನೆ ಶೀಘ್ರದಲ್ಲಿಯೇ ಅನುಷ್ಠಾನ

**ವಿಜಯಪುರ:** ಬಿಜೆಪಿ ಪಕ್ಷದ ಹಲವಾರು ಎಡವಟ್ಟುಗಳಿಂದ ಎತ್ತಿನ ಹೊಳೆ ಯೋಜನೆ ತಡವಾಗಿದ್ದು, ಇದೀಗ ಯೋಜನೆ ಮುಕ್ತಾಯದ ಹಂತದಲ್ಲಿದ್ದು, ಶೀಘ್ರದಲ್ಲಿಯೇ ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಎತ್ತಿನ ಹೊಳೆ ನೀರನ್ನು ಹರಿಸಲಾಗುವುದೆಂದು, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾರಾಮಯ್ಯ ಹೇಳಿದರು.

ಪಟ್ಟಣದ ಪ್ರಗತಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಗುರುವಾರ ಕಾಂಗ್ರೆಸ್ ಪಕ್ಷದ ಮುಖಂಡರೊಂದಿಗೆ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದರು. ದೇಶದಲ್ಲಿ ಸಂವಿಧಾನ ಗಂಡಾಂತರದಲ್ಲಿದೆ. ಅದನ್ನು ಉಳಿಸುವ ಮೂಲಕ ಈ ದೇಶದ ಪ್ರತಿಯೊಬ್ಬ ಭಾರತೀಯರನ್ನು ರಕ್ಷಣೆ ಮಾಡಬೇಕಾದಂತಹ ಅನಿವಾರ್ಯತೆ ಎದುರಾಗಿದೆ ಎಂದು ತಿಳಿಸಿದರು.

ದೇಶದಲ್ಲಿ 10 ವರ್ಷಗಳ ಕಾಲ ಆಡಳಿತ ನಡೆಸಿರುವ ಬಿಜೆಪಿ ಸರ್ಕಾರ, ಕಾಂಗ್ರೆಸ್ ಪಕ್ಷದ ಅವಧಿಯಲ್ಲಿ ಸ್ಥಾಪನೆ ಮಾಡಿದ್ದ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳನ್ನು ಖಾಸಗಿಯವರಿಗೆ ಮಾರಾಟ ಮಾಡುವ ಮೂಲಕ ನಿರುದ್ಯೋಗದ ಸಮಸ್ಯೆಯನ್ನು ಜಾಸ್ತಿ ಮಾಡಿದೆ. ಅವರು ಮತ್ತೊಮ್ಮೆ ಅಧಿಕಾರಕ್ಕೆ ಬಂದರೆ, ಅಂಬೇಡ್ಕರ್ ಅವರು ಈ ದೇಶಕ್ಕೆ ಕೊಟ್ಟ ಸಂವಿಧಾನವನ್ನು ಬದಲಾವಣೆ ಮಾಡಲು ಸಿದ್ಧತೆಗಳು ಮಾಡಿಕೊಂಡಿದ್ದಾರೆ. ರಾಜ್ಯಕ್ಕೆ ಬರಬೇಕಾಗಿರುವ ತೆರಿಗೆಯ ಪಾಲಿಗಾಗಿ ನಾವು ಸುಪ್ರೀಂಕೋರ್ಟ್ ಗೆ ನ್ಯಾಯಕ್ಕಾಗಿ ಹೋಗಬೇಕಾಗಿದೆ. ಕಳೆದ ಚುನಾವಣೆಯಲ್ಲಿ ರಾಜ್ಯದಿಂದ 25 ಮಂದಿ ಬಿಜೆಪಿ ಸಂಸದರನ್ನು ಜನರು ಆಯ್ಕೆ ಮಾಡಿದರು. ಆದರೆ, ಅವರೆಲ್ಲರೂ ಪ್ರಧಾನಿಯ



ಮುಂದೆ ತುಟಿಬಿಚ್ಚಲಿಲ್ಲ. ರಾಜ್ಯಕ್ಕೆ ಬರಬೇಕಾಗಿರುವ ಅನುದಾನಗಳನ್ನು ತರಲಿಲ್ಲ. ಮುಂದಿನ ಚುನಾವಣೆಯಲ್ಲಿ 28 ಸ್ಥಾನಗಳ ಪೈಕಿ 20 ಸ್ಥಾನಗಳಲ್ಲಿ ನಾವು ಗೆಲ್ಲುತ್ತೇವೆ. ಅವರು ಧರ್ಮದ ಹೆಸರಿನಲ್ಲಿ ರಾಜಕೀಯ ಮಾಡುತ್ತಾರೆ. ನಾವು ಮಾನವಧರ್ಮ, ಪ್ರಜಾಪ್ರಭುತ್ವ, ಸಂವಿಧಾನದಡಿಯಲ್ಲಿ ಸಾಮಾಜಿಕ ನ್ಯಾಯ ಕೊಡಲು ರಾಜಕೀಯ ಮಾಡುತ್ತೇವೆ ಆದ್ದರಿಂದ ಪ್ರತಿಯೊಬ್ಬ ಕಾರ್ಯಕರ್ತರು, ರಕ್ಷಾರಾಮಯ್ಯ ಆಗಿ ಕೆಲಸ ಮಾಡಬೇಕು ಎಂದರು.

ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಡಾ.ಕೆ.ಸುಧಾಕರ್ ಅವರು, ನಿರ್ಮಲಾನಂದ ಸ್ವಾಮೀಜಿ ಅವರನ್ನು ಭೇಟಿ ಮಾಡಿರುವ ವಿಚಾರದ ಕುರಿತು ಮಾತನಾಡಿದ ಅವರು, ಸ್ವಾಮೀಜಿ ಅವರನ್ನು ನಾವೂ ಭೇಟಿಯಾಗಿ ಆಶೀರ್ವಾದ ಪಡೆದುಕೊಂಡಿದ್ದೇವೆ. ಅದೇ ರೀತಿ ಅವರೂ ಹೋಗಿದ್ದಾರೆ. ಮತದಾರರು ಅಂತಿಮವಾಗಿ ನಿರ್ಣಯ ಮಾಡುತ್ತಾರೆ ಎಂದರು.

ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಎಂ.ಸತೀಶ್ ಕುಮಾರ್ ಮಾತನಾಡಿ, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿಗಳ ಕುರಿತು ಜನರಿಗೆ ಮನವರಿಕೆ ಮಾಡಿಕೊಟ್ಟು, ಪಕ್ಷದ ಅಭ್ಯರ್ಥಿಗೆ ಹೆಚ್ಚಿನ ಮತಗಳು ಸಿಗುವಂತೆ ಪ್ರತಿಯೊಬ್ಬ ಕಾರ್ಯಕರ್ತರು, ಮುಖಂಡರು ಕೆಲಸ ಮಾಡಬೇಕು ಎಂದರು.

ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ರಾಮಚಂದ್ರಪ್ಪ ಮಾತನಾಡಿ, ದೇಶದಲ್ಲಿ 10 ವರ್ಷಗಳ ಕಾಲ ಆಡಳಿತ ನಡೆಸಿದ ಪ್ರಧಾನಿ ನರೇಂದ್ರಮೋದಿ ಅವರು, ಒಂದು ಬಾರಿಯೂ ಮಾಧ್ಯಮಗಳ ಮುಂದೆ ಧೈರ್ಯವಾಗಿ ಮಾತನಾಡಲಿಲ್ಲ, ಚುನಾವಣಾ ಬಾಂಡ್ ಗಳಲ್ಲಿ ಬಿಜೆಪಿ 6 ಸಾವಿರ ಕೋಟಿ ದೇಣಿಗೆ ಪಡೆದುಕೊಂಡಿದೆ. ಸೋಲಿನ ಭೀತಿಯಲ್ಲಿ ಬಿಜೆಪಿ, ವಿರೋಧ ಪಕ್ಷಗಳ ನಾಯಕರನ್ನು ಜೈಲಿಗೆ ಕಳುಹಿಸುವ ಮೂಲಕ ಸೇಡಿನ ರಾಜಕಾರಣ ಮಾಡುತ್ತಿದೆ. ಕೇವಲ 10 ವರ್ಷಗಳಲ್ಲಿ ಈ ದೇಶದ ಚಿತ್ರಣ ಬದಲಾವಣೆ ಮಾಡಲು ಸಾಧ್ಯವೇ? ಮೋದಿಯವರ ಸುಳ್ಳು ಮಾತುಗಳಿಗೆ ಮರುಳಾಗದೇ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ವಿಜಯಪುರ ಪಟ್ಟಣದಲ್ಲಿ 10 ಸಾವಿರ ಮತಗಳ ಮುನ್ನಡೆ ಕೊಡಬೇಕು ಎಂದರು.

ಪುರಸಭಾ ಮಾಜಿ ಸದಸ್ಯರಾದ ಸಂಪತ್ ಕುಮಾರ್, ಎಂ.ವೀರಣ್ಣಗೌಡ, ಮುನಿಚಿನ್ನಪ್ಪ, ಸಂಪತ್, ಕೆ.ಎಂ.ಮಧು, ಮಹೇಶ್, ಟೌನ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಸ್. ಮಂಜುನಾಥ್, ಬಲಿಜ ಸಂಘದ ಅಧ್ಯಕ್ಷ ಮುನಿರಾಜು, ಆರ್. ಮುನಿರಾಜು, ಹರೀಶ್, ಮುನಿಕೃಷ್ಣಪ್ಪ, ಮರವೇ ಕೆಂಪಣ್ಣ, ಮುಂತಾದವರು ಹಾಜರಿದ್ದರು.

## ದ್ವಿತೀಯ ಪಿಯುಸಿ ಮಹಿಳಾ ಪ್ರಗತಿ ಪದವಿ ಪೂರ್ವ ಕಾಲೇಜಿಗೆ ಶೇ. 95 ಫಲಿತಾಂಶ

**ವಿಜಯಪುರ;** ಪಟ್ಟಣದ ದೇವನಹಳ್ಳಿ ರಸ್ತೆಯಲ್ಲಿನ ತಾಲೂಕಿನಲ್ಲಿಯೇ ಹೆಸರುವಾಸಿಯಾದ ಏಕೈಕ ಇಲ್ಲಿನ ಪ್ರಗತಿ ಬಾಲಕಿಯರ ಪದವಿಪೂರ್ವ ಕಾಲೇಜಿಗೆ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಶೇ. 95ರಷ್ಟು ಫಲಿತಾಂಶ ಬಂದಿದ್ದು, ಉತ್ತಮ ಸಾಧನೆಯನ್ನು ತೋರಿರುವುದಕ್ಕೆ ಕಾಲೇಜಿನ ಸಂಸ್ಥಾಪಕ ಅಧ್ಯಕ್ಷರಾದ ಎಮ್ ಸತೀಶ್ ಕುಮಾರ್ ಶಿಕ್ಷಕರು ಹಾಗೂ ವಿದ್ಯಾರ್ಥಿಗಳನ್ನು ಅಭಿನಂದಿಸಿರುವರು. ಕಾಲೇಜಿನ ಪ್ರಾಂಶುಪಾಲರಾದ ಕೆ.ಮಧುರವರು ಮಾತನಾಡಿ, ಪ್ರಗತಿ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ವಾಣಿಜ್ಯ ಹಾಗೂ ವಿಜ್ಞಾನ ವಿಭಾಗದಿಂದ 177 ಮಂದಿ ಪರೀಕ್ಷೆಗೆ



ನೂರ್ ಆಫ್ಸಾ ಖಾನೂಂ

ಕುಳಿತಿದ್ದು, 50 ಮಂದಿ ಅತ್ಯುನ್ನತ ದರ್ಜೆಯಲ್ಲಿ ಉತ್ತೀರ್ಣರಾಗಿದ್ದು, 105 ಮಂದಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿ, ಒಂಬತ್ತು ಮಂದಿ ದ್ವಿತೀಯ ದರ್ಜೆಯಲ್ಲಿ ಹಾಗೂ ಇಬ್ಬರು ಮಾತ್ರ ಉತ್ತೀರ್ಣ ಅಂಕಗಳನ್ನು ಪಡೆದಿರುವರೆಂದು ತಿಳಿಸಿದರು. ನೂರ್ ಆಫ್ಸಾ ಖಾನೂಂ, 95.5%(573) ಅಂಕಗಳನ್ನು ಪಡೆದಿದ್ದು, ಎಂ ಕೃತಿಕಾ ಶೇ 95.1(571) ಅಂಕಗಳನ್ನು ಪಡೆದಿದ್ದು, ಶಿಜಾ ಕೌಸರ್ 93.83%(563) ಅಂಕಗಳನ್ನು ಪಡೆದಿರುವರೆಂದು, ವಾಣಿಜ್ಯ ವಿಭಾಗದಲ್ಲಿ ಸುಚಿತ್ರ 97.16%(583) ಅಂಕಗಳನ್ನು, ಸಿಎಂ ಐಶ್ವರ್ಯ 97%(582) ಅಂಕಗಳನ್ನು, ಹರ್ಷಿಯ ಶಫೀನಾ ಶೇ 96.5(579) ಅಂಕಗಳನ್ನು, ಭೂಮಿಕಾ ಶೇ.96(576) ಅಂಕಗಳನ್ನು, ಅಹಲ್ಯಾ ಶೇ.92.5(555), ಎಸ್.ನೇತ್ರ ಶೇ.90(536) ಅಂಕ ಪಡೆದಿರುವರೆಂದು ತಿಳಿಸಿದರು.

ಆಡಳಿತಾಧಿಕಾರಿಗಳಾದ ಎಸ್.ಕೃಪಾಶಂಕರ್‌ರವರು ಮಾತನಾಡಿ, ಗ್ರಾಮೀಣ ಹೆಣ್ಣು ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿಯೇ ಕಳೆದ 3 ದಶಕಗಳಿಂದ ಕಾರ್ಯನಿರ್ವಹಿಸುತ್ತಿರುವ ಪ್ರಗತಿ ಶಿಕ್ಷಣ ಸಂಸ್ಥೆಯಲ್ಲಿ ನೀಟ್ ಹಾಗೂ ಮತ್ತಿತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೆಚ್ಚುವರಿ ಅಕಾಡಮಿಗಳನ್ನು ನಡೆಸುತ್ತಿದ್ದು, ಇದರಲ್ಲಿಯೂ ತಾಲೂಕಿನಲ್ಲಿಯೇ ನಮ್ಮ ಶಾಲಾ ವಿದ್ಯಾರ್ಥಿಗಳು ಉತ್ತಮ ಸಾಧನೆ ತೋರಿರುವರೆಂದು ತಿಳಿಸಿದರು.

# ಕೇಂದ್ರದ ಸಾಧನೆ ಶೂನ್ಯ

**ಚಾಮರಾಜನಗರ:** ಕೇಂದ್ರದಲ್ಲಿ ಕಳೆದ 10 ವರ್ಷಗಳಿಂದ ಆಡಳಿತ ನಡೆಸಿದ ಬಿಜೆಪಿ ಕೇಂದ್ರ ಸರ್ಕಾರ ಸಾಲದ ಪ್ರಮಾಣ ದುಪ್ಪಟ್ಟು ಮಾಡಿದ್ದು, ಅಗತ್ಯವಸ್ತುಗಳ ಬೆಲೆಏರಿಕೆ ಮಾಡಿದ್ದೇ ಸಾಧನೆಯಾಗಿದೆ. ದೇಶದ ಅಭಿವೃದ್ಧಿ ವಿಚಾರದಲ್ಲಿ ಬಿಜೆಪಿಯದು ಬರೀ ಶೂನ್ಯ ಎಂದು ಚಾಮರಾಜನಗರ ಲೋಕಸಭೆ ಕ್ಷೇತ್ರ ಕಾಂಗ್ರೆಸ್ ಮಾಧ್ಯಮ ಸಂಯೋಜಕ ಹಾಗೂ ಜಿ.ಪಂ. ಮಾಜಿ ಸದಸ್ಯ ಕೆರಹಳ್ಳಿ ನವೀನ್ ದೂರಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಅವಧಿಯಲ್ಲಿ ವಿದೇಶದಲ್ಲಿರುವ ಕಪ್ಪು ಹಣತಂದು ದೇಶದ ಪ್ರತಿಯೊಬ್ಬರ ಖಾತೆಗೆ 15ಲಕ್ಷ ರೂ.ಗಳನ್ನು ಹಾಕುವುದಾಗಿ ಹೇಳಿದ್ದರು. ಒಂದು ರೂಪಾಯಿ ಬಡವರ ಬ್ಯಾಂಕ್ ಖಾತೆಗೆ ಬರಲಿಲ್ಲ. 128 ಲಕ್ಷ ಕೋಟಿ ಆದಾಯ ಬಂದಿದೆ. ಆದರೆ ಸಾಲದ ಪ್ರಮಾಣ ಮಾತ್ರ ಏರುತ್ತಲೇ ಇದೆ. ಅಗತ್ಯ ವಸ್ತುಗಳ ಬೆಲೆಯೇರಿಕೆಯಿಂದ ಜನರು ತತ್ತರಿಸುತ್ತಿದ್ದಾರೆ. ಮನಮೋಹನ್‌ಸಿಂಗ್ ಅವರು ಪ್ರದಾನಿಯಾಗಿದ್ದ ವೇಳೆ ರೈತರ 75 ಸಾವಿರ ಕೋಟಿ ಮನ್ನಾ ಮಾಡಿದ್ದರು ಎಂದರು.

ಪ್ರಧಾನಿ ಮೋದಿ ಅವರು ಕಳೆದ 10 ವರ್ಷಗಳ ಅವಧಿಯಲ್ಲಿ ಸಾಲ ಮನ್ನಾ ಮಾಡುವ ಮಾತಿರಲಿ, ದೆಹಲಿ ಗಡಿಯಲ್ಲಿ ಹಕ್ಕು ಕೇಳಲು ಹೋದ ರೈತರ ಹೋರಾಟವನ್ನು ಹತ್ತಿಕುವ ಕೆಲಸವನ್ನು ಮಾಡಿದರು. ಇನ್ನು ರೈತರ ಆದಾಯ ದ್ವಿಗುಣ ಮಾಡುವುದಾದರೂ ಹೇಗೆ ಎಂದು ಪ್ರಶ್ನಿಸಿದರು.

10 ವರ್ಷದ ಅವಧಿಯಲ್ಲಿ ರೈತರ ಅನೂಕೂಲಕ್ಕಾಗಿ ನದಿಜೋಡಣೆ ಮಾಡುವುದಾಗಿ ಘೋಷಣೆ ಮಾಡಿದ್ದರು. ಅದು ಆಗಲಿಲ್ಲ. ಲೋಕಪಾಲ್ ಮಸೂದೆ ಜಾರಿ ಮಾಡಲಿಲ್ಲ, ಭ್ರಷ್ಟಾಚಾರ, ಭಯೋತ್ಪಾದಕ ಚಟುವಟಿಕೆಗಳಿಗೆ ಕಡಿವಾಣ ಹಾಕಿಲ್ಲ. ಸಾರ್ವಜನಿಕ ಸ್ವಾಮ್ಯದ ಉದ್ದಿಮೆಗಳನ್ನು ಒಂದೊಂದಾಗಿ ಖಾಸಗೀಕರಣ ಮಾಡಲಾಗುತ್ತಿದೆ. ಚಾಮರಾಜನಗರ ಲೋಕಸಭೆ ಕ್ಷೇತ್ರದ ಅಭಿವೃದ್ದಿಗೆ ಮೋದಿ ಸರ್ಕಾರ ನಯಾಪೈಸೆ ಅನುದಾನ ನೀಡಿಲ್ಲ. ರಾಜ್ಯ ಹಾಗೂ ದೇಶದ ಜನತೆಗೆ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೆ ತರಲು ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಚಾಮರಾಜನಗರ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಸುನಿಲ್ ಬೋಸ್ ಅವರನ್ನು ಗೆಲ್ಲಿಸಬೇಕು, 10 ವರ್ಷದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಮಾಡದ ಬಿಜೆಪಿಯನ್ನು ಕಿತ್ತೊಗೆಯಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷದಲ್ಲಿದ್ದು, ದಿ. ಆರ್. ಧ್ರುವನಾರಾಯಣ್ ಅವರ ಆತ್ಮೀಯ ಗೆಳೆಯ ಎಂದು ಹೇಳಿಕೊಳ್ಳುವ ಬಾಲರಾಜು ಅವರ ನಿಧನದ ಬಳಿಕ ಅವರ ಮಗನಿಗೆ ಕಾಂಗ್ರೆಸ್ ಟಿಕೆಟ್ ಘೋಷಣೆಯಾಯಿತು. ದುಃಖದಲ್ಲಿ ಸ್ನೇಹಿತನ ಮಗನ್ನು ಗೆಲ್ಲಿಸುವ ಮಾನವೀಯತೆಯನ್ನು ತೋರದ ಬಿಜೆಪಿಗೆ ಹೋದವರು. ಈಗ ಬಿಜೆಪಿಯಲ್ಲಿ ಲೋಕಸಭಾ ಸಭೆ ಟಿಕೆಟ್ ದೊರೆತದಾಗ ಧ್ರುವನಾರಾಯಣ್, ಎಚ್. ಎಚ್. ಮಹದೇವಪ್ರಸಾಧ್ ಅವರ ಸಮಾಧಿಗಳು ನೆನಪಿಗಾಗಿ ಅಲ್ಲಿ ಹೋಗಿ ಕಣ್ಣೀರಿಟ್ಟು, ಅವರ ಅಭಿಮಾನಿಗಳು ಹಾಗು ಅನುಯಾಯಿಗಳು ನನ್ನ ಪರವಾಗಿದ್ದಾರೆ ಎಂದು ತಪ್ಪು ಸಂದೇಶವನ್ನು ಮತದಾರರಿಗೆ ನೀಡುವ ಮೂಲಕ ನೇರವಾಗಿ ಚುನಾವಣೆ ತೋರಿಸಿ, ಬಿಜೆಪಿ ಸಾಧನೆಯನ್ನು ನೋಡಿ ಮತ ಹಾಕಿ ಎಂದು ಹೇಳಿ. ಪಕ್ಷದ ವಿರುದ್ದವಾಗಿ ಎಂದೋ ಹೋಗಬೇಡಿ ಎಂದು ನಮ್ಮ ನಾಯಕರು ಹೇಳಿಕೊಟ್ಟಿದ್ದಾರೆ. ಅವರು ಪಕ್ಷದತಾಯಿ ಇದ್ದಂತೆ , ತಾಯಿಗೆ ದ್ರೋಹ ಮಾಡಬೇಡಿ ಎಂದು ಅವರ ಅನಯಾಯಿಗಳಾದ ನಮಗೆ ಹೇಳಿಕೊಟ್ಟಿದ್ದಾರೆ ಎಂದು ಬಾಲರಾಜ್‌ಗೆ ನವೀನ್ ಹಾಗೂ ಮಹದೇವ್ ಟಾಂಗ್ ಕೊಟ್ಟರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಆರ್.ಮಹದೇವ್, ತಾಪಂ ಮಾಜಿಸದಸ್ಯ ಮಹದೇವಶೆಟ್ಟಿ, ಎಸ್ಸಿ ಮೋರ್ಚಾ ರಾಜ್ಯ ಪ್ರದಾನ ಕಾರ್ಯದರ್ಶಿ ಪು.ಶ್ರೀನಿವಾಸನಾಯಕ, ಸಾಮಾಜಿಕ ಜಾಲತಾಣ ಜಿಲ್ಲಾಧ್ಯಕ್ಷ ಸಯ್ಯದ್ ಮುಜಾಯಿದ್, ನಟರಾಜು ಹಾಜರಿದ್ದರು.



# ಕೊಳ್ಳೇಗಾಲ, ಹನೂರಿನಲ್ಲಿ ಬಿಜೆಪಿ ಪರ ಮತಯಾಚನೆ

### ಜೆಡಿಎಸ್ ಶಾಸಕ ಸಾಥ್; ಹಾರಾಜಿಸಿದ ಜೆಡಿಎಸ್ ಬಾವುಟ



**ಹನೂರು:** ಕಳೆದ ಹತ್ತು ವರ್ಷಗಳಿಂದ ಭ್ರಷ್ಟಾಚಾರ ರಹಿತ, ಪಾರದರ್ಶಕತೆ ಆಡಳಿತ ನೀಡಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ರವರನ್ನು ಮೂರನೇ ಬಾರಿಗೆ ಪ್ರಧಾನಮಂತ್ರಿಗಳನ್ನಾಗಿ ಮಾಡಲು ಎನ್.ಡಿ.ಎ ಅಭ್ಯರ್ಥಿ ಎಸ್ ಬಾಲರಾಜುರವರಿಗೆ ಹೆಚ್ಚಿನ ಮತ ನೀಡುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈವಿಜಯೇಂದ್ರ ಮತ ಯಾಚನೆ ಮಾಡಿದರು.

ಹನೂರು ಪಟ್ಟಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಲೋಕಸಭಾ ಅಭ್ಯರ್ಥಿ ಬಾಲರಾಜು ಪರ ಮತಯಾಚನೆ ರೋಡ್ ಶೋ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಕಳೆದ ಹತ್ತು ವರ್ಷಗಳ ಅವಧಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ರವರು ಉತ್ತಮ ಆಡಳಿತ ನೀಡಿದ್ದಾರೆ ಇಡೀ ವಿಶ್ವದಲ್ಲೇ ಜನ ಮನ್ನಣೆ ಗಳಿಸಿದ್ದಾರೆ. ಈ ಬಾರಿ ದೇಶದಲ್ಲಿ ಬಿಜೆಪಿ 400 ಸ್ಥಾನಗಳನ್ನು ಗೆಲ್ಲುವ ಮೂಲಕ ಹೊಸ ಚರಿತ್ರೆಯನ್ನು ಸೃಷ್ಟಿಸಲು ಪಕ್ಷ ಸಂಘಟನೆ ಮಾಡಲಾಗುತ್ತಿದೆ.

ಇದೇ ರೀತಿ ರಾಜ್ಯದಲ್ಲಿ ಮುಖ್ಯಮಂತ್ರಿ ಆಗಿದ್ದ ಯಡಿಯೂರಪ್ಪನವರು ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ ರಚನೆ ಮಾಡಿ 120 ಕೋಟಿ ಅನುದಾನ ನೀಡಿದ್ದರು, ಮಾರ್ಟಳ್ಳಿ ಹಾಗೂ ಹಲಗಾಪುರ ಕೆರೆ ಅಭಿವೃದ್ಧಿ ಮಾಡಲು 150 ಕೋಟಿ ವೆಚ್ಚದಲ್ಲಿ ಕ್ರಿಯಾಯೋಜನೆ ಮಾಡಲಾಗಿತ್ತು. ಆದರೆ ಯಡಿಯೂರಪ್ಪನವರು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ನಂತರ ಆ ಯೋಜನೆ ಸ್ಥಗಿತವಾಯಿತು. ಮುಂದಿನ ದಿನಗಳಲ್ಲಿ ಬಿಜೆಪಿ ಸರ್ಕಾರ ಬಂದರೆ ಶಾಶ್ವತ ನೀರಾವರಿ ಯೋಜನೆ ಮಾಡಿಕೊಡುತ್ತೇವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ವಿದ್ಯುತ್ ದರ ,ಹಾಲು, ಜಮೀನುಗಳ ಪೋಡು, ಮುದ್ರಾಣಾಂಕದ ದರವನ್ನು ಏರಿಕೆ ಮಾಡಿ ರಾಜ್ಯದ ಜನತೆಗೆ ಸಂಕಷ್ಟಕ್ಕೆ ಏನು ಮಾಡಿದ್ದಾರೆ ಇದಲ್ಲದೆ ಯಡಿಯೂರಪ್ಪನವರು ಮುಖ್ಯಮಂತ್ರಿ ಆಗಿದ್ದಾಗ ರೈತರ ಹೊಸ ಟ್ರಾನ್ಸ್ ಫಾರಂ ಅಳವಡಿಸಿಕೊಳ್ಳಲು 25,000 ನಿಗದಿ ಮಾಡಿದ್ದರು ಆದರೆ ಕಾಂಗ್ರೆಸ್ ಸರ್ಕಾರ ಮೂರು ಲಕ್ಷ ನಿಗದಿ ಮಾಡಿರುವುದರಿಂದ ರೈತರಿಗೆ ತುಂಬಾ ತೊಂದರೆಯಾಗಿದೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯ ಸರ್ಕಾರ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ, ಗೃಹಲಕ್ಷ್ಮಿ ಯೋಜನೆ ಅಡಿ 2,000 ಹಣ ನೀಡಿ ಮಧ್ಯದ ದರ ಹೆಚ್ಚು ಮಾಡಿ ಒಂದು ಕೈಯಿಂದ ಕೊಟ್ಟು ಇನ್ನೊಂದು ಕೈಯಿಂದ ಕಿತ್ತುಕೊಳ್ಳುತ್ತಿದ್ದಾರೆ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಹೈನುಗಾರಿಕೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಒಂದು ಲೀಟರ್ ಗೆ ಐದು ರೂಪಾಯಿ ಪ್ರೋತ್ಸಾಹ ಧನ ನೀಡಲಾಗುತ್ತಿತ್ತು. ಇದೀಗ ಪ್ರೋತ್ಸಾಹ ಧನವನ್ನು ನೀಡಿಲ್ಲ ಎಂದರು.

ಶಾಸಕ ಎಂಆರ್ ಮಂಜುನಾಥ್ ಮಾತನಾಡಿ ಅನು ವಿಧಾನಸಭಾ ಕ್ಷೇತ್ರದಲ್ಲಿ ಹತ್ತಾರು ಸಮಸ್ಯೆಗಳಿದೆ ಈ ಸಮಸ್ಯೆಗಳನ್ನು ಬಗೆಹರಿಸಲು ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜುರವರಿಗೆ ಹೆಚ್ಚಿನ ಮತ ನೀಡಿದರೆ ನಾವಿಬ್ಬರು ಕ್ಷೇತ್ರದ ಅಭಿವೃದ್ಧಿಯನ್ನು

### ಬೃಹತ್ ರೋಡ್ ಶೋ

**ದೇಶ ಹಾಗೂ ರಾಜ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು 10 ವರ್ಷಗಳ ಭ್ರಷ್ಟಾಚಾರ ರಹಿತ ಹಾಗೂ ಅಭಿವೃದ್ಧಿ ಪರವಾದ ಆಡಳಿತದಿಂದ ಜನರು ಮೆಚ್ಚುಗೆ ವ್ಯಕ್ತವಾಗಿದ್ದು, ಮೋದಿ ಪರ ಆಲೆ ಇದ್ದು, ರಾಜ್ಯದ 28 ಕ್ಷೇತ್ರಗಳಲ್ಲಿಯೂ ಎನ್‌ಡಿಯ ಮೈತ್ರಿಕೂಟದ ಅಭ್ಯರ್ಥಿಗಳು ಜಯಗಳಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಭಿಪ್ರಾಯ ವ್ಯಕ್ತಪಡಿಸಿದರು. ಚಾ.ನಗರ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಕೊಳ್ಳೇಗಾಲ ಹಾಗೂ ಹನೂರು ವಿಧಾನಸಭಾ ಕ್ಷೇತ್ರದಲ್ಲಿ ಬೃಹತ್ ರೋಡ್ ಶೋಗೂ ಮುನ್ನಾ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 10 ತಿಂಗಳು ಕಾಂಗ್ರೆಸ್ ಆಡಳಿತದಿಂದ ಜನರು ಬೇಸತ್ತಿದ್ದಾರೆ. ಕೇವಲ 5 ಗ್ಯಾರಂಟಿಗಳನ್ನು ಇಟ್ಟುಕೊಂಡು ಕಾಂಗ್ರೆಸ್ಸಿಗರು ಮಾತನಾಡುತ್ತಿದ್ದಾರೆ. ರೈತರು ಹಾಗೂ ಬಸವರ ಬಗ್ಗೆ ಇವರ ಯೋಜನೆಗಳು ಏನು? ಈ ಗ್ಯಾರಂಟಿಗಳು ಸಹ ಸಮರ್ಪಕವಾಗಿ ಮಹಿಳೆಯರಿಗೆ ತಲುಪಿಲ್ಲ. ಹೋದ ಕಡೆಗಳಲ್ಲಿ ಮಹಿಳೆಯರೇ ಈ ಸರ್ಕಾರ ವಿರುದ್ದ ಹಿಡಿಶಾಪ ಹಾಕುತ್ತಿದ್ದಾರೆ ಎಂದು ದೂರಿದರು.**

ಮಾಡುತ್ತೇವೆ. ಜೆಡಿಎಸ್ ಪರಮೋಚ್ಚ ನಾಯಕರಾದ ಎಚ್ ಡಿ ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಎಚ್ ಡಿ ಕುಮಾರಸ್ವಾಮಿ ರವರು ನರೇಂದ್ರ ಮೋದಿ ರವರನ್ನು ಮೂರನೇ ಬಾರಿಗೆ ಪ್ರಧಾನ ಮಂತ್ರಿ ಮಾಡಲು ಮೈತ್ರಿ ಮಾಡಿಕೊಂಡಿದ್ದಾರೆ ನಾವು ಮೈತ್ರಿ ಪಾಲನೆ ಮಾಡಬೇಕು ಎಂದು ಕಾರ್ಯಕರ್ತರಿಗೆ ತಿಳಿಸಿದರು.

ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜು ಮಾತನಾಡಿ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿಗಳು ಸಮರ್ಪಕವಾಗಿ ಜಾರಿಯಾಗಿಲ್ಲ, ಶಕ್ತಿ ಯೋಜನೆ ಅಡಿ ಉಚಿತ ಬಸ್ ಪ್ರಯಾಣ ಮಾಡಿ ಡಕೋಟಾ ಬಸ್ ಗಳನ್ನು ಬಿಟ್ಟಿದ್ದಾರೆ, ಯುವ ನಿಧಿ ಯೋಜನೆಯಡಿ 3 ಸಾವಿರ ಕೊಡುವುದಾಗಿ ಹೇಳಿದ್ದರು ಸರ್ಕಾರ ಬಂದ ನಂತರ ನಿಯಮ ತಂದಿದ್ದಾರೆ ಇದರಿಂದ ನಿರುದ್ಯೋಗಿಗಳಿಗೆ ಮೋಸ ಮಾಡಿದ್ದಾರೆ. ಈ ನಿಟ್ಟಿನಲ್ಲಿ ಮೋದಿರವರ ಹಲವು ಜನ ಪರ ಕಾರ್ಯಕ್ರಮಗಳನ್ನು ಬೆಂಬಲಿಸಿ ಬಿಜೆಪಿ ಪಕ್ಷಕ್ಕೆ ಬೆಂಬಲ ನೀಡುವಂತೆ ಮನವಿ ಮಾಡಿದರು.

ಈ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ನಿರಂಜನ್ ಕುಮಾರ್, ಚುನಾವಣಾ ಉಸ್ತುವಾರಿ ಪ್ರಣೇಶ್, ಹನೂರು ಉಸ್ತುವಾರಿ ಡಾ.ಬಾಬು, ಮುಖಂಡರಾದ ಡಾ.ಪ್ರೀತನ್ ನಾಗಪ್ಪ, ಜನಧ್ವನಿ ವೆಂಕಟೇಶ್, ನಿಶಾಂತ್, ಬಿ.ಕೆ ಶಿವಕುಮಾರ್ , ಮಲೆ ಮಹದೇಶ್ವರ ಮಂಡಲ ಅಧ್ಯಕ್ಷ ಚಂಗವಾಡಿ ರಾಜು ಸೇರಿದಂತೆ ಜೆಎಸ್‌ಎಸ್ ಬಿಜೆಪಿ ಕಾರ್ಯಕರ್ತರು ಮುಖಂಡರು ಹಾಜರಿದ್ದರು.

## ರಾಜ್ಯದ 28 ಸ್ಥಾನಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ : ಕೆ.ಎಚ್.ಮುನಿಯಪ್ಪ

**ಚಾಮರಾಜನಗರ:** ಜನರ ಆಶೀರ್ವಾದಿಂದ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಸ್ಥಾನಗಳಲ್ಲೂ ಕಾಂಗ್ರೆಸ್ ಗೆಲುವು ಸಾಧಿಸಲಿದೆ ಎಂದು ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ.ಎಚ್.ಮುನಿಯಪ್ಪ ವಿಶ್ವಾಸ ವ್ಯಕ್ತಪಡಿಸಿದರು. ನಗರದ ರಾಮಸಮುದ್ರ 30ನೇ ವಾರ್ಡ್ ನ ಡಾ.ಬಾಬುಜಗಜೀವನರಾಂ ಬಡಾವಣೆಯಲ್ಲಿ ಶಾಸಕರು, ಪಕ್ಷದ ಮುಖಂಡರೊಂದಿಗೆ ಕಾಂಗ್ರೆಸ್ ಅಭ್ಯರ್ಥಿ ಸುನೀಲ್‌ಬೋಸ್ ಪರ ಮತಯಾಚಿಸಿ ಮಾತನಾಡಿದರು. ಕಾಂಗ್ರೆಸ್ ಪಕ್ಷ

**» ರಾಮಸಮುದ್ರದಲ್ಲಿ ಕೈ ಅಭ್ಯರ್ಥಿ ಸುನೀಲ್‌ಬೋಸ್ ಪರ ಮತಯಾಚನೆ**

ವಿಧಾನಸಭಾ ಚುನಾವಣೆ ಪೂರ್ವದಲ್ಲಿ ಘೋಷಣೆ ಮಾಡಿದ ಪ್ರಣಾಳಿಕೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ರಾಜ್ಯದ ಜನತೆಗೆ ಅನುಕೂಲ ಮಾಡಿಕೊಡಿದೆ. ನುಡಿದಂತೆ ನಡೆಯುವ ಮೂಲಕ ಜನರ ವಿಶ್ವಾಸವನ್ನು ಗಳಿಸಿದೆ, ಜನರ ವಿಶ್ವಾಸದಿಂದ ಮೈಸೂರು-ಕೊಡುಗು, ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದ ಸೇರಿದಂತೆ ರಾಜ್ಯದ 28 ಸ್ಥಾನಗಳಲ್ಲಿ ಕಾಂಗ್ರೆಸ್ ಜಯಭೇರಿ ಬಾರಿಸಲಿದೆ ಎಂದರು. ಏ. 26 ರಂದು ನಡೆಯುವ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಅವರನ್ನು ಅತ್ಯಧಿಕ ಮತಗಳಿಂದ ಜಯಶೀಲರನ್ನಾಗ ಮಾಡಿ ತಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು. ಈ ಸಂದರ್ಭದಲ್ಲಿ ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್.ಕೃಷ್ಣಮೂರ್ತಿ, ವಿಧಾನ ಪರಿಷತ್ ಸದಸ್ಯ ಡಾ.ತಿಮ್ಮಯ್ಯ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ, ವಾಲ್ಮೀಕಿ ಅಭಿವೃದ್ದಿ ನಿಗಮದ ಮಾಜಿ ಅಧ್ಯಕ್ಷ ಎಸ್.ಬಸವರಾಜು, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ದಿ ನಿಗಮ ಮಾಜಿ ನಿರ್ದೇಶಕ ಎಂ.ಶಿವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಮ್ಮದ್‌ಅಸ್ಗರ್, ಎಚ್.ವಿ.ಚಂದ್ರು, ಆರ್. ಕೆ.ಶಿವಕುಮಾರ್, ರಾಚಯ್ಯ ಇತರರು ಹಾಜರಿದ್ದರು.



## ಸಿದ್ದರಾಮಯ್ಯನವರು 2ನೇ ದೇವರಾಜ ಅರಸ್ ಆಗಿದ್ದಾರೆ

**ಚಾಮರಾಜನಗರ:** ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳು ಹಾಗೂ ಪಕ್ಷದ ತತ್ವ, ಸಿದ್ದಾಂತ ಒಪ್ಪಿಕೊಂಡು ಇಂದು ಕೊಳ್ಳೇಗಾಲದಲ್ಲಿ ನಡೆಯುವ ಕಾರ್ಯಕರ್ತರ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸಮ್ಮುಖದಲ್ಲಿ ಜೆಡಿಎಸ್ ತೊರೆದು ಕಾಂಗ್ರೆಸ್ ಸೇರುವುದಾಗಿ ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಬಾಗಳಿ ರೇವಣ್ಣ ಹೇಳಿದರು. ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಟಿಯಲ್ಲಿ ಅವರು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಜಾರಿ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಿಂದ ದೀನದಲಿತರು, ಹಿಂದುಳಿದವರಿಗೆ, ಬಡವರಿಗೆ, ಮಹಿಳೆಯರಿಗೆ ತುಂಬಾ ಅನುಕೂಲವಾಗುತ್ತಿದೆ ಇದನ್ನು ಮನಗಂಡು ಕಾಂಗ್ರೆಸ್‌ಗೆ ಸೇರುತ್ತಿದ್ದೇನೆ. ಈ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯನವರು 2ನೇ ದೇವರಾಜು ಅರಸ್ ಆಗಿದ್ದಾರೆ ಎಂದರು.

ಜೆಡಿಎಸ್‌ನಲ್ಲಿ ಕಾರ್ಯಕರ್ತನಾಗಿ, ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ ಪ್ರಾಮಾಣಿಕವಾಗಿ ಸಂಘಟನೆ ಮಾಡಿಕೊಂಡು ಬಂದಿದ್ದೆ. ಮಾಜಿ ಮುಖ್ಯಮಂತ್ರಿ ಎಚ್ .ಡಿ.ಕುಮಾರಸ್ವಾಮಿ ಅವರು ಪ್ರಧಾನ ಕಾರ್ಯದರ್ಶಿಯಾಗಿ ಮಾಡಿ ನೀನು ಹಿಂದುಳಿದ ಸಮುದಾಯ ಉಪ್ಪಾರ ಸಮುದಾಯ ನಿಮ್ಮ ಅವಶ್ಯಕತೆ ಪಕ್ಷಕ್ಕೆ ಬೇಕಿದೆ. ಎಂದು ದೊಡ್ಡ ಜವಾಬ್ದಾರಿ ಕೊಟ್ಟಿದ್ದರು. 2023 ರ ವಿಧಾನಸಭಾ ಚುನಾವಣೆಯಲ್ಲಿ ಚಾಮರಾಜನಗರ ಸಾಮಾನ್ಯ ಕ್ಷೇತ್ರದಿಂದ ಪ್ರಬಲ ಆಕಾಂಕ್ಷಿಯಾಗಿದ್ದೆ. ಕೊನೆ ಕ್ಷಣದಲ್ಲೇ ಬಿ ಫಾರಂ ಕೈ ತಪ್ಪಿತು. ತುಂಬಾ ನೋವುಂಟಾಯಿತು. ನನಗೆ ಟಿಕೆಟ್ ಕೈ ತಪ್ಪಲು ಜಿಲ್ಲಾಧ್ಯಕ್ಷ ಮಂಜುನಾಥ್ ಕಾರಣ. ಬಿಜೆಪಿಯಿಂದ ಬಂದವರಿಗೆ ಟಿಕೆಟ್ ನೀಡಿದರು. ತದ ನಂತರ ನನ್ನನ್ನು ಯಾವುದೇ ಸಭೆ, ಸಮಾರಂಭಗಳಿಗೆ ಆಹ್ವಾನಿಸಲಿಲ್ಲ ಇದರಿಂದ ತುಂಬಾ ಅನ್ಯಾಯವಾಯಿತು ಆದರಿಂದ ಬೇಸತ್ತು ಜೆಡಿಎಸ್ ತೊರೆದು ಕಾಂಗ್ರೆಸ್ ಸೇರುವುದಾಗಿ ಬಾಗಳಿ ರೇವಣ್ಣ ತಿಳಿಸಿದರು. ಗ್ರಾ.ಪಂ.ಮಾಜಿ ಅಧ್ಯಕ್ಷ ಪುಟ್ಟಸ್ವಾಮಿ, ನಗರಸಭಾ ಮಾಜಿ ಸದಸ್ಯ ವರದರಾಜು, ಸಿದ್ದಯ್ಯನಪುರ ಧನಂಜಯ, ಸಿದ್ದರಾಜು, ರೈತ ಮುಖಂಡಮಹೇಶ್, ಶ್ರೀಕಂಠ ಹಾಜರಿದ್ದರು.

### ಲೋಕಸಭಾ ಚುನಾವಣೆಗೆ ಭರ್ಜರಿಯಾದ ಮತದಾನದ ಜಾಗೃತಿ( ಸ್ವೀಪ್) ಕಾರ್ಯಕ್ರಮ

# ಕೋಲಾರ ಎಸ್.ಸಿ. ಮೀಸಲು ಕ್ಷೇತ್ರದಲ್ಲಿ ಭರ್ಜರಿ ಮತದಾನ ಜಾಗೃತಿ

**ಕೋಲಾರ:** ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಹಾಗೂ ಸ್ವಸಹಾಯ ಸಂಘಗಳ ಮೂಲಕ 1, 15 ,121 ಸದಸ್ಯರ ಮೂಲಕ ಮುಂಬರುವ ಲೋಕಸಭಾ ಚುನಾವಣೆಗೆ ಭರ್ಜರಿಯಾದ ಮತದಾನದ ಜಾಗೃತಿ( ಸ್ವೀಪ್) ಕಾರ್ಯಕ್ರಮ ನಡೆಯುತ್ತಿದೆ.

ಈ ಬಾರಿ ಹೆಚ್ಚು ಮತದಾನ ಆಗುವಂತೆ ನೋಡಿಕೊಳ್ಳಲು 835 ಸ್ವೀಪ್ ಕಾರ್ಯಕ್ರಮಗಳು ಇದುವರೆಗೂ ರೂಪಿಸಿ ಯಶಸ್ವಿಗೊಳಿಸಲಾಗಿದೆ. 2019ರ ಕೋಲಾರ ಲೋಕಸಭಾ ಚುನಾವಣೆಯಲ್ಲಿ ಕಡಿಮೆ ಮತದಾನವಾಗಿರುವ ಮತಗಟ್ಟೆಗಳ ಸ್ಥಳಗಳಲ್ಲಿ ಈ ಸಲ ಎರಡು ಮೂರು ಬಾರಿ ಮತದಾನದ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಿ ಹೊಸ ಮತದಾರರನ್ನು ಸೇರ್ಪಡೆಗೊಳಿಸಲು ಬಹು ಶ್ರಮಿಸಿದವರು ಮುಖ್ಯವಾಗಿ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾಧಿಕಾರಿಯಾದ ಅಕ್ರಂಪಾಷ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಸ್ವೀಪ್ ನ ಮುಖ್ಯಸ್ಥರು ಆಗಿರುವ ಪದ್ಮಾಬಸವಂತಪ್ಪ ಅವರು . ಗ್ರಾಮೀಣ ಪ್ರದೇಶಗಳಲ್ಲಿ 7,07,320 ನಗರ ಪ್ರದೇಶಗಳಲ್ಲಿ 3,67,980 ಜನರಿಗೆ ಸ್ವೀಪ್ ಕಾರ್ಯಕ್ರಮಗಳನ್ನು ಮಾಡಿದ್ದರಿಂದ 33497 ಹೊಸ ಯುವ ಮತದಾರರನ್ನು ಸೇರ್ಪಡೆ ಮಾಡಿಕೊಳ್ಳಲು ಸಾಧ್ಯವಾಗಿದೆ. ಇದಕ್ಕಾಗಿ ಜಾಗೃತಿ ಸಂಘಗಳನ್ನು, ಅಧಿಕಾರಿಗಳನ್ನು, ಸ್ವಯಂಸೇವಕರನ್ನು ,ಮಹಿಳಾ ಸಂಘಗಳನ್ನು ಸಾರ್ವಜನಿಕರನ್ನು, ಕಾಲೇಜುಗಳ ಅಧ್ಯಾಪಕರನ್ನು ಮತ್ತು ವಿದ್ಯಾರ್ಥಿಗಳನ್ನು ಭಾಗವಹಿಸುವಂತೆ ನೋಡಿಕೊಂಡು ಮತದಾನದ ಪ್ರತಿಜ್ಞಾವಿಧಿಯನ್ನು ಬೋಧಿಸಲಾಗಿದೆ.

ಕೈಗಾರಿಕೆಗಳಲ್ಲಿ ಮತ್ತು ಕಂಪನಿಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕರಿಗೆ ಬಿಡುವು ಸಮಯದಲ್ಲಿ,ವಿಶ್ರಾಂತಿ ಸಮಯದಲ್ಲಿ ಮತದಾನದ ಜಾಗೃತಿಯನ್ನು ತಿಳಿಸಿ ಆ ಮೂಲಕ ಕಾರ್ಮಿಕರು ಪ್ರಯಾಣ ಮಾಡುವ ವಾಹನಗಳಲ್ಲಿ ಬಿತ್ತಿಪತ್ರಗಳನ್ನು ಅಂಟಿಸಿ ಆ ಮೂಲಕ ಮತದಾನದ ಮಹತ್ವವನ್ನು ಪ್ರಚುರಗೊಳಿಸಲಾಗುತ್ತಿದೆ. ಇದರ ಜೊತೆಗೆ ಕಂಪನಿಗಳಲ್ಲಿ ಮತ್ತು ಕೈಗಾರಿಕೆಗಳ ಅಧಿಕಾರಿಗಳ ಹತ್ತಿರ ಮನವಿ ಮಾಡಿ ಆ ದಿನ ರಜೆ ನೀಡುವದರ ಮೂಲಕ ಕಾರ್ಮಿಕರಿಗೆ ಮತದಾನಕ್ಕೆ ಅವಕಾಶ ನೀಡಿ ಮತ ಹಾಕಿರುವುದರ ಬಗ್ಗೆ ಖಾತ್ರಿಗೊಳಿಸಲು ಶಾಯಿ ಹಾಕಿರುವ ಬೆರಳಿನ ಗುರುತನ್ನು ತೋರಿಸುವುದು ಕಡ್ಡಾಯಗೊಳಿಸಿ ಎಂದು ಸೂಚಿಸಲಾಗಿದೆ. ಬಿ ಎಲ್ ಒ ಗಳು ಮನೆಮನೆಗೂ ಭೇಟಿ ಮಾಡಿ ಮತದಾನದ ಮಹತ್ವವನ್ನು ಹೇಳುವುದರ ಮೂಲಕ ಹೊಸ ಮತದಾರರನ್ನು ನೋಂದಣಿ ಮಾಡಿದ್ದು ಅವರ ಕಾರ್ಯ ವೈಖರಿಯನ್ನು ಮೆಚ್ಚುವಂತಹದ್ದಾಗಿದೆ. ಎರಡೆರಡು ಜಾಗದಲ್ಲಿ ನೋಂದಣಿ ಆಗಿರುವಂತಹ ಮತದಾರರ ಹೆಸರುಗಳನ್ನು ತೆಗೆದು ಒಂದರಲ್ಲಿ ಮಾತ್ರ ಇರುವಂತೆ ನೋಡಿಕೊಂಡಿದ್ದು ಈ ಬಾರಿಯ ವಿಶೇ?ವಾಗಿದೆ.ಹೋಂ ಓಟಿಂಗ್ ಮೂಲಕ ವೃದ್ದರಿಗೆ ಅನುಕೂಲ ಮಾಡಲು ಈಗಾಗಲೇ 1516 ಮತದಾರರನ್ನು ಗುರುತಿಸಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ನಗರ ಪ್ರದೇಶಗಳಲ್ಲಿ ರಂಗೋಲಿ, ಗಾಳಿಪಟ ಸ್ಪರ್ಧೆ, ಲೆಮನ್ ಮತ್ತು ಸ್ಪೂನ್ , ಮ್ಯೂಸಿಕಲ್ ಚೇರ್ ಆಟ, ಬೀದಿ ನಾಟಕಗಳಂತಹ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಬೈಕ್ ರ್‍ಯಾಲಿ, ಪಂಜಿನ ಮೆರವಣಿಗೆ ,ಭಿತ್ತಿಪತ್ರ ವಿತರಣೆ, ಕರಪತ್ರ ನೀಡುವಿಕೆ , ರಸ್ತೆ ಮತ್ತು ಗೋಡೆ ಬರಹ ,ಕ್ಯಾಪ್ ನೀಡುವಿಕೆ ,ಬಸ್ ಟಿಕೆಟ್ ಮೇಲೆ ಮತದಾನದ ಮಹತ್ವವನ್ನು ಜನ ಜಾಗೃತಿಗೊಳಿಸಲಾಗುತ್ತಿದೆ. ಈ ಬಾರಿಯ ಲೋಕಸಭಾ ಚುನಾವಣೆಗೆ ಒಟ್ಟು 1708565 ಮತದಾರರಿದ್ದು ಮಹಿಳೆಯರು 862716 ಇದ್ದರೆ ಪುರು?ರು 845636 ಮಹಿಳೆಯರ ಸಂಖ್ಯೆ ಹೆಚ್ಚಾಗಿದ್ದು ಇತರರು 213.ಈ ಬಾರಿ ಒಟ್ಟು 60184 ಮತದಾರರು ಸೇರ್ಪಡೆಗೆ ಎಲ್ಲರ ಪರಿಶ್ರಮ ಮುಖ್ಯವಾಗಿರುತ್ತದೆ. ಒಟ್ಟು ಮತಗಟ್ಟೆ ಕೇಂದ್ರಗಳು 2060 ಇರುತ್ತವೆ. ಈ ಬಾರಿಯ ವಿಶೇಷ ಏನೆಂದರೆ ವಿಕಲಚೇತನರಿಗೆ ಪ್ರತ್ಯೇಕವಾದ ಮತಗಟ್ಟೆ ,ಯುವ ಮತದಾರರಿಗೆ ಮತಗಟ್ಟೆ, ಸಂಪ್ರದಾಯಸ್ಥ ಮತಗಟ್ಟೆಗಳು,ಸಖೀ ಮತಗಟ್ಟೆ, ಕ್ಷೇತ್ರಗಳಿಗೆ ಸಂಬಂಧಿಸಿದ ವಿಶೇಷತೆಯನ್ನು ಹೊಂದಿರುವ ಹೆಸರಿನ ಮತಗಟ್ಟೆಗಳನ್ನು ಮಾಡಲಾಗುತ್ತಿದೆ. ಮಾವು,ಗೋಲ್ಡ್, ಸಿಲ್ಕ್,ಮಿಲ್ಕ್,ಬಂಗಾರಪೇಟೆ ಚಾಟ್ಸ್, ಹೆಸರುಗಳ ಮತಗಟ್ಟೆಗಳ ಹೆಸರುಗಳ ಸ್ಥಾಪನೆ ಮಾಡುವುದಾಗಿ ಜಿಲ್ಲಾ ಚುನಾವಣಾಧಿಕಾರಿಗಳಾದ ಅಕ್ರಂಪಾಷ ಅವರು ಉತ್ಸಾಹದಿಂದ ಹೇಳಿದರು.

ಕ್ಷೇತ್ರದ ಕೆಲವು ಗ್ರಾಮಗಳಲ್ಲಿ ಅನೇಕ ಸಮಸ್ಯೆಗಳನ್ನು ಮುಂದೊಡ್ಡಿ ಚುನಾವಣೆಯನ್ನು ಬಹಿ?ಕರಿಸಿರುವ ಗ್ರಾಮಗಳಿಗೆ ಚುನಾವಣಾಧಿಕಾರಿಗಳು ಭೇಟಿ ನೀಡಿ ಅವರ ಮನಸ್ಸನ್ನು ಒಲಿಸಿ,ಗ್ರಾಮಸ್ಥರು ಮತದಾನಕ್ಕೆ ಒಪ್ಪುವಂತೆ ಮಾಡಿದ್ದು ಪ್ರಶಂಸನೀಯವಾದ ಕಾರ್ಯವಾಗಿದೆ .ಜಿಲ್ಲಾ ಚುನಾವಣೆ ರಾಯಭಾರಿಗಳನ್ನಾಗಿ ಎ.ವಿ.ರವಿ, ನಾಗೇಶ್ ಹಾಗೂ ಕಾಂತದೇವಿಯವರನ್ನು ತೆಗೆದುಕೊಳ್ಳಲಾಗಿದ್ದು ಸಾಮಾಜಿಕ ಜಾಲತಾಣಗಳು ,ಮಾಧ್ಯಮಗಳು ಸಹ ಈ ವಿಚಾರವಾಗಿ ಕೈಜೋಡಿಸಿವೆ. ದುರ್ಬಲ ಮತದಾರರು ಮತ ಎಲೆಕ್ಟ್ರಿಕಲ್ ಗಾಡಿಗಳನ್ನು ಸ್ವಚ್ಛವಾಹಿನಿಯ 230 ವಾಹನಗಳನ್ನು ತೆಗೆದುಕೊಳ್ಳಲಾಗಿದೆ. ಇದಕ್ಕಾಗಿ ನೋಡಲ್ ಅಧಿಕಾರಿ ರಮ್ಯ ಅವರು ಕಾರ್ಯನಿರ್ವಹಿಸುತ್ತಿದ್ದಾರೆ. ಬೇಸಿಗೆ ಕಾಲವಾದ್ದರಿಂದ ಮತಗಟ್ಟೆಗಳ ಹತ್ತಿರ ಕುಡಿಯುವ ನೀರು, ಪೆಂಡಾಲಿನ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ಚುನಾವಣೆಯ ಅಧಿಕಾರಿಗಳು, ಸ್ವೀಪ್ ಅಧಿಕಾರಿಗಳು ತಿಳಿಸಿದರು.

### ಚೆಕ್ ಪೋಸ್ಟ್‌ಗಳಲ್ಲಿ ನಿಗಾ

**ಚೆಕ್ ಪೋಸ್ಟ್ ಗಳಲ್ಲಿ 24/7 ಎಂಬಂತೆ ಅಧಿಕಾರಿಗಳು ಪೊಲೀಸ್ ಸಿಬ್ಬಂದಿ ತಮ್ಮ ಕಾರ್ಯವನ್ನು ಶ್ರದ್ಧೆ ಯಿಂದ ಚುನಾವಣಾ ಕಾರ್ಯವನ್ನು ಮಾಡುತ್ತಿದ್ದಾರೆ. ಕಣ್ಣಿಗೆ ಎಣ್ಣೆ ಬಿಟ್ಟುಕೊಂಡು ಪೊಲೀಸ್ ಇಲಾಖೆಯು ಚುನಾವಣಾ ಕಾರ್ಯವನ್ನು ದಕ್ಷತೆಯಿಂದ ನಿರ್ವಹಿಸುತ್ತಿದೆ. ಚುನಾವಣೆಯಲ್ಲಿ ಅಕ್ರಮಗಳು ಆಗದಂತೆ ಇಲಾಖೆ ಕಣ್ಗಾವಲಿನಲ್ಲಿ ಗಮನಿಸುತ್ತಿದೆ. ಸಂಯಮದಿಂದ, ಶಾಂತಿಯಿಂದ ಈ ಬಾರಿಯ ಚುನಾವಣೆ ನಡೆಯುವುದೆಂದರು. ಮತದಾರರು ಹೆಮ್ಮೆಯಿಂದ, ಧೈರ್ಯದಿಂದ ,ಪ್ರೀತಿಯಿಂದ ಮತದಾನವನ್ನು ಮಾಡಬಹುದೆಂದು ಜಿಲ್ಲಾ ಪೊಲೀಸ್ ವರಿ?ಾಧಿಕಾರಿಗಳಾದ ನಾರಾಯಣ್ ಅವರು ಅಭಿಪ್ರಾಯಪಟ್ಟರು.ಒಟ್ಟು 12246 ಅಧಿಕಾರಿಗಳನ್ನು 'ಮಾನವ ಸೇವೆ'ಗೆಂದು ಚುನಾವಣಾ ಕಾರ್ಯಕ್ಕೆ ತೆಗೆದುಕೊಳ್ಳಲಾಗಿದೆ. ಈಗಾಗಲೇ ಪಿ ಆರ್ ಓ ಗಳಿಗೆ ಚುನಾವಣಾ ತರಬೇತಿಯನ್ನು ನೀಡಲಾಗಿದ್ದು ಇವರು ಚುನಾವಣಾ ಕಾರ್ಯಕ್ಕೆ ಸಿದ್ದರಾಗಿರುತ್ತಾರೆ. ಮೊದಲ ತರಬೇತಿ ಕೇಂದ್ರಕ್ಕೆ ಹಾಜರಾಗದ ಮೌಲ್ಯಮಾಪನ ಕಾರ್ಯಕ್ಕೆ ಹೋಗಿದ್ದ ಉಪನ್ಯಾಸಕರಿಗೆ ಮತ್ತೊಂದು ದಿನ ನಿಗದಿ ಮಾಡಿ ತರಬೇತಿಯನ್ನು ನೀಡಿದ್ದು ವಿಶೇಷವಾಗಿತ್ತು. ಈ ಕಾರ್ಯವು ಎಲ್ಲರಿಂದ ಪ್ರಶಂಸೆಗೆ ಒಳಗಾಯಿತು.ಈ ಕಾರ್ಯಕ್ಕೆ ಜಿಲ್ಲಾ ಚುನಾವಣಾಧಿಕಾರಿಗಳು, ಜಿಲ್ಲಾ ಸಹಾಯಕ ಚುನಾವಣಾ ಅಧಿಕಾರಿಗಳಾದ ಅಸಿಸ್ಟೆಂಟ್ ಕಮಿಷನರ್ ಆದ ವೆಂಕಟಲಕ್ಷ್ಮಿ ಅವರು, ತಾಲೂಕು ಚುನಾವಣೆ ಅಧಿಕಾರಿಗಳಾದ ತಹಶಿಲ್ದಾರರು ಜವಾಬ್ದಾರಿ ತೆಗೆದುಕೊಂಡಿದ್ದರು. ಎರಡನೇ ತರಬೇತಿಯನ್ನು ಎಲ್ಲ ಪಿ.ಆರ್. ಓ ಮತ್ತು ಎ.ಪಿ.ಆರ್ .ಓ ಗಳಿಗೆ 17ನೇ ತಾರೀಕು ತರಬೇತಿ ನೀಡಲಾಗುವುದೆಂದು ಚುನಾವಣಾಧಿಕಾರಿಗಳು ಮಾಹಿತಿ ನೀಡಿರುತ್ತಾರೆ. ಒಟ್ಟಾರೆಯಾಗಿ ಕೋಲಾರ ಲೋಕಸಭಾ ಚುನಾವಣೆಗೆ ಜಿಲ್ಲಾಡಳಿತ ಸರ್ವ ರೀತಿಯಲ್ಲೂ ಸಿದ್ಧವಾಗಿದೆ ಎಂದು ರುಜು ವಾತುಗೊಳಿಸಿದೆ.**

# ಸಂಜೆ ಟಿಪ್ಸ್




## ಡ್ರಾಮಾ ಜೂನಿಯರ್ಸ್‌ನಲ್ಲಿ ಹೊಸ ಪ್ರಯೋಗ

ಪುಟ್ಟ ಮಕ್ಕಳ ಪ್ರತಿಭೆಗೆ ವೇದಿಕೆ ಒದಗಿಸಿಕೊಡುತ್ತಿರುವ ಜೀ಼ ಕನ್ನಡ ವಾಹಿನಿಯ ಸೂಪರ್ ಹಿಟ್ ರಿಯಾಲಿಟಿ ಶೋ ಡ್ರಾಮಾ ಜೂನಿಯರ್ಸ್ ಕಾರ್ಯಕ್ರಮ ಈ ಬಾರಿ ತನ್ನ ಐದನೇ ಸೀಸನ್ನಿನಲ್ಲಿ ಸಾಕಷ್ಟು ಹೊಸ ಪ್ರಯೋಗಗಳನ್ನ ಮಾಡಿ ಸೈ ಎನಿಸಿಕೊಂಡಿದೆ.

ಪ್ರತಿ ಶನಿವಾರ ಮತ್ತು ಭಾನುವಾರ ರಾತ್ರಿ 9ಕ್ಕೆ ಮನೆಮಂದಿಯನ್ನೆಲ್ಲ ಮನರಂಜಿಸೋ ಡ್ರಾಮಾ ಜೂನಿಯರ್ಸ್ ಈ ಬಾರಿ ಭಾರತದ ಕಿರುತೆರೆ ಇತಿಹಾಸದಲ್ಲೆ ಮೊದಲ ಬಾರಿಗೆ ರಿಯಾಲಿಟಿ ಶೋ ವೇದಿಕೆಯಲ್ಲಿ ಆಗ್ಯುಮೆಂಟೆಡ್ ರಿಯಾಲಿಟಿ ಟೆಕ್ನಾಲಜಿ ಬಳಸಿ ಸಮಿಫಿನಾಲೆ ವೇದಿಕೆಯ ಸಂಚಿಕೆಯನ್ನ ಮತ್ತಷ್ಟು ರೋಚಕವನ್ನಾಗಿ ಮಾಡಲು ಹೊರಟಿದೆ.ಭಾರತದ ನುರಿತ ತಂತ್ರಜ್ಞರ ಮಾರ್ಗದರ್ಶನದಲ್ಲಿ ತಯಾರಾದ ಈ ಸಂಚಿಕೆಯಲ್ಲಿ ಕುರುಕ್ಷೇತ್ರದಿಂದ ಹಿಡಿದು ರಾಮಾಯಣದ ತನಕ ಎಲ್ಲಾ ಪಾತ್ರಗಳನ್ನ ನೈಜವಾಗಿ ಕಣ್ಣಿಗೆ ಕಟ್ಟುವ ರೀತಿಯಲ್ಲಿ ವೇದಿಕೆ ಮೇಲೆ ತಂದಿರುವ ಈ ಸಂಚಿಕೆ, ಇದೇ ಶನಿವಾರ ಮತ್ತು ಭಾನುವಾರ ರಾತ್ರಿ 9.00ಗಂಟೆಗೆ ಜೀ಼ ಕನ್ನಡದಲ್ಲಿ ಪ್ರಸಾರವಾಗಲಿದೆ.

## ಮಾವಿನಕಾಯಿ ತಂಬುಳಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

1 ಮೀಡಿಯಂ ಸೈಜ್ ಹುಳಿ ಮಾವಿನಕಾಯಿ ಜೀರಿಗೆ ಮಾವಿನಕಾಯಿ ಆದರೆ ತಂಬಳಿ ಘಮ್ಮೆನ್ನುವುದು. 1 ಕಪ್ ತುರಿದ ತೆಂಗಿನಕಾಯಿ, 2 ಅಥವಾ 3 ಹಸಿಮೆಣಸು ಖಾರಕ್ಕೆ ತಕ್ಕಂತೆ, 1 ಚಮಚ ಸಾಸಿವೆ, ಚಿಟಿಕೆ ಇಂಗು, 1 ಅಥವಾ 2 ಕಪ್ ತಾಜಾ ಕಡೆದ ಮಜ್ಜಿಗೆ

### ಮಾಡುವ ವಿಧಾನ

ಮಾವಿನಕಾಯಿ ಸಿಪ್ಪೆ ಕೆತ್ತಿ ಹೋಳುಗಳನ್ನು ಹೆಚ್ಚಿಕೊಳ್ಳಿ. ಮಿಕ್ಸಿಗೆ ಹಾಕಿ, ಕಾಯಿ ತುರಿ, ಮೆಣಸಿನ ಜೊತೆ ನುಣ್ಣಗೆ ರುಬ್ಬಿಕೊಳ್ಳಿ. ಈ ಮಿಶ್ರಣಕ್ಕೆ ಮಜ್ಜಿಗೆ ಬೆರೆಸಿ, ರುಚಿಗೆ ತಕ್ಕಷ್ಟು ಉಪ್ಪನ್ನು ಸೇರಿಸಿ. ಸಾಸಿವೆ, ಇಂಗಿನ ಒಗ್ಗರಣೆ ಕೊಟ್ಟು ಬಿಸಿ ಅನ್ನದ ಜೊತೆ ಬಡಿಸಿರಿ, ಅಥವಾ ಹಾಗೆ ಕುಡಿಯಲು ಕೂಡ ಚೆನ್ನಾಗಿರುತ್ತದೆ.

## ಗ್ಯಾಸ್ಟ್ರಿಕ್ ಸಮಸ್ಯೆಗೆ ಪರಿಹಾರ




ಈಗಿನ ಜೀವನಕ್ರಮ ಹಾಗೂ ದೈನಂದಿನ ಆಹಾರ ಚಟುವಟಿಕೆಯಿಂದಾಗಿ ಗ್ಯಾಸ್ಟ್ರಿಕ್ ಸಮಸ್ಯೆ ಬಹುತೇಕ ಎಲ್ಲರಿಗೂ ಕಾಡಲಿದೆ. ಫಾಸ್ಟ್ ಫುಡ್ ಸೇವನೆ, ಸೋಡಯುಕ್ತ ಆಹಾರ ಸೇವನೆಯಿಂದಾಗಿ ಗ್ಯಾಸ್ಟ್ರಿಕ್ ಸಮಸ್ಯೆ ಉಂಟಾಗುತ್ತೆ.

ಈ ಸಮಸ್ಯೆಯಿಂದ ಪರಿಹಾರ ಪಡೆಯಬೇಕು ಅಂದ್ರೆ, ಮನೆ ಮದ್ದು ಉತ್ತಮ ಫಲಿತಾಂಶ ನೀಡಬಲ್ಲುದು.

**ಮೊಸರು:** ಇದು ಗ್ಯಾಸ್ಟ್ರಿಕ್ ಸಮಸ್ಯೆಯಿಂದ ಪಾರು ಮಾಡಬಲ್ಲ ಪ್ರಮುಖ ಪದಾರ್ಥವಾಗಿದೆ. ಮೊಸರನ್ನ ತಿನ್ನೋದ್ರಿಂದ ನಿಮ್ಮ ಜೀರ್ಣಕ್ರಿಯೆ ಚೆನ್ನಾಗಿ ಆಗಲಿದೆ. ಅಲ್ಲದೇ ತಾಜಾ ಮೊಸರು ಉತ್ತಮ ಬ್ಯಾಕ್ಟೀರಿಯಾಗಳನ್ನ ಹೊಂದಿರುತ್ತೆ. ಸ್ವಲ್ಪ ನೀರನ್ನ ಹಾಕಿಕೊಂಡು ಜೊತೆಗೆ ಉಪ್ಪನ್ನೂ ಸೇರಿಸಿ ಮೊಸರನ್ನ ಕುಡಿಯಿರಿ.

**ಹರ್ಬಲ್ ಚಹ:** ಶುಂಠಿ ಚಹ, ಪುದೀನಾ, ಕಾಳು ಮೆಣಸಿನ ಚಹ, ನಿಂಬು ಚಹ ಗ್ಯಾಸ್ಟ್ರಿಕ್ ಸಮಸ್ಯೆಗೆ ಪರಿಹಾರ ನೀಡಬಲ್ಲುದು.

**ಸೋಂಪು:** ಸೋಂಪು ಜೀರ್ಣಕ್ರಿಯೆಗೆ ಸಹಾಯ ಆಗುತ್ತೆ ಅನ್ನೋ ಕಾರಣಕ್ಕೆ ತಲಾತಲಾಂತರಗಳಿಂದ ಭಾರತೀಯ ಆಹಾರ ಪದ್ಧತಿಯ ಪ್ರಕಾರ ಊಟದ ಬಳಿಕ ಸೋಂಪನ್ನ ನೀಡ್ತಾರೆ. ಹೀಗಾಗಿ ನೀವು ಈ ಹಳೆಯ ಅಭ್ಯಾಸವನ್ನ ಮುಂದುವರಿಸಿಕೊಂಡು ಹೋಗುವ ಮೂಲಕ ಈ ಸಮಸ್ಯೆಯಿಂದ ಪಾರಾಗಬಹುದಾಗಿದೆ.

## ಎಳನೀರಿನಿಂದ ಕೂದಲ ಪೋಷಣೆ..!

### ಬ್ಯೂಟಿ ಟಿಪ್ಸ್



ಎಳನೀರಿನ ಸೇವನೆಯಿಂದ ದೇಹಕ್ಕೆ ಎಷ್ಟೆಲ್ಲಾ ಲಾಭಗಳಿವೆಯೋ ಅದಕ್ಕೂ ಹೆಚ್ಚಿನ ಪ್ರಯೋಜನವನ್ನು ತಲೆಗೆ ಹಚ್ಚಿಕೊಳ್ಳುವುದರಿಂದಲೂ ಪಡೆಯಬಹುದು. ಹೇಗೆನ್ನುತ್ತೀರಾ? ನಿತ್ಯ ಅಥವಾ ವಾರಕ್ಕೆ ಮೂರು ದಿನ ಎಳನೀರು ಕುಡಿಯುವುದರಿಂದ ನಿಮ್ಮ ತ್ವಚೆ ಸದಾ ಹೊಳೆಯುತ್ತಿರುತ್ತದೆ ಮಾತ್ರವಲ್ಲ ದೇಹದಿಂದ ಅನಗತ್ಯ ಕಲ್ಮಶಗಳು ದೂರವಾಗುತ್ತವೆ. ಮೊಡವೆಗಳು ಬಾರದಂತೆ ನೋಡಿಕೊಂಡು ನಿಮ್ಮ ತ್ವಚೆ ಒಣಗಿ ಪೇಲವವಾಗದಂತೆ ನೋಡಿಕೊಳ್ಳುತ್ತದೆ. ತೆಂಗಿನೆಣ್ಣೆಯಂತೆ ಎಳನೀರನ್ನೂ ಕೂದಲಿನ ಪೋಷಣೆಗಾಗಿ ಬಳಸಬಹುದು. ಇದರ ನೀರಿನಿಂದ ಕೂದಲ ಬುಡಕ್ಕೆ ಮಸಾಜ್ ಮಾಡುವುದರಿಂದ ಕೂದಲಿನ ಬುಡ ಗಟ್ಟಿಯಾಗುತ್ತದೆ ಮತ್ತು ಕೂದಲು ಉದುರುವುದು ನಿಲ್ಲುತ್ತದೆ.ಇದೊಂದು ನೈಸರ್ಗಿಕ ಕಂಡೀಶನರ್ ಆಗಿದ್ದು ಕೂದಲನ್ನು ಬುಡದಿಂದ ತುದಿಯ ತನಕ ಮಾಯಿಸ್ಚರೈಸ್ ಆಗಿರುವಂತೆ ನೋಡಿಕೊಳ್ಳುತ್ತದೆ. ಗಂಟು ಅಥವಾ ಸಿಕ್ಕುಗಳಾಗುವುದನ್ನು ತಡೆಯುತ್ತದೆ.

## ಕಲ್ಕಿ ಚಿತ್ರದ ರಿಲೀಸ್ ಡೇಟ್ ಫಿಕ್ಸ್



ಟಾಲಿವುಡ್ ಯಂಗ್ ರೆಬಲ್ ಸ್ಟಾರ್ ಪ್ರಭಾಸ್ ಅಭಿನಯದ ಬಹುನಿರೀಕ್ಷಿತ ಕಲ್ಕಿ ಸಿನಿಮಾದ ಹೊಸ ಅಪ್ಡೇಟ್ ಹೊರ ಬಂದಿದೆ. ಅಂತೂ ಇಂತೂ ಕಲ್ಕಿ ಚಿತ್ರದ ರಿಲೀಸ್ ಡೇಟ್ ಫಿಕ್ಸ್ ಆಗಿದೆ. ಪ್ರಭಾಸ್ ನಟನೆಯ ಕಲ್ಕಿ ಸಿನಿಮಾ ಇದೇ ಜೂನ್ 20ರಂದು ವರ್ಲ್ಡ್ ವೈಡ್ ರಿಲೀಸ್ ಆಗಲಿದೆ.

ಚುನಾವಣೆಯ ನಂತರ ಈ ಚಿತ್ರ ಬಿಡುಗಡೆಯಾಗಲಿದೆ.

ಮುಂಬರುವ ಲೋಕಸಭಾ ಚುನಾವಣೆಯ ಕಾರಣದಿಂದ ಈ ಸಿನಿಮಾದ ತೆರೆಕಾಣಲಿದೆ. ಆದರೆ ಚಿತ್ರತಂಡ ಇನ್ನೂ ಅಧಿಕೃತ ಬಿಡುಗಡೆ ದಿನಾಂಕವನ್ನು ರಿವೀಲ್ ಮಾಡಿಲ್ಲ. ಮೊದಲು ಪ್ರಭಾಸ್ ನಟನೆಯ ಕಲ್ಕಿ 2898 ಂಆ ಅನ್ನು ಮೇ 30, 2024 ರಿಲೀಸ್ ಮಾಡಲಾಗುತ್ತದೆ ಎನ್ನಲಾಗಿತ್ತು. ಆದರೆ ಇದೀಗ ಈ ಸಿನಿಮಾದ ದಿನಾಂಕವನ್ನು ಮುಂದೂಡಲಾಗಿದೆ.

ಕಲ್ಕಿ 2898 AD ಚಿತ್ರವನ್ನು ತೆಲುಗು ಮತ್ತು ಹಿಂದಿ ಎರಡು ಭಾಷೆಯಲ್ಲೂ ಏಕಕಾಲದಲ್ಲಿ ಚಿತ್ರೀಕರಿಸಲಾಗಿದೆ ಮತ್ತು ಇದು ಭಾರತದ ಚಿತ್ರರಂಗದಲ್ಲಿ ಅತ್ಯಂತ ದುಬಾರಿ ಸಿನಿಮಾಗಳಲ್ಲಿ ಒಂದಾಗಿದೆ. ಈ ಚಿತ್ರವನ್ನು ದಕ್ಷಿಣದ ಭಾಷೆಗಳಿಗೂ ನೂರಾರು ಕೋಟಿ ಕೊಟ್ಟು ಖರೀದಿಸಲಾಗಿದೆ. ಈ ಸಿನಿಮಾದಲ್ಲಿ ಕಮಲ್ ಹಾಸನ್, ದೀಪಿಕಾ ಪಡುಕೋಣೆ, ಅಮಿತಾಭ್ ಬಚ್ಚನ್, ದಿಶಾ ಪಟಾನಿ ಅಂತಹ ಅನೇಕ ಕಲಾವಿದರು ನಟಿಸಿದ್ದಾರೆ.

ನಟ ಪ್ರಭಾಸ್ ಕಲ್ಕಿ 2898 AD ಜೊತೆಗೆ, ಡೈರೆಕ್ಟರ್ ಮಾರುತಿ ಹಾಸ್ಯ-ಭಯಾನಕ ಚಿತ್ರ ದಿ ರಾಜಾ ಸಾಬ್ನಲ್ಲಿ ಪ್ರಮುಖ ಪಾತ್ರವನ್ನು ನಿರ್ವಹಿಸಲಿದ್ದಾರೆ. ಇದು ಗಿಈಫಿ ನ ವ್ಯಾಪಕ ಬಳಕೆಯನ್ನು ಹೊಂದಿದೆ ಎನ್ನಾಲಾಗುತ್ತಿದೆ. ಇನ್ನೂ ಈ ನಟ ಸಂದೀಪ್ ರೆಡ್ಡಿ ವಂಗಾ ಅವರ ಸ್ಪಿರಿಟ್ ಸಿನಿಮಾದಲ್ಲಿ ಪ್ರಾಮಾಣಿಕ ಮತ್ತು ಕೋಪಗೊಂಡ ಯುವ ಪೋಲೀಸ್ ಪಾತ್ರದಲ್ಲಿ ಕೂಡ ನಟಿಸಲಿದ್ದಾರೆ.

## ಮುಂಬೈ ಇಂಡಿಯನ್ಸ್ ತಂಡಕ್ಕೆ 18 ಸಾವಿರ ಮಕ್ಕಳಿಂದ ಉತ್ತೇಜನ



ಮುಂಬೈ ಇಂಡಿಯನ್ಸ್ ತಂಡವು ಐಪಿಎಲ್‌ನಲ್ಲಿ ಈ ಋತುವಿನ ಮೊದಲ ಗೆಲುವಿನ ವೇಳೆ ಸಾವಿರಾರು ಮಕ್ಕಳು ಸಾಕ್ಷಿಯಾದರು ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಮುಂಬೈ ಇಂಡಿಯನ್ಸ್ನ ಈ ಗೆಲುವು ವಿಶೇಷವಾಗಿತ್ತು. ಏಕೆಂದರೆ ಮುಂಬೈನ ಮೂಲೆ ಮೂಲೆಯಿಂದ 18,000 ಮಕ್ಕಳು ವಾಂಖೆಡೆ ಸ್ಟೇಡಿಯಂನಲ್ಲಿ ಮುಂಬೈ ಇಂಡಿಯನ್ ತಂಡವನ್ನು ಉತ್ತೇಜಿಸಿದರು. ರಿಲಯನ್ಸ್ ಫೌಂಡೇಷನ್ನ ಉಪಕ್ರಮ 'ಎಲ್ಲರಿಗೂ ಶಿಕ್ಷಣ ಮತ್ತು ಕ್ರೀಡೆ' (ಎಜುಕೇಷನ್ ಅಂಡ್ ಸ್ಪೋರ್ಟ್ಸ್ ಫಾರ್ ಆಲ್), ಅಂದರೆ ಇಎಸ್ಎಗೆ ಸಂಬಂಧಿಸಿದ ಈ ಮಕ್ಕಳನ್ನು ಈ ಕ್ರಿಕೆಟ್ ಪಂದ್ಯವನ್ನು ವೀಕ್ಷಿಸಲು ವಿಶೇಷವಾಗಿ ಆಹ್ವಾನಿಸಲಾಗಿತ್ತು. ಈ ರೋಚಕ ಗೆಲುವಿನ ನಂತರ ಮುಂಬೈ ಇಂಡಿಯನ್ಸ್ ಮಾಲೀಕರಾದಂಥ ನೀತಾ ಅಂಬಾನಿ ಅವರು ''ಕ್ರಿಕೆಟ್ ದೇವರು'' ಸಚಿನ್ ತೆಂಡೂಲ್ಕರ್ ಜತೆಗೆ ಮಾತನಾಡಿದರು.

''ಎಲ್ಲರಿಗೂ ಶಿಕ್ಷಣ ಮತ್ತು ಕ್ರೀಡೆ'' ಎಂಬ ಅಭಿಯಾನದ ಕುರಿತು ಮಾತನಾಡಿದ ನೀತಾ ಅಂಬಾನಿ, ''ವಿವಿಧ ಎನ್ಜಿಒಗಳಿಂದ 18,000 ಮಕ್ಕಳು ಸ್ಟ್ಯಾಂಡ್ನಲ್ಲಿ ಪಂದ್ಯವನ್ನು ವೀಕ್ಷಿಸಿದ್ದಾರೆ. ಕ್ರೀಡೆಯಲ್ಲಿ ತಾರತಮ್ಯವಿಲ್ಲ ಮತ್ತು ಪ್ರತಿಭೆ ಎಲ್ಲಿಂದಾದರೂ ಬರಬಹುದು ಎಂದು ನಾನು ನಂಬುತ್ತೇನೆ. ಈ ಮಕ್ಕಳಲ್ಲಿ ಒಬ್ಬರು ಆಟದ ಉತ್ತುಂಗ ತಲುಪುವ ಸಾಧ್ಯತೆಯಿದೆ. ಅವರು ಅನೇಕ ನೆನಪುಗಳು ಮತ್ತು ಅವರ ಕನಸುಗಳನ್ನು ನಂಬುವ ಮನಸ್ಥಿತಿಯೊಂದಿಗೆ ಇಲ್ಲಿಂದ ವಾಪಸಾಗುತ್ತಾರೆ ಎಂದು ನಾನು ಭಾವಿಸುತ್ತೇನೆ,'' ಎಂದರು.

ಸಚಿನ್ ತೆಂಡೂಲ್ಕರ್ ವಾಂಖೆಡೆ ಸ್ಟೇಡಿಯಂನ ಮೊದಲ ನೆನಪುಗಳ ಬಗ್ಗೆ ಮಾತನಾಡಿದರು ಮತ್ತು ಈಗಲೂ ಅವರು ಎಲ್ಲವನ್ನೂ ಹೇಗೆ ನೆನಪಿಸಿಕೊಳ್ಳುತ್ತಾರೆ ಎಂಬ ಬಗ್ಗೆ ತಿಳಿಸಿದರು. ನಾನು ಅಂದುಕೊಳ್ಳುವುದೇನೆಂದರೆ, ಮಕ್ಕಳೇ ಭವಿಷ್ಯ ಎಂದು ಸಚಿನ್ ಹೇಳಿದರು. ನಾವು ಉತ್ತಮ ನಾಳೆಯನ್ನು ಬಯಸಿದರೆ ಇಂದು ಕೆಲಸ ಮಾಡಬೇಕು. ನೀತಾ ಅಂಬಾನಿ ಅವರ ಮಾರ್ಗದರ್ಶನದಲ್ಲಿ ರಿಲಯನ್ಸ್ ಫೌಂಡೇಷನ್ ಪ್ರಪಂಚದಾದ್ಯಂತ ಅನೇಕ ಮಕ್ಕಳಿಗೆ ಅವಕಾಶಗಳನ್ನು ಒದಗಿಸಿದೆ. ಶಿಕ್ಷಣದ ಜೊತೆಗೆ ಕ್ರೀಡಾ ಕ್ಷೇತ್ರದಲ್ಲೂ ಅವರು ಇದನ್ನು ಮುಂದುವರಿಸಲಿ ಎಂದು ಹಾರೈಸುತ್ತೇನೆ ಎಂಬುದಾಗಿ ಹೇಳಿದರು.

ಎಲ್ಲರಿಗೂ ಶಿಕ್ಷಣ ಮತ್ತು ಕ್ರೀಡೆ ಅಭಿಯಾನದ ಬಗ್ಗೆ ಮಾತನಾಡಿದ ನೀತಾ ಅಂಬಾನಿ, ''ನಾವು 14 ವರ್ಷಗಳ ಹಿಂದೆ ಈ ಉಪಕ್ರಮ ಪ್ರಾರಂಭಿಸಿದ್ದೇವೆ ಮತ್ತು ಇದು ಭಾರತದಾದ್ಯಂತ 2 ಕೋಟಿ 20 ಲಕ್ಷ ಮಕ್ಕಳನ್ನು ತಲುಪಿದೆ. ಪ್ರತಿ ಮಗುವಿಗೆ ಆಟವಾಡುವ ಮತ್ತು ಶಿಕ್ಷಣದ ಹಕ್ಕು ಇರಬೇಕು ಎಂದು ಸಚಿನ್ ಅವರು ಹೇಳಿದಂತೆ, ನಾನು ಕೂಡ ನಂಬುತ್ತೇನೆ. ಮಕ್ಕಳು ತರಗತಿಗಳಲ್ಲಿ ಕಲಿಯುವಷ್ಟು ಆಟದ ಮೈದಾನದಲ್ಲಿ ಕಲಿಯುತ್ತಾರೆ. ಕ್ರೀಡೆಯು ಅವರಿಗೆ ಶಿಸ್ತು ಮತ್ತು ಕಠಿಣ ಪರಿಶ್ರಮವನ್ನು ಕಲಿಸುತ್ತದೆ ಮತ್ತು ಅದಕ್ಕಿಂತ ಹೆಚ್ಚಾಗಿ, ಗೆಲುವು ಮತ್ತು ಸೋಲುಗಳನ್ನು ಹೇಗೆ ಸ್ವೀಕರಿಸಬೇಕೆಂದು ಕಲಿಸುತ್ತದೆ. ಭಾರತದ ದೂರ ದೂರದ ಹಳ್ಳಿಗಳು ಮತ್ತು ಪಟ್ಟಣಗಳಲ್ಲಿ ಈ ಪುಟ್ಟ ಮಕ್ಕಳಿಗೆ ಎಜುಕೇಷನ್ ಅಂಡ್ ಸ್ಪೋರ್ಟ್ಸ್ ಫಾರ್ ಆಲ್ ಲಕ್ಷಾಂತರ ಬಾಗಿಲುಗಳು ತೆರೆಯುತ್ತವೆ,'' ಎಂದರು.

ನೀತಾ ಅಂಬಾನಿ ಅವರ ನೇತೃತ್ವದಲ್ಲಿ ರಿಲಯನ್ಸ್ ಫೌಂಡೇಷನ್ನ ಎಜುಕೇಷನ್ ಅಂಡ್ ಸ್ಪೋರ್ಟ್ಸ್ ಫಾರ್ ಆಲ್ ಉಪಕ್ರಮ ವಾಸ್ತವವಾಗಿ ಪ್ರಾರಂಭಿಸಲಾಗಿದೆ. ರಿಲಯನ್ಸ್ ಫೌಂಡೇಷನ್ ತನ್ನ ವ್ಯಾಪಕವಾದ 'ವಿ ಕೇರ್' ದೃಷ್ಟಿಕೋನದಿಂದ ಪ್ರೇರಿತವಾಗಿದೆ. ರಿಲಯನ್ಸ್ ಫೌಂಡೇಷನ್ ವರ್ಷವಿಡೀ ಎಜುಕೇಷನ್ ಅಂಡ್ ಸ್ಪೋರ್ಟ್ಸ್ ಫಾರ್ ಆಲ್ ಮೂಲಕ ಶಿಕ್ಷಣ ಮತ್ತು ಕ್ರೀಡಾ ವಲಯದಲ್ಲಿ ವಿವಿಧ ಚಟುವಟಿಕೆಗಳನ್ನು ಕೈಗೊಳ್ಳುತ್ತದೆ. ರಿಲಯನ್ಸ್ ಫೌಂಡೇಷನ್ ಭಾರತದಾದ್ಯಂತ 2 ಕೋಟಿ 20 ಲಕ್ಷಕ್ಕೂ ಹೆಚ್ಚು ಮಕ್ಕಳ ಜೀವನದ ಮೇಲೆ ಪ್ರಭಾವ ಬೀರಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಕುಟುಂಬಸ್ಥರೊಂದಿಗೆ ಉತ್ತಮ ಒಡನಾಟ, ಆರ್ಥಿಕವಾಗಿ ಅಲ್ಪ ಚೇತರಿಕೆ, ತಾಯಿಯಿಂದ ಸಹಾಯ

**ವೃಷಭ:** ವ್ಯವಹಾರದಲ್ಲಿ ಹಿನ್ನಡೆ, ಬಂಧುಗಳಿಂದ ಸಹಾಯದ ನಿರೀಕ್ಷೆ, ಹತ್ತಿರದ ಪ್ರಯಾಣ, ದೈವ ಕಾರ್ಯಗಳು.

**ಮಿಥುನ:** ಪ್ರೇಮದಲ್ಲಿ ಒಲವು, ಐಷಾರಾಮಿ ಜೀವನದ ಕಲ್ಪನೆ, ಆರ್ಥಿಕ ನಷ್ಟಗಳು, ಕುಟುಂಬದಲ್ಲಿ ಮನಸ್ತಾಪ.

**ಕಟಕ:** ವ್ಯಾಪಾರ ವ್ಯವಹಾರದಲ್ಲಿ ಲಾಭ, ಉತ್ತಮ ಹೆಸರುಗಳಿಸುವ ಪ್ರಯತ್ನ, ಪೂಜಾ ಆಚರಣೆಗಳು.

**ಸಿಂಹ:** ಮಕ್ಕಳಿಂದ ಖರ್ಚು ಮತ್ತು ನಷ್ಟಗಳು, ಉದ್ಯೋಗದಲ್ಲಿ ವಿಘ್ನಗಳು ಮತ್ತು ನಷ್ಟ, ವಿದ್ಯಾಭ್ಯಾಸದಲ್ಲಿ ಸಮಸ್ಯೆಗಳು.

**ಕನ್ಯಾ:** ಪ್ರಯಾಣ ಅನುಕೂಲ ಮತ್ತು ಲಾಭ, ಆಧ್ಯಾತ್ಮಿಕ ಚಿಂತನೆ, ಮುಂದಾಲೋಚನೆಗಳು.

**ತುಲಾ:** ಉದ್ಯೋಗದಲ್ಲಿ ಅಡೆತಡೆ, ಜೀವನ ಮುನ್ನಡೆಸುವ ಚಿಂತೆ, ಮಾತಿನಿಂದ ತೊಂದರೆ, ಪ್ರಯಾಣದಲ್ಲಿ ನಿರಾಸೆ.

**ವೃಶ್ಚಿಕ:** ವೈವಾಹಿಕ ಜೀವನದ ಚಿಂತೆ, ಅಲಂಕಾರಿಕ ವಸ್ತುಗಳ ಖರೀದಿ, ಪ್ರೀತಿ ಪ್ರೇಮದಲ್ಲಿ ಮೋಸ.

**ಧನಸ್ಸು:** ಸಾಲಭಾದೆ, ಶತ್ರು ಕಾಟಗಳು, ಕಿರಿಯರಿಂದ ನಿಂದನೆ, ಕೆಲಸಗಾರರೊಂದಿಗೆ ಮನಸ್ತಾಪ, ಅವಮಾನಕ್ಕೆ ಗುರಿಯಾಗುವಿರಿ.

**ಮಕರ:** ಶೃಂಗಾರ ಸಾಧನೆಗಳಿಗೆ ಖರ್ಚು, ಕಲಾಕ್ಷೇತ್ರದವರೆಗೆ ಹಿನ್ನಡೆ, ವಿವೇಚನೆ ಕಳೆದುಕೊಳ್ಳುವಿರಿ

**ಕುಂಭ:** ಸ್ಥಿರಾಸ್ತಿ ವಾಹನ ಸಾಲದ ಚಿಂತೆ, ಧಾರ್ಮಿಕ ಆಚರಣೆಗಳು, ತಾಯಿಯ ಆರೋಗ್ಯದಲ್ಲಿ ವ್ಯತ್ಯಾಸ, ಮಹಿಳೆಯರಿಂದ ಸಹಾಯ.

**ಮೀನ:** ಪ್ರಯಾಣ, ಉದ್ಯೋಗದ ಹುಡುಕಾಟ, ವಿದ್ಯಾಭ್ಯಾಸದಲ್ಲಿ ಸಮಸ್ಯೆ, ಅಧಿಕಾರಿಗಳಿಂದ ಸಮಸ್ಯೆ.

## ಅಂತರಾಷ್ಟ್ರೀಯ ಬೀದಿ ಮಕ್ಕಳ ದಿನ



ವಿಶ್ವವು ಪ್ರತಿ ವರ್ಷ ಏಪ್ರಿಲ್ 12 ರಂದು ಬೀದಿ ಮಕ್ಕಳ ಅಂತರರಾಷ್ಟ್ರೀಯ ದಿನವನ್ನು ಆಚರಿಸುತ್ತದೆ. ಬೀದಿಯಲ್ಲಿ ವಾಸಿಸುವ ಮಕ್ಕಳಿಗೆ ಧ್ವನಿ ನೀಡಲು ಈ ದಿನವನ್ನು ಪ್ರಾರಂಭಿಸಲಾಗಿದೆ. ಇದರಿಂದ ಅವರ ಹಕ್ಕುಗಳನ್ನು ಕಡೆಗಣಿಸುವಂತಿಲ್ಲ. ಈ ದಿನವು ಮಾನವ ಹಕ್ಕುಗಳ ಸಂಘಟನೆಗಳಿಗೆ ಪ್ರಪಂಚದಾದ್ಯಂತ ಬೀದಿ ಮಕ್ಕಳ ದುಃಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸಲು ಅವಕಾಶಗಳನ್ನು ಒದಗಿಸುತ್ತದೆ. ಸರ್ಕಾರಗಳು, ಮಾನವ ಹಕ್ಕುಗಳ ಸಂಸ್ಥೆಗಳು ಮತ್ತು ವ್ಯಕ್ತಿಗಳ ಕೇಂದ್ರೀಕೃತ ಪ್ರಯತ್ನಗಳೊಂದಿಗೆ, ಬೀದಿ ಮಕ್ಕಳನ್ನು ಪುನರ್ವಸತಿ ಮಾಡಬಹುದು ಮತ್ತು ಪ್ರೀತಿಯ ಮನೆಗಳಲ್ಲಿ ಇರಿಸಬಹುದು. ಸುರಕ್ಷಿತ ಮನೆಗಳನ್ನು ಹುಡುಕುವುದರ ಜೊತೆಗೆ, ಅವರಿಗೆ ಶಿಕ್ಷಣ, ವೈದ್ಯಕೀಯ ಸೌಲಭ್ಯಗಳನ್ನು ನೀಡುವುದು ಮತ್ತು ಉತ್ತಮ ಜೀವನೋಪಾಯಕ್ಕಾಗಿ ಕೌಶಲ್ಯಗಳನ್ನು ಕಲಿಸುವುದು ಸಹ ಗುರಿಯಾಗಿದೆ. 1989 ರಲ್ಲಿ, ವಿಶ್ವಸಂಸ್ಥೆಯು ಮಕ್ಕಳ ಹಕ್ಕುಗಳ ಸಮಾವೇಶವನ್ನು ನಡೆಸಿತು. ಸಮಾವೇಶದಲ್ಲಿ ಚರ್ಚಿಸಿದ ಪ್ರಕಾರ, ಪ್ರಪಂಚದ ಎಲ್ಲಾ ಮಕ್ಕಳ ಹಕ್ಕುಗಳು ಸ್ಥಿರವಾದ, ಪ್ರೀತಿಸುವ ಮತ್ತು ಪೋಷಿಸುವ ಪರಿಸರದ ಹಕ್ಕನ್ನು ಒಳಗೊಂಡಿರಬೇಕು; ಬೀದಿಯಲ್ಲಿ ವಾಸಿಸುವ ಮಕ್ಕಳಿಗೆ ಈ ಹಕ್ಕುಗಳಿಲ್ಲ. ಕನ್ಸೋರ್ಟಿಯಂ ಫಾರ್ ಸ್ಟ್ರೀಟ್ ಚಿಲ್ಡ್ರನ್ ನಂತಹ ಸಂಸ್ಥೆಗಳು ಬೀದಿ ಮಕ್ಕಳು ತಮ್ಮನ್ನು ತಾವು ಕಂಡುಕೊಳ್ಳುವ ಅಪಾಯಗಳನ್ನು ನಿವಾರಿಸಲು ಸಮಾನತೆಯ ನಾಲ್ಕು ಹಂತಗಳನ್ನು ಜಾರಿಗೊಳಿಸಲು ಪ್ರಯತ್ನಿಸುತ್ತಿವೆ. ಈ ಹಂತಗಳಲ್ಲಿ ಸಮಾನತೆಗೆ ಬದ್ಧತೆಯನ್ನು ಮಾಡುವುದು, ಪ್ರತಿ ಮಗುವನ್ನು ರಕ್ಷಿಸುವುದು, ಸೇವೆಗಳಿಗೆ ಪ್ರವೇಶವನ್ನು ಒದಗಿಸುವುದು ಮತ್ತು ಹೊಸ ಪರಿಹಾರಗಳನ್ನು ರಚಿಸುವುದು. ಇತ್ತೀಚಿನ ಅಂಕಿಅಂಶಗಳ ಪ್ರಕಾರ, ಪ್ರಪಂಚದಾದ್ಯಂತ ಸುಮಾರು 150 ಮಿಲಿಯನ್ ಮಕ್ಕಳು ಬೀದಿಯಲ್ಲಿ ವಾಸಿಸುತ್ತಿದ್ದಾರೆ. ಕೆಲವು ಮಕ್ಕಳು ತಮ್ಮ ಕುಟುಂಬದೊಂದಿಗೆ ಬೀದಿಯಲ್ಲಿ ವಾಸಿಸುತ್ತಾರೆ, ಇತರರು ತಮ್ಮ ಹೆಚ್ಚಿನ ಸಮಯವನ್ನು ಬೀದಿಯಲ್ಲಿ ಆಹಾರ ಮತ್ತು ಹಣಕ್ಕಾಗಿ ಭಿಕ್ಷೆ ಬೇಡುತ್ತಾರೆ, ಆದರೆ ರಾತ್ರಿಯಲ್ಲಿ ಮನೆಗೆ ಮರಳುತ್ತಾರೆ. ಕೆಲವು ಮಕ್ಕಳು ಕುಟುಂಬವಿಲ್ಲದೆ ಅನಾಥರಾಗಿ ಬೀದಿಯಲ್ಲಿ ವಾಸಿಸುತ್ತಿದ್ದಾರೆ ಅಥವಾ ಹಿಂತಿರುಗಲು ಮನೆ ಇಲ್ಲ. ಈ ಮಕ್ಕಳಿಗೆ ಅನೇಕ ಮೂಲಭೂತ ಮಾನವ ಹಕ್ಕುಗಳನ್ನು ನಿರಾಕರಿಸಲಾಗಿದೆ ಎಂದು ಹೇಳಬೇಕಾಗಿಲ್ಲ.ಮಕ್ಕಳು ಬೀದಿಗೆ ಬೀಳಲು ಹಲವು ಕಾರಣಗಳಿವೆ. ಸಾಮಾನ್ಯ ಕಾರಣಗಳಲ್ಲಿ ಒಂದು ಯುದ್ಧ ಮತ್ತು ಸಂಘರ್ಷದಿಂದ ಉಂಟಾದ ಪರಿಸ್ಥಿತಿಯಲ್ಲಿ ವಾಸಿಸುವುದನ್ನು ಒಳಗೊಂಡಿರುತ್ತದೆ. ಈ ಪರಿಸ್ಥಿತಿಯಲ್ಲಿರುವ ಮಕ್ಕಳು ತಮ್ಮ ಕುಟುಂಬದಿಂದ ಬೇರ್ಪಟ್ಟಿದ್ದಾರೆ ಅಥವಾ ಅವರ ಕುಟುಂಬ ಸದಸ್ಯರು ಸತ್ತಿದ್ದಾರೆ. ಕೆಲವು ಮಕ್ಕಳು ಕುಟುಂಬ ಸದಸ್ಯರಿಂದ ದೌರ್ಜನ್ಯಕ್ಕೊಳಗಾದ ಕಾರಣ ಸ್ವಯಂಪ್ರೇರಣೆಯಿಂದ ಮನೆ ಬಿಟ್ಟು ಹೋಗುತ್ತಾರೆ. ಇತರ ಕಾರಣಗಳು ಅವರ ಕುಟುಂಬದಿಂದ ನಿರಾಕರಣೆ, ಆರೋಗ್ಯ ಸಮಸ್ಯೆಗಳು ಅಥವಾ ಕ್ರಿಮಿನಲ್ ಚಟುವಟಿಕೆಗೆ ಬಲವಂತವಾಗಿರಬಹುದು. ಏನೇ ಆಗಲಿ ಬೀದಿಬದಿಯ ಮಕ್ಕಳಿಗೆ ಶಿಕ್ಷಣ, ಆರೋಗ್ಯ ರಕ್ಷಣೆ, ಗೌರವಯುತ ಜೀವನ ನಡೆಸುವ ಅವಕಾಶಗಳನ್ನು ನಿರಾಕರಿಸಲಾಗುತ್ತಿದೆ

# ಕಾಶಿ ದೇಗುಲದಲ್ಲಿ ಕರ್ತವ್ಯ ನಿರ್ವಹಿಸಲಿರುವ ಪೊಲೀಸ್ ಸಿಬ್ಬಂದಿ

**ಲಖನೌ:** ಕಾಶಿ ದೇಗುಲದಲ್ಲಿ ಪೊಲೀಸರಿಗೆ ಹೊಸ ವಸ್ತ್ರಸಂಹಿತೆ ಜಾರಿಗೊಳಿಸಲಾಗಿದೆ. ಕೊರಳಲ್ಲಿ ರುದ್ರಾಕ್ಷಿ ಮಾಲೆ ಧರಿಸಿ, ಹಣೆಯಲ್ಲಿ ಗಂಧ ಅಥವಾ ವಿಭೂತಿ ಹಚ್ಚಿಕೊಂಡು, ಕಿತ್ತಳೆ ಬಣ್ಣದ ವಸ್ತ ಧರಿಸಿಕೊಂಡು ಥೇಟ್ ಅರ್ಚಕರಂತೆ ಪ್ರಸಿದ್ಧ ವಾರಾಣಸಿಯ ಕಾಶಿ ವಿಶ್ವನಾಥ ದೇಗುಲದ ಗರ್ಭಗುಡಿಯಲ್ಲಿ ಉತ್ತರಪ್ರದೇಶದ ಪೊಲೀಸ್ ಸಿಬ್ಬಂದಿ, ಭಕ್ತರು ದರ್ಶನಕ್ಕೆ ಬರುವ ವೇಳೆ ಕರ್ತವ್ಯ ನಿರ್ವಹಿಸಲಿದ್ದಾರೆ.

ವಿಶ್ವನಾಥನ ಗರ್ಭಗುಡಿಯ ಕರ್ತವ್ಯಕ್ಕೆ ನಿಯೋಜಿಸಲಾದ ಪೊಲೀಸ್ ಸಿಬ್ಬಂದಿಗೆ ಮಾತ್ರ ಈ ಹೊಸ ವಸ್ತ್ರಸಂಹಿತೆ ಅನ್ವಯಿಸಲಿದೆ. ಗರ್ಭಗುಡಿಯಲ್ಲಿ ಕರ್ತವ್ಯ ನಿಯೋಜಿತ ಮಹಿಳಾ ಪೊಲೀಸ್ ಸಿಬ್ಬಂದಿಯೂ ಈ ವಸ್ತ್ರ ಸಂಹಿತೆ ಪಾಲಿಸಲಿದ್ದಾರೆ. ದೇವಾಲಯದಲ್ಲಿ ಈ ಹೊಸ ಪ್ರಯೋಗ ಆರಂಭವಾಗಿದೆ ಎಂದು ವಾರಣಾಸಿ ದೇವಾಲಯದ ಅಧಿಕಾರಿಗಳು ತಿಳಿಸಿದ್ದಾರೆ.

ಭಕ್ತರ ಸೌಕರ್ಯ ಗಮನದಲ್ಲಿಟ್ಟುಕೊಂಡು ದೇವಾಲಯದಲ್ಲಿ ಸೌಹಾರ್ದ ವಾತಾವರಣ ಒದಗಿಸುವ ಉದ್ದೇಶದಿಂದ ಇದನ್ನು ಆರಂಭಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ದೇವಸ್ಥಾನದಲ್ಲಿ ಪೊಲೀಸರು ತಮ್ಮೊಂದಿಗೆ ಸರಿಯಾಗಿ ವರ್ತಿಸುವುದಿಲ್ಲ. ಜನಸಂದಣಿ ನಿಯಂತ್ರಿಸಲು ಆಗಾಗ್ಗೆ ದೈಹಿಕ ಬಲ ಬಳಸುತ್ತಾರೆ ಎಂದು ಭಕ್ತರಿಂದ ದೂರುಗಳು ಬಂದಿವೆ.

ಪುರೋಹಿತರ ಮಾತನ್ನು ಸುಲಭವಾಗಿ ಪಾಲಿಸುವ ಭಕ್ತರು ಕೆಲವೊಮ್ಮೆ ಪೊಲೀಸರ ಮಾತನ್ನು ಕೇಳುವುದಿಲ್ಲ. ಪುರೋಹಿತರ ವೇಷದಲ್ಲಿ ಪೋಲಿಸರು ಭಕ್ತರ ಗುಂಪನ್ನು ಸೌಮ್ಯವಾಗಿ ನಿಭಾಯಿಸಬಹುದೆಂದು ಈ ಹೊಸ ವಸ್ತ್ರಸಂಹಿತೆ ಅಳವಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.



## ಭಾರತಕ್ಕೆ ನೂತನ ಬ್ರಿಟನ್ ಹೈಕಮಿಷನರ್ ಆಗಿ 'ಲಿಂಡಿ ಕ್ಯಾಮರೂನ್' ನೇಮಕ




**ನವದೆಹಲಿ:** ಲಿಂಡಿ ಕ್ಯಾಮರೂನ್ ಅವರು ಭಾರತಕ್ಕೆ ಬ್ರಿಟನ್'ನ ನೂತನ ಹೈಕಮಿಷನರ್ ಆಗಿ ನೇಮಕಗೊಂಡಿದ್ದಾರೆ. ಅಲೆಕ್ಸ್ ಎಲ್ಲಿಸ್ ಬದಲಿಗೆ ಲಿಂಡಿ ಕ್ಯಾಮರೂನ್ ಆಡಲಿದ್ದಾರೆ. ಲಿಂಡಿ ಕ್ಯಾಮರೂನ್ ಅವರನ್ನ ಭಾರತ ಗಣರಾಜ್ಯಕ್ಕೆ ಬ್ರಿಟಿಷ್ ಹೈಕಮಿಷನರ್ ಆಗಿ ನೇಮಿಸಲಾಗಿದೆ ಎಂದು ಯುಕೆ ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ.ಮತ್ತೊಂದು ರಾಜತಾಂತ್ರಿಕ ಸೇವೆಗೆ ನಿಯೋಜಿಸಲಾದ ಅಲೆಕ್ಸ್ ಎಲ್ಲಿಸ್ ಅವರ ಸ್ಥಾನವನ್ನ ಕ್ಯಾಮರೂನ್ ತುಂಬಲಿದ್ದಾರೆ. ಲಿಂಡಿ ಕ್ಯಾಮರೂನ್ ಈ ತಿಂಗಳ ಕೊನೆಯಲ್ಲಿ ದೆಹಲಿಯಲ್ಲಿ ತಮ್ಮ ಸ್ಥಾನವನ್ನ ವಹಿಸಿಕೊಳ್ಳಲಿದ್ದಾರೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಈ ಹಿಂದೆ, ಲಿಂಡಿ ಕ್ಯಾಮರೂನ್ ಬ್ರಿಟನ್ನ ರಾಷ್ಟ್ರೀಯ ಸೈಬರ್ ಭದ್ರತಾ ಕೇಂದ್ರದ ಮುಖ್ಯ ಕಾರ್ಯನಿರ್ವಾಹಕ ಸ್ಥಾನದಲ್ಲಿದ್ದರು ಮತ್ತು 2020 ರಿಂದ ಈ ಜವಾಬ್ದಾರಿಯಲ್ಲಿದ್ದಾರೆ. ಲಿಂಡಿ ಯುಕೆಯ ಉತ್ತರ ಐರ್ಲೆಂಡ್ ಕಚೇರಿಯ ಮಹಾನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ. ಗಮನಾರ್ಹವಾಗಿ, ಭಾರತ ಮತ್ತು ಬ್ರಿಟನ್ ನಡುವೆ ಮುಕ್ತ ವ್ಯಾಪಾರ ಒಪ್ಪಂದದ ಬಗ್ಗೆ ಮಾತುಕತೆ ನಡೆಯುತ್ತಿರುವ ಸಮಯದಲ್ಲಿ ಲಿಂಡಿ ಕ್ಯಾಮರೂನ್ ಅವರ ನೇಮಕಾತಿಯನ್ನ ಮಾಡಲಾಗುತ್ತಿದೆ. ಆದ್ರೆ, ಭಾರತದಲ್ಲಿ ಸಾರ್ವತ್ರಿಕ ಚುನಾವಣೆಗಳಿಂದಾಗಿ, ಈ ಮಾತುಕತೆ ಸ್ಥಗಿತಗೊಂಡಿದೆ.

# ಡಿಜಿಟಲ್ ಸೇವೆ ರಫ್ತಿನಲ್ಲಿ ಹೆಚ್ಚಳ

**ನವದೆಹಲಿ:** ಡಿಜಿಟಲ್ ಆಗಿ ಸೇವೆಗಳನ್ನು ಒದಗಿಸುವ ಬಿಸಿನೆಸ್ನಲ್ಲಿ ಭಾರತ ವಿಶ್ವದ ಪ್ರಮುಖ ಹಬ್ಗಳಲ್ಲಿ ಒಂದಾಗಿದೆ.ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇ. 17ರಷ್ಟು ರಫ್ತು ಹೆಚ್ಚಳವಾಗಿದೆ. ಭಾರತ ಜಾಗತಿಕ ಸರ್ವಿಸ್ ಉದ್ಯಮದಲ್ಲಿ ಡಿಜಿಟಲ್ ಆಗಿ ತಲುಪಿಸುವ ಸರ್ವಿಸ್ ಬಿಸಿನೆಸ್ ಪಾಲು ಶೇ.

20ರಷ್ಟಿದೆ. ಒಟ್ಟಾರೆ ಸರಕು ಮತ್ತು ಸೇವೆ ರಫ್ತಿನಲ್ಲಿ ಇದರ ಪಾಲು ಶೇ. 13.8ರಷ್ಟಿದೆ. ಈ ಹಿಂದೆ 2023 ರಲ್ಲಿ ಜಾಗತಿಕವಾಗಿ ಈ ಉದ್ಯಮ 2023ರಲ್ಲಿ 4.25 ಟ್ರಿಲಿಯನ್ ಡಾಲರ್ ಇತ್ತು ಆದರೆ ಈ ಬಾರಿ 17ರಷ್ಟು ರಫ್ತು ಹೆಚ್ಚಳವಾಗಿದೆ.

ಡಬ್ಲ್ಯುಟಿಒ ಬಿಡುಗಡೆ ಮಾಡಿದ 2023ರ ಅಂಕಿ ಅಂಶವನ್ನು ನೋಡುವುದಾದರೆ, ಡಿಜಿಟಲ್ ಆಗಿ ತಲುಪಿಸುವ ಸರ್ವಿಸ್ ರಫ್ತು ಉದ್ಯಮದಲ್ಲಿ ವೃತ್ತಿಪರ ಮತ್ತು ತಾಂತ್ರಿಕ ಸೇವೆ ಶೇ. 41.2ರಷ್ಟಿದೆ. ಕಂಪ್ಯೂಟರ್ ಸರ್ವಿಸ್ ಶೇ 20.5, ಫೈನಾನ್ಷಿಯಲ್ ಸರ್ವಿಸ್ ಶೇ. 16, ಬೌದ್ಧಿಕ ಆಸ್ತಿ ಸಂಬಂಧಿತ ಸೇವೆ ಶೇ. 10.9, ಇನ್ಶೂರೆನ್ಸ್ ಮತ್ತು ಪೆನ್ಷನ್ ಸರ್ವಿಸ್ ಶೇ. 5.2, ಟೆಲಿಕಮ್ಯೂನಿಕೇಶನ್ಸ್ ಸರ್ವಿಸ್ ಶೇ. 2.6 ಹಾಗೂ ಇತರೆ ಶೇ. 3.6ರಷ್ಟಿದೆ.

ಇನ್ಫೋಸಿಸ್, ಟಿಸಿಎಸ್ ಮೊದಲಾದ ಭಾರತೀಯ ಐಟಿ ಕಂಪನಿಗಳು ಎಐ ತಂತ್ರಜ್ಞಾನವನ್ನು ಬಳಸಿ ತಮ್ಮ ಸೇವೆಗೆ ಮೊನಚು ತರುವ ಕೆಲಸ ಮಾಡುತ್ತಿವೆ. 2024ರಲ್ಲಿ ಭಾರತದ ರಫ್ತು ಮಾರುಕಟ್ಟೆಗೆ ಇದು ಉತ್ತೇಜನ ನೀಡಲಿದೆ.

ಇನ್ಫಾರ್ಮೇಶನ್ ಮತ್ತು ಕಮ್ಯೂನಿಕೇಶನ್ಸ್ ಟೆಕ್ನಾಲಜಿ (ಐಸಿಟಿ) ನೆಟ್ವರ್ಕ್ ಮೂಲಕ ತಲುಪಿಸುವ ಸೇವೆಗಳಲ್ಲಿ ಮಾರ್ಕೆಟಿಂಗ್ ಸರ್ವಿಸ್, ಫೈನಾನ್ಷಿಯಲ್ ಸರ್ವಿಸ್, ಪ್ರೊಫೆಷನಲ್ ಸರ್ವಿಸ್, ಶಿಕ್ಷಣ ತರಬೇತಿ ಸೇವೆ ಮೊದಲಾದವೂ ಒಳಗೊಂಡಿರುತ್ತವೆ.

# ಅಯೋಧ್ಯೆಯಲ್ಲಿ ರಾಮ ನವಮಿ

## 500 ವರ್ಷಗಳ ಬಳಿಕ ರಾಮಜನ್ಮೋತ್ಸವ ಆಚರಣೆ

ಲಖನೌ: ಅಯೋಧ್ಯೆ ಶ್ರೀ ರಾಮ ಜನ್ಮಭೂಮಿಯ ರಾಮ ಮಂದಿರದಲ್ಲಿ 500 ವರ್ಷಗಳ ಬಳಿಕ ಇದೇ ಮೊದಲ ಬಾರಿಗೆ ರಾಮ ನವಮಿ ಆಚರಣೆಗೆ ಸಜ್ಜಾಗುತ್ತಿದೆ. ನೂತನ ರಾಮ ಮಂದಿರ ಇದೇ ವರ್ಷ ಜನವರಿ 22 ರಂದು ಲೋಕಾರ್ಪಣೆಯಾಗಿದ್ದು, ರಾಮಲಲಾ (ಬಾಲರಾಮ) ವಿರಾಜಮಾನನಾದ ಬಳಿಕ ನಡೆಯುತ್ತಿರುವ ಮೊದಲ ರಾಮನವಮಿ ಇದು. ಆದ್ದರಿಂದ ಅಯೋಧ್ಯೆಯಲ್ಲಿ ವಿಶೇಷ ಸಿದ್ಧತೆಗಳು ಭರದಿಂದ ಸಾಗಿದೆ. ರಾಮ ನವಮಿ ಎಂದರೆ ಶ್ರೀ ೯ರಾಮನ ಜನ್ಮೋತ್ಸವ ಆಚರಣೆ.

ಈಗಾಗಲೇ ಹಿಂದುಗಳ ಹೊಸ ವರ್ಷ ಕ್ರೋಧಿ ನಾಮ ಸಂವತ್ಸರ ಶುರುವಾಗಿದೆ. ಏಪ್ರಿಲ್ 9 ರಿಂದ ಚೈತ್ರ ನವರಾತ್ರಿ ಆಚರಣೆಯೂ ಆರಂಭವಾಗಿದೆ. ಆದರೆ ಈ ಬಾರಿ ರಾಮ ನವಮಿ ಮತ್ತು ದುರ್ಗಾ ನವಮಿ ಏಪ್ರಿಲ್ 17ಕ್ಕೆ ನಡೆಯಲಿದೆ. ಭಾರತದಾದ್ಯಂತ ಶ್ರೀ ರಾಮ ನವಮಿ ಆಚರಣೆ ನಡೆಯುತ್ತಿದ್ದು, ಮನೆ ಮನೆಗಳಲ್ಲಿ ಈ ಬಾರಿ ಆಚರಣೆಯ ಹುಮ್ಮಸ್ಸು ಕಂಡುಬಂದಿದೆ.

ರಾಮನವಮಿ ಆಚರಣೆ ನಿಮಿತ್ತ ಅಯೋಧ್ಯೆ ರಾಮಮಂದಿರದಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಶಾಸ್ತ್ರೀಯ ಗಾಯಕರು ಭಾವಗೀತೆ, ಭಜನೆ ಹಾಡುಗಳು ಮತ್ತು ಭಕ್ತಿಗೀತೆಗಳನ್ನು ಹಾಡಲಿದ್ದಾರೆ. ದೇವಾಲಯವನ್ನು ಕೂಡ ವಿಶೇಷ ರೀತಿಯಲ್ಲಿ ಅಲಂಕರಿಸಲಾಗುತ್ತಿದೆ. 50 ಕ್ವಿಂಟಾಲ್ ದೇಶಿ ಹಾಗೂ ವಿದೇಶಿ ಹೂವುಗಳಿಂದ ದೇವಾಲಯವನ್ನು ಅಲಂಕರಿಸಲಾಗುತ್ತಿದೆ.



## ವಂಚನೆ ಪ್ರಕರಣ-ಆಗರ್ಭ ಶ್ರೀಮಂತ ಉದ್ಯಮಿಗೆ ಮರಣದಂಡನೆ ಶಿಕ್ಷೆ

**ಹನೋಯ್:** ದೇಶದ ಅತೀ ದೊಡ್ಡ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಯೆಟ್ನಾಂನ ರಿಯಲ್ ಎಸ್ಟೇಟ್ ಉದ್ಯಮಿ ಟ್ರೂಂಗ್ ಮೈ ಲ್ಯಾನ್ ಗೆ ಹೊ ಚಿ ಮಿನ್ಹ ನಗರದ ನ್ಯಾಯಾಲಯ ಮರಣದಂಡನೆ ಶಿಕ್ಷೆ ವಿಧಿಸಿದೆ. 2022ರಲ್ಲಿ ಬಂಧನಕ್ಕೊಳಗಾಗಿದ್ದ ಲ್ಯಾನ್ (67ವರ್ಷ) ಅವರು ರಿಯಲ್ ಎಸ್ಟೇಟ್ ಕಂಪನಿ ವ್ಯಾನ್ ಥಿನ್ ಫಾಟ್ ಮುಖ್ಯಸ್ಥರಾಗಿದ್ದರು. ಈಕೆ 12 ಶತಕೋಟಿ ಮೌಲ್ಯದ ವಂಚನೆ ಆರೋಪ ಎದುರಿಸುತ್ತಿದ್ದು, ಇದು ವಿಯೆಟ್ನಾಂನ 2022ನೇ ಸಾಲಿನ ಜಿಡಿಪಿಯ ಸುಮಾರು 3 ಪ್ರತಿಶತವಾಗಿದೆ ಎಂದು ಅಸೋಸಿಯೇಟೆಡ್ ಪ್ರೆಸ್ ವರದಿ ಮಾಡಿದೆ. 2012 ಮತ್ತು 2022ರ ನಡುವೆ ಸಾವಿರಾರು ನಕಲಿ ಕಂಪನಿಗಳ ಮೂಲಕ ಸರ್ಕಾರಿ ಅಧಿಕಾರಿಗಳಿಗೆ ಲಂಚ ನೀಡಲು ಸೈಗಾನ್ ಜಾಯಿಂಟ್ ಸ್ಟಾಕ್ ಕಮರ್ಷಿಯಲ್ ಬ್ಯಾಂಕ್ ಅನ್ನು ಲ್ಯಾನ್ ಕಾನೂನು ಬಾಹಿರವಾಗಿ ನಿಯಂತ್ರಣದಲ್ಲಿಟ್ಟುಕೊಂಡಿದ್ದರು. 2022ರಲ್ಲಿ ಭ್ರಷ್ಟಾಚಾರ ನಿಗ್ರಹ ತೀವ್ರಗೊಂಡ ಹಿನ್ನೆಲೆಯಲ್ಲಿ ಲ್ಯಾನ್ ಬಂಧನ ಹೈ ಪ್ರೊಫೈಲ್ ನಲ್ಲಿ ಒಂದಾಗಿದೆ.



# ಲೋಕಸಭಾ ಚುನಾವಣೆಯಿಂದ ಹಿಂದೆ ಸರಿದ ಟಿಡಿಪಿ

**ಹೈದರಾಬಾದ್:** ಈ ಬಾರಿಯ ಲೋಕಸಭಾ ಚುನಾವಣೆಗೆ ಟಿಡಿಪಿ ತನ್ನ ಅಭ್ಯರ್ಥಿಗಳನ್ನು ಕಣಕ್ಕೆ ಇಳಿಸದಿರಲು ನಿರ್ಧರಿಸಿದೆ ಎಂದು ಟಿಡಿಪಿ ವಕ್ತಾರರಾದ ಜ್ಯೋತ್ಸ್ನಾ ತಿರುನಗರಿ ಹೇಳಿದ್ದಾರೆ. ಪಕ್ಷ ಯಾರನ್ನು ಬೆಂಬಲಿಸಬೇಕು ಎಂಬುದರ ಬಗ್ಗೆ ತೀರ್ಮಾನಿಸಿಲ್ಲ ಎಂದು ಅವರು ಹೇಳಿದರು.

ಆಂಧ್ರಪ್ರದೇಶದಲ್ಲಿ ಎನ್.ಡಿ.ಎ ಕೂಟದಲ್ಲಿರುವ ಟಿಡಿಪಿ ತೆಲಂಗಾಣದಲ್ಲಿ ಸ್ಪರ್ಧಿಸುವುದರಿಂದ ದೂರ ಉಳಿದಿದೆ. ಚುನಾವಣೆಯಲ್ಲಿ ಯಾವ ಪಕ್ಷವನ್ನು ಬೆಂಬಲಿಸಬೇಕು ಎಂಬುದನ್ನು ಮುಂದಿನ ದಿನಗಳಲ್ಲಿ ನಾಯಕರು ತೀರ್ಮಾನಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

# ವಿಪಕ್ಷಗಳಿಗೆ ತುರ್ತು ಪರಿಸ್ಥಿತಿ ನೆನಪಿಸಿದ ಮೋದಿ



**ನಾಗ್ಪುರ:** ಮೋದಿ ಪ್ರಧಾನಿಯಾಗಿ ಆಯ್ಕೆಯಾದರೆ ಪ್ರಜಾಪ್ರಭುತ್ವಕ್ಕೆ ಅಪಾಯವಾಗುತ್ತದೆ ಎನ್ನುತ್ತಿರುವ ವಿಪಕ್ಷಗಳಿಗೆ ತುರ್ತು ಪರಿಸ್ಥಿತಿಯ ಸಂದರ್ಭವನ್ನು ನೆನಪಿಸಿದ ಪ್ರಧಾನಿ ನರೇಂದ್ರ ಮೋದಿ, ಆಗ ಪ್ರಜಾಪ್ರಭುತ್ವಕ್ಕೆ ಅಪಾಯ ಎದುರಾಗಿರಲಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ನಾಗ್ಪುರ ಜಿಲ್ಲೆಯ ಕನ್ಹನ್‌ನಲ್ಲಿ ಚುನಾವಣಾ ರ್ಯಾಲಿಯಲ್ಲಿ ಮಾತನಾಡಿದ ಮೋದಿ ಈ ಬಾರಿಯ ಮತದಾನ ಮುಂದಿನ ಒಂದು ಸಾವಿರ ವರ್ಷಗಳಿಗೆ ಹಾಕುವ ಬುನಾದಿ ಎಂದರು.

ಜಮ್ಮು ಕಾಶ್ಮೀರದಲ್ಲಿ 370ನೇ ವಿಧಿಯ ರದ್ದತಿಯನ್ನು ವಿರೋಧಿಸಿದ ವಿಪಕ್ಷಗಳು ಪ್ರತ್ಯೇಕವಾದಿಗಳ ಪ್ರತಿ ಸೌಮ್ಯಧೋರಣೆ ಹೊಂದಿದ್ದಾರೆ ಎಂದು ಆರೋಪಿಸಿದ ಅವರು, 370ನೇ ವಿಧಿಯ ರದ್ದತಿಯಿಂದ ಕೇಂದ್ರಾಡಳಿತ ಪ್ರದೇಶದ ದಲಿತ, ಬುಡಕಟ್ಟು ಸಮುದಾಯದ ಜನ ಸಾಂವಿಧಾನಿಕ ಹಕ್ಕುಗಳನ್ನು ಪಡೆದಿದ್ದಾರೆ ಎಂದರು.

## ಚಂದ್ರನ ಮೇಲಿಳಿಯಲು ಜಪಾನ್ ಗಗನಯಾತ್ರಿಗೆ ಅವಕಾಶ

**ವಾಷಿಂಗ್ಟನ್:** ಅಮೆರಿಕನ್ನರನ್ನು ಹೊರತುಪಡಿಸಿ ಚಂದ್ರನ ಮೇಲೆ ಇಳಿದ ವಿಶ್ವದ ಮೊದಲ ಗಗನಯಾತ್ರಿ ಎಂಬ ಹಿರಿಮೆಗೆ ಜಪಾನ್‌ನ ಗಗನಯಾತ್ರಿ ಪಾತ್ರವಾಗಲಿದ್ದಾರೆ ಎಂದು ಅಮೆರಿಕದ ಅಧ್ಯಕ್ಷ ಜೋ ಬೈಡನ್ ಘೋಷಿಸಿದ್ದಾರೆ. ಅಮೆರಿಕದ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ(ನಾಸಾ)ದ ಮುಂಬರುವ ಚಂದ್ರಯಾನ ಯೋಜನೆಯಲ್ಲಿ ಜಪಾನ್‌ನ ಇಬ್ಬರು ಗಗನಯಾತ್ರಿಗಳು ಪಾಲ್ಗೊಳ್ಳಲಿದ್ದಾರೆ. ಅದರಲ್ಲಿ ಒಬ್ಬರು ಅಮೆರಿಕನ್ನರನ್ನು ಹೊರತುಪಡಿಸಿ ಚಂದಿರನ ಮೇಲಿಳಿದ ವಿಶ್ವದ ಮೊತ್ತಮೊದಲ ಗಗನಯಾನಿ ಎಂಬ ಹಿರಿಮೆಗೆ ಪಾತ್ರವಾಗಲಿದ್ದಾರೆ ಎಂದು ಜಪಾನ್ ಪ್ರಧಾನಿ ಫುಮಿಯೊ ಕಿಷಿಡಾ ಜತೆಗಿನ ಜಂಟಿ ಸುದ್ದಿಗೋಷ್ಠಿಯಲ್ಲಿ ಬೈಡನ್ ಘೋಷಿಸಿದರು. ಇದೊಂದು ದೊಡ್ಡ ಸಾಧನೆಯಾಗಲಿದೆ ಎಂದು ಜಪಾನ್ ಪ್ರಧಾನಿ ಶ್ಲಾಘಿಸಿದ್ದು ಇದಕ್ಕೆ ಬದಲಾಗಿ ಈ ಯೋಜನೆಗೆ ರೋವರ್ ನೌಕೆಯನ್ನು ಜಪಾನ್ ಪೂರೈಸಲಿದೆ ಎಂದು ಘೋಷಿಸಿದರು. 50ಕ್ಕೂ ಅಧಿಕ ವರ್ಷಗಳ ಬಳಿಕ ಚಂದಿರನಲ್ಲಿ ಮಾನವನನ್ನು ಇಳಿಸುವ ಯೋಜನೆಯನ್ನು ಅಮೆರಿಕ ರೂಪಿಸಿದೆ. 1969ರಿಂದ 1972ರವರೆಗೆ 12 ಅಮೆರಿಕನ್ನರು ಅಪೋಲೊ ಯೋಜನೆಯ ಮೂಲಕ ಚಂದಿರನ ಮೇಲೆ ಕಾಲಿಟ್ಟಿದ್ದರು. ಇದೀಗ 2026ರಲ್ಲಿ ನಿಗದಿಯಾಗಿರುವ ಕಾರ್ಯಾಚರಣೆಯಲ್ಲಿ ಕೇವಲ ಅಮೆರಿಕನ್ನರು ಮಾತ್ರ ಚಂದಿರನ ಮೇಲೆ ಇಳಿಯುವುದಿಲ್ಲ ಎಂದು ನಾಸಾದ ಮುಖ್ಯಸ್ಥ ಬಿಲ್ ನೆಲ್ಸನ್ ಹೇಳಿದ್ದರು. ಈ ಮಧ್ಯೆ, 2030ರ ಒಳಗೆ ಚಂದಿರನ ಮೇಲೆ ಮಾನವನನ್ನು ಇಳಿಸುವುದಾಗಿ ಚೀನಾ ಘೋಷಿಸಿದೆ.

# ನಾಯಿ ಮಲ ವಿಸರ್ಜನೆ: ತುರ್ತು ಲ್ಯಾಂಡ್ ಆದ ವಿಮಾನ

**ಹೂಸ್ಟನ್:** ಟೇಕ್ ಆಫ್ ಆದ ಕೆಲವೇ ಕ್ಷಣಗಳಲ್ಲಿ ನಾಯಿಯಿಂದಾಗಿ ವಿಮಾನವೊಂದು ತುರ್ತು ಭೂಸ್ಪರ್ಶ ಮಾಡಿರುವ ಘಟನೆ ಅಮೆರಿಕದ ಡಲ್ಲಾಸ್ ನಲ್ಲಿ ನಡೆದಿದೆ.ನಾಯಿಯು ವಿಮಾನದಲ್ಲಿ ಮಲವಿಸರ್ಜನೆ ಮಾಡಿದ್ದರಿಂದ ಅಮೆರಿಕಾದ ಹೂಸ್ಟನ್ನಿಂದ ಸಿಯಾಟಲ್ಗೆ ಹೊರಟಿದ್ದ ವಿಮಾನ ಕೆಲವೇ ಕ್ಷಣಗಳಲ್ಲಿ ಡಲ್ಲಾಸ್ ನಲ್ಲಿ ಲ್ಯಾಂಡ್ ಆಗಿದೆ. ಸಿಯಾಟಲ್ ಗೆ ಹೊರಟಿದ್ದ ವಿಮಾನದಲ್ಲಿ ಪ್ರಯಾಣಿಕನೊಬ್ಬ ಸಾಕು ನಾಯಿಯನ್ನು ಜೊತೆಗೆ ಕರೆದುಕೊಂಡು ಬಂದಿದ್ದಾನೆ. ಫಸ್ಟ್ ಕ್ಲಾಸ್ ನಲ್ಲಿ ಪ್ರಯಾಣಿಸುತ್ತಿದ್ದಾಗ ನಾಯಿಯು ವಿಮಾನದ ಕಾರ್ಪೆಟ್ ಮೇಲೆ ಮಲವಿಸರ್ಜನೆ ಮಾಡಿದೆ. ಇದರ ದುರ್ವಾಸನೆಯಿಂದಾಗಿ ಪ್ರಯಾಣಿಕರು, ಸಿಬ್ಬಂದಿ ಕಿರಿಕಿರಿ ಅನುಭವಿಸಿದ್ದರಿಂದ ವಿಮಾನವನ್ನು ಸ್ವಚ್ಛಗೊಳಿಸಲು ಡಲ್ಲಾಸ್ ನಲ್ಲಿ ಲ್ಯಾಂಡ್ ಮಾಡಲಾಯಿತು. ಇದರಿಂದ ವಿಮಾನ ಸುಮಾರು 2 ಗಂಟೆಗಳ ಬಳಿಕ ಡಲ್ಲಾಸ್ ನಿಂದ ಸಿಯಾಟಲ್ ಗೆ ಪ್ರಯಾಣ ಬೆಳೆಸಿತು.




# ಬೆಟ್ಟದ ತುದಿಯಲ್ಲಿ ಸ್ಟಂಟ್ ಮಾಡಿ ಪ್ರಪಾತಕ್ಕೆ ಬಿದ್ದ ಯುವಕ

**ನವದೆಹಲಿ:** ಯುವಕನೋರ್ವ ಬೆಟ್ಟದ ತುದಿಯಲ್ಲಿ ನಿಂತು ಸ್ಟಂಟ್ ಮಾಡುವಾಗ ಬ್ಯಾಲೆನ್ಸ್ ಸಿಗದೆ ಮುಂದಕ್ಕೆ ಹೋಗಿ ಪಾತಾಳಕ್ಕೆ ಬಿದ್ದಿರುವ ಘಟನೆಯೊಂದು ನಡೆದಿದೆ. ಯುವಕರಿಬ್ಬರು ಬೆಟ್ಟದ ತುದಿಗೆ ಹೋಗಿದ್ದಾರೆ. ಈ ವೇಳೆ ಅಲ್ಲಿ ಸ್ಟಂಟ್ಗಳನ್ನ ಮಾಡುತ್ತಿರುತ್ತಾರೆ. ಆಗ ಇಬ್ಬರ ಪೈಕಿ ಒಬ್ಬ ಯುವಕ ಬೆಟ್ಟದ ತುದಿಯಲ್ಲಿ ನಿಂತು ಬ್ಯಾಕ್ ಫ್ಲಿಪ್ ಹೊಡೆಯುತ್ತಾನೆ. ಆದರೆ ಯುವಕನಿಗೆ ನಿಲ್ಲಲು ಬ್ಯಾಲೆನ್ಸ್ ಸಿಗದ ಕಾರಣ ಹಾಗೆ ಮುಂದೆ ಹೋಗಿ ಪಾತಾಳಕ್ಕೆ ಬಿದ್ದಿದ್ದಾನೆ. ಈ ಘಟನೆ ಎಲ್ಲಿ ನಡೆದಿರೋದು ಎಂದು ತಿಳಿದು ಬಂದಿಲ್ಲ.ಆದ್ರೆ, ಯುವಕ ಸ್ಟಂಟ್ ಮಾಡಿ ಬೀಳುತ್ತಿರುವಾಗ ತಕ್ಷಣ ಇನ್ನೊಬ್ಬ ಯುವಕ ಆತನನ್ನ ಹಿಡಿಯಲು ಮುಂದಾಗುತ್ತಾನೆ. ಆದರೆ ಯುವಕ ಕೈಗೆ ಸಿಗದೇ ಪಾತಾಳಕ್ಕೆ ಮುಗ್ಗರಿಸಿ ಬಿದ್ದಿದ್ದಾನೆ. ಈ ಘಟನೆಯ ದೃಶ್ಯ ಮೊಬೈಲ್ ನಲ್ಲಿ ಸೆರೆಯಾಗಿದೆ.



# ರಥೋತ್ಸವ ವೇಳೆ ವಿದ್ಯುತ್ ಸ್ಪರ್ಶ:13 ಮಕ್ಕಳು ಅಸ್ವಸ್ಥ

**ಆಂಧ್ರಪ್ರದೇಶ:** ಮೆರವಣಿಗೆ ಭಾಗವಾದ ರಥವು ಓವರ್‌ಹೆಡ್ ಹೈವೋಲ್ಟೇಜ್ ವಿದ್ಯುತ್ ತಂತಿಗೆ ತಗುಲಿ ಕನಿಷ್ಠ 13 ಮಕ್ಕಳು ಗಾಯಗೊಂಡಿದ್ದಾರೆ.ಯುಗಾದಿ ರಥೋತ್ಸವದ ವೇಳೆ 13 ವಿದ್ಯಾರ್ಥಿಗಳು ವಿದ್ಯುತ್ ಸ್ಪರ್ಶದಿಂದ ಗಾಯಗೊಂಡಿದ್ದು, ಕೂಡಲೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಘಟನೆ ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ತೇಕೂರ್ ಗ್ರಾಮದಲ್ಲಿ ನಡೆದಿದೆ. ತಕ್ಷಣ ಮಕ್ಕಳನ್ನು ಕರ್ನೂಲ್ ಆಸ್ಪತ್ರೆಗೆ ದಾಖಲಿಸಲಾಗಿದ್ದು ಮಕ್ಕಳ ಜೀವಕ್ಕೆ ತಕ್ಷಣಕ್ಕೆ ಯಾವುದೇ ಅಪಾಯವಿಲ್ಲ ಎಂದು ವೈದ್ಯರು ಖಚಿತಪಡಿಸಿದ್ದಾರೆ. ಯುಗಾದಿ ಉತ್ಸವದ ಆಚರಣೆಯ ಮುಕ್ತಾಯದ ನಂತರ 13 ಮಕ್ಕಳು ವಿದ್ಯುತ್ ಆಘಾತದಿಂದ ಗಾಯಗೊಂಡಿದ್ದಾರೆ ಯಾವುದೇ ಸಾವುನೋವುಗಳು ಸಂಭವಿಸಿಲ್ಲ. ಗಾಯಗೊಂಡ ಮಕ್ಕಳನ್ನು ಭೇಟಿ ಮಾಡಲು ವೈಎಸ್‌ಆರ್‌ಸಿಪಿ ಮುಖಂಡ ಮತ್ತು ಪಾಣ್ಯಂ ಶಾಸಕ ಕಾಟಸಾನಿ ರಾಮಭೂಪಾಲ್ ರೆಡ್ಡಿ ಮತ್ತು ನಂದ್ಯಾಳ ಟಿಡಿಪಿ ಅಭ್ಯರ್ಥಿ ಬೈರೆಡ್ಡಿ ಶಬರಿ ಆಸ್ಪತ್ರೆಗೆ ಭೇಟಿ ನೀಡಿದರು.



# ಪಾಕಿಸ್ತಾನ: ಕಂದಕಕ್ಕೆ ಉರುಳಿದ ಟ್ರಕ್; 17 ಮಂದಿ ಸಾವು

**ಬಲೂಚಿಸ್ತಾನ:** ಬಲೂಚಿಸ್ತಾನದ ಹಬ್ ಜಿಲ್ಲೆಯಲ್ಲಿ ಬುಧವಾರ ಸಂಭವಿಸಿದ ದುರಂತ ಘಟನೆಯಲ್ಲಿ ಯಾತ್ರಾರ್ಥಿಗಳನ್ನ ಕರೆದೊಯ್ಯುತ್ತಿದ್ದ ಟ್ರಕ್ ಕಂದಕಕ್ಕೆ ಬಿದ್ದು 17 ಜನರು ಸಾವನ್ನಪ್ಪಿದ್ದಾರೆ ಮತ್ತು 35ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ. ಬುಧವಾರ ರಾತ್ರಿ 11 ಗಂಟೆಯ ವೇಳೆಗೆ ಅಪಘಾತದ ಬಗ್ಗೆ ಮಾಹಿತಿ ಬಂದಿದ್ದು, ಎರಡು ಗಂಟೆಗಳಲ್ಲಿ ರಕ್ಷಣಾ ಕಾರ್ಯಾಚರಣೆ ಪೂರ್ಣಗೊಂಡಿದೆ ಎಂದು ಸಾಮಾಜಿಕ ಕಾರ್ಯಕರ್ತ ಸಾದ್ ಈಧಿ ಸುದ್ದಿಗಾರರಿಗೆ ಮಾಹಿತಿ ನೀಡಿದರು. ವರದಿ ಪ್ರಕಾರ, ಯಾತ್ರಾರ್ಥಿಗಳು ಬಲೂಚಿಸ್ತಾನದ ಖುಜ್ದಾರ್ ಜಿಲ್ಲೆಯ ದೂರದ ಮುಸ್ಲಿಂ ಸೂಫಿ ದರ್ಗಾ ಶಾ ನೂರಾನಿಗೆ ಗೌರವ ಸಲ್ಲಿಸಲು ತೆರಳುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಗಾಯಗೊಂಡ ಟ್ರಕ್ ಚಾಲಕ ಕರೀಂ ಬಕ್ಷ್'ನನ್ನ ವಶಕ್ಕೆ ಪಡೆಯಲಾಗಿದೆ. ಉಪ ವಿಭಾಗೀಯ ಪೊಲೀಸ್ ಅಧಿಕಾರಿ ಸಕ್ರೋ ವಾಜಿದ್ ಅಲಿ ಅವರ ಪ್ರಕಾರ, ಡ್ರೈವ್ ಸಮಯದಲ್ಲಿ ತಿರುವಿನಿಂದಾಗಿ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಉರಿಬಿಸಿಲಲ್ಲಿ ಗದ್ದೆಗೆ ಹೋಗಿ ಗೋಧಿ ಬೆಳೆ ಕಟಾವು ಮಾಡಿದ ಸಂಸದೆ ಹೇಮಾ ಮಾಲಿನಿ



ಮಥುರಾ ಲೋಕಸಭಾ ಸಂಸದೆ ಹಾಗೂ ನಟಿ ಹೇಮಾ ಮಾಲಿನಿ ಅವರು ಇತ್ತೀಚಿನ ದಿನಗಳಲ್ಲಿ ಚುನಾವಣಾ ಪ್ರಚಾರದಲ್ಲಿ ನಿರತರಾಗಿದ್ದಾರೆ. ಗುರುವಾರ ಚುನಾವಣಾ ಪ್ರಚಾರದ ವೇಳೆ ರೈತರ ಮಧ್ಯೆ ಆಗಮಿಸಿದ ಹೇಮಾ ಮಾಲಿನಿ ಸುಡು ಬಿಸಿಲಿನಲ್ಲಿ ಕೈಯಲ್ಲಿ ಕುಡುಗೋಲು ಹಿಡಿದು ಗದ್ದೆಗೆ ತೆರಳಿ ಗೋಧಿ ಬೆಳೆ ಕಟಾವು ಮಾಡುತ್ತಿದ್ದ ದೃಶ್ಯ ಕಂಡು ಬಂತು.

ಹೇಮಾ ಮಾಲಿನಿ ಅವರು ತಮ್ಮ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ರೈತರು ಹೊಲಗಳಲ್ಲಿ ಬೆಳೆ ಕಟಾವು ಮಾಡುತ್ತಿರುವ ಚಿತ್ರಗಳನ್ನು ಹಂಚಿಕೊಂಡಿದ್ದಾರೆ, ಇದರಲ್ಲಿ ಅವರು ಕಂಜೀವರಂ ಸೀರೆಯನ್ನು ಧರಿಸಿ ಮಧ್ಯಾಹ್ನದ ಸಮಯದಲ್ಲಿ ರೈತರೊಂದಿಗೆ ಬೆಳೆ ಕಟಾವು ಮಾಡುತ್ತಿರುವುದನ್ನು ಕಾಣಬಹುದು.

ಹೇಮಾ ಮಾಲಿನಿ ಅವರನ್ನು ಇದ್ದಕ್ಕಿದ್ದಂತೆ ನೋಡಿ ರೈತರೂ ಆಶ್ಚರ್ಯಚಕಿತರಾಗಿದ್ದಾರೆ. ಇದಕ್ಕೂ ಮುನ್ನ 2019ರ ಲೋಕಸಭೆ ಚುನಾವಣೆಯಲ್ಲಿ ಹೇಮಾ ಮಾಲಿನಿ ಇದೇ ರೀತಿ ರೈತರೊಂದಿಗೆ ಕಾಣಿಸಿಕೊಂಡಿದ್ದರು.

ಹೇಮಾ ಮಾಲಿನಿ ಸತತ ಎರಡು ಬಾರಿ ಈ ಕ್ಷೇತ್ರದಿಂದ ಸಂಸದರಾಗಿದ್ದಾರೆ. ಈ ಬಾರಿಯೂ ಬಿಜೆಪಿ ಅವರಿಗೆ ಲೋಕಸಭೆ ಚುನಾವಣೆಗೆ ಟಿಕೆಟ್ ನೀಡಿದೆ . ಹೇಮಾ ಮಾಲಿನಿ ಸತತ ಎರಡು ಬಾರಿ ಈ ಕ್ಷೇತ್ರದಿಂದ



ಸಂಸದರಾಗಿದ್ದಾರೆ. ಈ ಬಾರಿಯೂ ಬಿಜೆಪಿ ಅವರಿಗೆ ಲೋಕಸಭೆ ಚುನಾವಣೆಗೆ ಟಿಕೆಟ್ ನೀಡಿದೆ .

ನಾನು ಕಳೆದ ಹತ್ತು ವರ್ಷಗಳಿಂದ ಈ ಗ್ರಾಮಕ್ಕೆ ಬರುತ್ತಿದ್ದೇನೆ, ರೈತರೊಂದಿಗೆ ಮಾತನಾಡಲು ಅವಕಾಶ ಸಿಕ್ಕಿರುವುದು ಸಂತಸ ತಂದಿದೆ ಎಂದು ಹೇಮಮಾಲಿನಿ ಎಕ್ಸ್? ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಅಲ್ಲಿ ರೈತ ಮಹಿಳೆಯರೊಂದಿಗೆ ಫೋಟೋಗಳನ್ನು ಕೂಡ ತೆಗೆಸಿಕೊಂಡಿದ್ದಾರೆ.



# 'ರಾಮಾಯಣ' ಚಿತ್ರದ ಲೆಕ್ಕಾಚಾರ ಕೇಳಿದರೆ ತಲೆ ತಿರುಗೋದು ಗ್ಯಾರಂಟಿ




ಬಾಲಿವುಡ್ ಸಿನಿಮಾ ರಂಗದಲ್ಲಿ ರಾಮಾಯಣ ಸಿನಿಮಾದ ಬಜೆಟ್, ಸಂಭಾವನೆಯದ್ದೇ ಸುದ್ದಿ. ಮೂರು ಪಾರ್ಟ್ ನಲ್ಲಿ ಈ ರಾಮಾಯಣ ಸಿನಿಮಾ ಮೂಡಿ ಬರಲಿದ್ದು, ಒಟ್ಟು ಬಜೆಟ್ ಎಷ್ಟು, ಯಾರಿಗೆ ಎಷ್ಟು ಸಂಭಾವನೆ ನೀಡಲಾಗಿದೆ, ಅತೀ ಹೆಚ್ಚು ಸಂಭಾವನೆ ಪಡೆದ ನಟ ಯಾರು ಹೀಗೆ ಸಿನಿ ಪಂಡಿತರು ಲೆಕ್ಕಾಚಾರ ಹಾಕಿದ್ದಾರೆ. ಅಧಿಕೃತವಾಗಿ ಚಿತ್ರತಂಡ ಹೇಳಿಕೊಳ್ಳದೇ ಇದ್ದರೂ, ನಟ, ನಟಿಯರು ಭರ್ಜರಿ ಸಂಭಾವನೆಯನ್ನೇ ಪಡೆದಿದ್ದಾರೆ.

ರಾಮನ ಪಾತ್ರದಲ್ಲಿ ಮಿಂಚಲಿರುವ ಬಾಲಿವುಡ್ ನಟ ರಣಬೀರ್ ಕಪೂರ್ ಬರೋಬ್ಬರಿ 75 ಕೋಟಿ ರೂಪಾಯಿ ಸಂಭಾವನೆ ಪಡೆದಿದ್ದಾರೆ ಎನ್ನಲಾಗುತ್ತಿದೆ. ಮೂರು ಪಾರ್ಟ್ ಸೇರಿ ಇವರಿಗೆ 225 ಕೋಟಿ ರೂಪಾಯಿ ಸಂದಾಯವಾಗಲಿದೆಯಂತೆ. ರಾವಣನ ಪಾತ್ರಧಾರಿ ಯಶ್ ಮೂರೂ ಪಾರ್ಟ್ ಸೇರಿ 150 ಕೋಟಿ ರೂಪಾಯಿ ಸಂಭಾವನೆ ಪಡೆಯಲಿದ್ದಾರಂತೆ. ನಟಿ ಸಾಯಿ ಪಲ್ಲವಿ 18 ಕೋಟಿ ರೂಪಾಯಿ ನೀಡಲಾಗುತ್ತಿದೆ ಎನ್ನುವ ಸುದ್ದಿ ಹರಿದಾಡುತ್ತಿದೆ. ಇದಾವುದೂ ಖಚಿತ ಮಾಹಿತಿ ಅಲ್ಲ ಎನ್ನುವುದು ನೆನಪಿನಲ್ಲಿಡಬೇಕಾದ ಸಂಗತಿ.

ಈ ನಡುವೆ ಸಿನಿಮಾಗಾಗಿ ರಣ್‌ಬೀರ್ ಹಳ್ಳಿಯಲ್ಲಿ ಸಿಕ್ಕಾಪಟ್ಟೆ ವರ್ಕೌಟ್ ಮಾಡುತ್ತಿದ್ದಾರೆ. ರಾಮನ ಅವತಾರದಲ್ಲಿ ಬರಲು 'ಅನಿಮಲ್' ಹೀರೋ ಭಾರೀ ತಯಾರಿ ಮಾಡಿಕೊಳ್ತಿದ್ದಾರೆ. 'ದಂಗಲ್' ಸಿನಿಮಾ ನಂತರ ರಾಮಾಯಣ ಚಿತ್ರಕ್ಕಾಗಿ ಡೈರೆಕ್ಟರ್ ಹ್ಯಾಟ್ ತೊಟ್ಟಿದ್ದಾರೆ ನಿತೇಶ್ ತಿವಾರಿ. ಚಿತ್ರತಂಡ ಕೂಡ ಪಾತ್ರಕ್ಕಾಗಿ ಏನೆಲ್ಲಾ ತಯಾರಿ ಮಾಡಲು ತಿಳಿಸಿದ್ದಾರೋ ಅದನ್ನು ಪ್ರಾಮಾಣಿಕವಾಗಿ ರಣ್‌ಬೀರ್ ಕಪೂರ್ ಮಾಡುತ್ತಿದ್ದಾರೆ. 'ಆದಿಪುರುಷ್' ಸಿನಿಮಾದಂತೆ ತಮ್ಮ ಸಿನಿಮಾ ಆಗಬಾರದು ಎಂದು ಎಚ್ಚರಿಕೆಯಿಂದ ರಣ್‌ಬೀರ್ ಹೆಜ್ಜೆ ಇಡುತ್ತಿದ್ದಾರೆ.

ರಾಮನ ಪಾತ್ರದಲ್ಲಿ ಕಾಣಿಸಿಕೊಳ್ಳಬೇಕು ಎಂದರೆ ಫಿಟ್ ಆಗಿರಬೇಕು. ಅಲ್ಲದೇ ಗೆಟಪ್ ಸಹ ಬದಲಾಯಿಸಿಕೊಳ್ಳಬೇಕು. ಅದಕ್ಕಾಗಿ ರಣಬೀರ್ ಕಪೂರ್ ಅವರು ತಮ್ಮ ಟ್ರೇನರ್ ಜೊತೆ ಹಳ್ಳಿಗೆ ಹೋಗಿ ತರಬೇತಿ ಪಡೆದುಕೊಳ್ಳುತ್ತಿದ್ದಾರೆ. ವಿವಿಧ ಬಗೆಯ ವ್ಯಾಯಾಮ ಮಾಡುತ್ತಿರುವ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ಗಮನ ಸೆಳೆಯುತ್ತಿದೆ.

'ಅನಿಮಲ್' ಚಿತ್ರದ ಸಕ್ಸಸ್ ನಂತರ ರಾಮನಾಗಿ ಬರುತ್ತಿರುವ ರಣ್‌ಬೀರ್ ಕಪೂರ್ ಮೇಲೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆಯಿದೆ. ರಾಮನಾಗಿ ಕೂಡ ಆಲಿಯಾ ಪತಿ ಗೆದ್ದು ಬೀಗುತ್ತಾರಾ ಕಾಯಬೇಕಿದೆ.

# ಒಳ ಉಡುಪಿಲ್ಲದೆ ಎದೆ ಮೇಲೆ ಕೈಯಿಟ್ಟು ಹಾಟ್ ಪೋಸ್ ಕೊಟ್ಟ ಸ್ಯಾಮ್



ಟಾಲಿವುಡ್ ನಟಿ ಸಮಂತಾ ಇದೀಗ ಮತ್ತಷ್ಟು ಬೋಲ್ಡ್ ಆಗಿದ್ದಾರೆ. ಬ್ರಾ ಧರಿಸದೆ ಎದೆ ಮೇಲೆ ಕೈಯಿಟ್ಟು ಸಖತ್ ಆಗಿ ಫೋಟೋಶೂಟ್ ಮಾಡಿಸಿದ್ದಾರೆ. ಸಮಂತಾ ಮೈಮಾಟಕ್ಕೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ನಟಿಯ ಹಾಟ್ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಶೇರ್ ಮಾಡಿದ್ದಾರೆ.

ಒಳ ಉಡುಪು ಧರಿಸಿದೇ ಬ್ಲೇಜರ್ ತೊಟ್ಟಿರುವ ಹಾಟ್ ಹಾಟ್ ಫೋಟೋಗಳನ್ನು ಸಮಂತಾ ಶೇರ್ ಮಾಡಿ ಗಂಡ್ ಹೈಕ್ಳ ನಿದ್ದೆ ಕದ್ದಿದ್ದಾರೆ. ಮಡಿವಂತಿಗೆ ಬಿಟ್ಟು ಪೋಸ್ ಕೊಟ್ಟಿದ್ದೀರಾ ಅಂದ್ಮೇಲೆ ಎದೆಯ ಮೇಲೆ ಯಾಕೆ ಕೈಯಿಟ್ಟುಕೊಂಡಿದ್ದೀರಾ ಎಂದು ನೆಟ್ಟಿಗರು ನಟಿಯ ಕಾಲೆಳೆದಿದ್ದಾರೆ.

ಬಾಲಿವುಡ್‌ಗೆ ಸಮಂತಾ ಬಲಗಾಲಿಟ್ಟು ಪಾದಾರ್ಪಣೆ ಮಾಡಿದ ಮೇಲೆ ಖದರ್ ಬದಲಾಗಿದೆ. ಬಾಲಿವುಡ್‌ಗೆ ತಕ್ಕಂತೆಯೇ ನಟಿ ತಮ್ಮ ಸ್ಟೈಲ್ ಬದಲಿಸಿಕೊಳ್ತಿದ್ದಾರೆ. ಗೌರಮ್ಮನಂತಿದ್ದ ಸಮಂತಾ ಬಹಳಷ್ಟು ಬದಲಾಗಿದ್ದಾರೆ. ಮೈ ಚಳಿ ಬಿಟ್ಟು ಕಮ್ಮಿ ಬಟ್ಟೆ ಧರಿಸಿ ಪೋಸ್ ಕೊಡುತ್ತಿದ್ದಾರೆ.

ಅಂದಹಾಗೆ, ವಿವಾದ, ಅನಾರೋಗ್ಯ, ಯಶಸ್ಸು ಎಲ್ಲವೂ ಅನುಭವಿಸಿರುವ ಜೀವ ಸಮಂತಾ. ನಾಗಚೈತನ್ಯ ಜೊತೆಗಿನ ದಾಂಪತ್ಯಕ್ಕೆ ಅಂತ್ಯ ಹಾಡಿದ ಮೇಲೆ ಸಮಂತಾ ಸಾಕಷ್ಟು ಟೀಕೆಗಳಿಗೆ ಗುರಿಯಾಗಿದ್ದರು. ಎಲ್ಲಾ ವಿಚಾರಕ್ಕೂ ಸಮಂತಾ ಕಡೆಯೇ ಬೆಟ್ಟು ಮಾಡಿ ತೋರಿಸುತ್ತಿದ್ದರು. ಸಹವಾಸವೇ ಬೇಡ ಅಂತ ವೃತ್ತಿರಂಗದಲ್ಲಿ ಬ್ಯುಸಿಯಾದರು. 'ಪುಷ್ಪ' ಚಿತ್ರದಲ್ಲಿ ಸೊಂಟ ಬಳುಕಿಸಿದ ಮೇಲೆ ಸಮಂತಾ ಲಕ್ ಬದಲಾಯ್ತು.

ಆದರೆ ಯಶೋದ ಮತ್ತು ಖುಷಿ ಸಿನಿಮಾ ಆದ್ಮೇಲೆ ಬಿಗ್ ಸ್ಕ್ರೀನ್ ಮೇಲೆ ಕಾಣಿಸಿಕೊಂಡಿರಲಿಲ್ಲ. ಎರಡೂ ಹೀನಾಯವಾಗಿ ಸೋತ ಚಿತ್ರಗಳು. ಸೋಲಿನ ಹೊಡೆತಕ್ಕೆ ಅನಾರೋಗ್ಯದ ಆಘಾತ ಎರಡನ್ನೂ ಸಹಿಕೊಳ್ಳೋಕೆ ಸ್ಯಾಮ್‌ಗೆ 8 ತಿಂಗಳು ಹಿಡಿಯಿತು. ಇದೀಗ ಮತ್ತೆ ಕೆಲಸಕ್ಕೆ ಮರಳಿದ್ದಾರೆ. ವರುಣ್ ಧವನ್‌ಗೆ ನಾಯಕಿಯಾಗಿ ಬಾಲಿವುಡ್‌ಗೆ ಪಾದಾರ್ಪಣೆ ಮಾಡಿದ್ದಾರೆ.

## ಬುಮ್ರಾ, ಕಿಶನ್, ಸೂರ್ಯ ಆಟಕ್ಕೆ ಆರ್‌ಸಿಬಿ ಬರ್ನ್

# ಕಳಪೆ ಬೌಲಿಂಗ್, ಫೀಲ್ಡಿಂಗ್



ಕಳಪೆ ಬೌಲಿಂಗ್‌ಗೆ, ಕಳಪೆ ಫೀಲ್ಡಿಂಗ್‌ಗೆ ಮತ್ತೆ ಆರ್‌ಸಿಬಿ ಬೆಲೆ ತೆತ್ತಿದೆ. ಆರಂಭಿಕ ಆಟಗಾರ ಇಶನ್ ಕಿಶನ್, ನಂತರ ಸೂರ್ಯಕುಮಾರ್ ಯಾದವ್ ಅವರ ಸ್ಫೋಟಕ ಅರ್ಧಶತಕದ ಆಟದಿಂದ ಮುಂಬೈ ಇಂಡಿಯನ್ಸ್ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಗೆಲ್ಲಲು 197 ರನ್‌ಗಳ ಗುರಿಯನ್ನು ಪಡೆದ ಮುಂಬೈ 15.3 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 199 ರನ್ ಹೊಡೆಯಿತು. ಈ ಮೂಲಕ ಮೂರು ಸೋಲಿನಿಂದ ಕಂಗೆಟ್ಟಿದ್ದ ಮುಂಬೈ ಎರಡನೇ ಜಯ ಸಾಧಿಸಿತು. 6 ಪಂದ್ಯಗಳಲ್ಲಿ 5 ಪಂದ್ಯಗಳನ್ನು ಆರ್ ಸಿಬಿ ಸೋತಿದ್ದು ಡೆಲ್ಲಿ 2 ಅಂಕ ಗಳಿಸಿ ಕೊನೆಯ ಸ್ಥಾನದಲ್ಲಿದೆ.

ಈಶನ್ ಕಿಶನ್ ಮತ್ತು ರೋಹಿತ್ ಶರ್ಮಾ ಸ್ಫೋಟಕ ಆರಂಭ ನೀಡಿದರು. ಇವರಿಬ್ಬರು ಮೊದಲ ವಿಕೆಟಿಗೆ 101 ರನ್ ಜೊತೆಯಾಟವಾಡಿದರು. ಇಶನ್ ಕಿಶನ್ 69 ರನ್(34 ಎಸೆತ, 7 ಬೌಂಡರಿ, 5 ಸಿಕ್ಸ್), ರೋಹಿತ್ ಶರ್ಮಾ 38 ರನ್(24 ಎಸೆತ, 3 ಬೌಂಡರಿ, 3 ಸಿಕ್ಸರ್) ಹೊಡೆದು ಔಟಾದರು.

ಗಾಯಗೊಂಡು ತಂಡದಿಂದ ಹೊರಗೆ ಇದ್ದ ಸೂರ್ಯಕುಮಾರ್ ಯಾದವ್ ತಮ್ಮ ಎಂದಿನ ಲಯದಲ್ಲಿ ಬ್ಯಾಟ್ ಬೀಸಿದರು. ಪರಿಣಾಮ ಕೇವಲ 19 ಎಸೆತದಲ್ಲಿ 52 ರನ್ (5 ಬೌಂಡರಿ, 4 ಸಿಕ್ಸರ್) ಸಿಡಿಸಿ ವಿಕೆಟ್ ಒಪ್ಪಿಸಿದರು. ಕೊನೆಯಲ್ಲಿ ನಾಯಕ ಹಾರ್ದಿಕ್ ಪಾಂಡ್ಯ ಔಟಾಗದೇ 21 ರನ್(6 ಎಸೆತ, 3 ಬೌಂಡರಿ) ತಿಲಕ್ ವರ್ಮಾ ಔಟಾಗದೇ 16 ರನ್ ಹೊಡೆದರು.

ಟಾಸ್ ಸೋತು ಬ್ಯಾಟಿಂಗ್ ಇಳಿದ ಆರ್‌ಸಿಬಿ ಪರ ಮೂವರು ಆಟಗಾರರು ಮಾತ್ರ ಎರಡಂಕಿ ದಾಟಿದ್ದರು. ನಾಯಕ ಫಾ ಡುಪ್ಲೆಸಿಸ್ 61 ರನ್(40 ಎಸೆತ, 4 ಬೌಂಡರಿ, 3 ಸಿಕ್ಸರ್), ರಜತ್ ಪಟೀದಾರ್ 50 ರನ್ (26 ಎಸೆತ, 3 ಬೌಂಡರಿ, 4 ಸಿಕ್ಸರ್), ಕೊನೆಯಲ್ಲಿ ದಿನೇಶ್ ಕಾರ್ತಿಕ್ ಸ್ಫೋಟಕ 53 ರನ್ (23 ಎಸೆತ, 5 ಬೌಂಡರಿ, 4 ಸಿಕ್ಸರ್) ಆಟದಿಂದ 8 ವಿಕೆಟ್ ನಷ್ಟಕ್ಕೆ 196 ರನ್ ಹೊಡೆಯಿತು.

ಜಸ್‌ಪ್ರೀತ್ ಬುಮ್ರಾ 21 ರನ್ ನೀಡಿ 5 ವಿಕೆಟ್ ಕೀಳುವ ಮೂಲಕ ಆರ್‌ಸಿಬಿ ಬೆನ್ನೆಲುಬನ್ನು ಮುರಿದರು. 4 ಎಸೆತ ಎದುರಿಸಿದ ಮ್ಯಾಕ್ಸ್ ವೆಲ್ ಶೂನ್ಯ ಸುತ್ತಿ ಮತ್ತೆ ಅಭಿಮಾನಿಗಳಿಗೆ ನಿರಾಸೆ ಮೂಡಿಸಿದರು.

# ಆರ್‌ಸಿಬಿ ಸೋಲಿಗೆ ಕಾರಣವಾಯ್ತಾ ಕಳಪೆ ಅಂಪೈರಿಂಗ್!




ಮುಂಬೈನ ವಾಂಖೇಡೆ ಸ್ಟೇಡಿಯಂನಲ್ಲಿ ನಡೆದ ಮುಂಬೈ ಇಂಡಿಯನ್ಸ್ ಹಾಗೂ ಆರ್ ಸಿಬಿ ನಡುವಿನ ಪಂದ್ಯದಲ್ಲಿ ಆರ್ ಸಿಬಿಗೆ ಹೀನಾಯ ಸೋಲಾಗಿದೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 196 ಮೊತ್ತ ಪೇರಿಸಿದರೂ ಗೆಲುವಿಗೆ ಅದು ಸಹಕಾರಿ ಆಗಿಲ್ಲ. ಈ ಮಧ್ಯೆ ಅಂಪೈರಿಂಗ್ ಬಗ್ಗೆ ಟೀಕೆ ವ್ಯಕ್ತವಾಗಿದೆ. ನಿತಿನ್ ಮೆನನ್ ಅವರು ತೆಗೆದುಕೊಂಡ ನಿರ್ಧಾರಗಳು ಪ್ರಶ್ನೆ ಹುಟ್ಟುಹಾಕಿದೆ. ಆ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆ ನಡೆಯುತ್ತಿದೆ.

ಟಾಸ್ ಗೆದ್ದ ಮುಂಬೈ ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಆರ್ ಸಿಬಿಯ ಆರಂಭ ಉತ್ತಮವಾಗಿರಲಿಲ್ಲ. ವಿರಾಟ್ ಕೊಹ್ಲಿ ಅವರು ಬೇಗನೆ ಔಟ್ ಆದರು. ಆ ಬಳಿಕ ರಜತ್ ಪಟಿದಾರ್, ಫಾಪ್ ಡುಪ್ಲೆಸಿಸ್ ಹಾಗೂ ದಿನೇಶ್ ಕಾರ್ತಿಕ್ ಅರ್ಧ ಶತಕ ಸಿಡಿಸಿ ತಂಡಕ್ಕೆ ಆಸರೆ ಆದರು. ಈ ಮಧ್ಯೆ ಅಂಪೈರಿಂಗ್ ವಿಚಾರ ಸಾಕಷ್ಟು ಚರ್ಚೆ ಹುಟ್ಟುಹಾಕಿದೆ. ಅಂಪೈರ್ ಗಳು ತೆಗೆದುಕೊಂಡ ನಿರ್ಧಾರಗಳು ಮುಂಬೈ ಪರವಾಗಿತ್ತು ಎಂದು ಅನೇಕರು ಟೀಕೆ ಮಾಡಿದ್ದಾರೆ.

ಕೊನೆಯ ಓವರ್ ನಲ್ಲಿ ಸೊಂಟದ ಭಾಗಕ್ಕಿಂತ ಎತ್ತರ ಇದ್ದ ಬಾಲ್ ನ ಅಂಪೈರ್ ನೋ ಬಾಲ್ ನೀಡಲಿಲ್ಲ. ಇದನ್ನು ನೋಡಿ ವಿರಾಟ್ ಕೊಹ್ಲಿ ಕೂಡ ಅಸಮಾಧಾನ ಹೊರಹಾಕಿದರು. ಇನ್ನು, ಬೌಂಡರಿ ಹೋಗಿದ್ದನ್ನು ಕೊಡದೆ ಇರುವ ವಿಚಾರವೂ ಚರ್ಚೆ ಹುಟ್ಟುಹಾಕಿದೆ. ಫೀಲ್ಡರ್ ನ ದೇಹದ ಭಾಗ ಬೌಂಡರಿ ಗಡಿಗೆ ತಾಗಿತ್ತು. ಇದೇ ಸಂದರ್ಭದಲ್ಲಿ ಫೀಲ್ಡರ್ ಬೌಲನ್ ಸಂಪರ್ಕದಲ್ಲಿ ಇದ್ದ. ಆದಾಗ್ಯೂ ಇದನ್ನು ಬೌಂಡರಿ ಎಂದು ನೀಡಲಿಲ್ಲ.

ಇನ್ನು ಲೋಮ್ರರ್ ತಾವು ಫೇಸ್ ಮಾಡಿದ ಮೊದಲ ಬಾಲ್ ನಲ್ಲಿ ಎಲ್ ಬಿಡಬ್ಲ್ಯುಗೆ ಬಲಿಯಾದರು. ಈ ಬಾಲ್ ಕೂಡ ಹೊರಗೆ ಹೋಗುತ್ತಾ ಇತ್ತು. ಆದಾಗ್ಯೂ ಅಂಪೈರ್ ಔಟ್ ನೀಡಿದ್ದರು. ನಂತರ ರಿವ್ಯೂ ತೆಗೆದುಕೊಂಡಾಗ ಸ್ಟಂಪ್ ಗೆ ಸ್ವಲ್ಪ ತಾಗುತ್ತಿದೆ ಎನ್ನುವ ಕಾರಣಕ್ಕೆ ಅಂಪೈರ್ ಕಾಲ್ ನೀಡಲಾಯಿತು.

ಇನ್ನು, ಫಾಪ್ ಡುಪ್ಲೆಸಿಸ್ ಹೊಡೆದ ಶಾಟ್ ಬ್ಯಾಟ್‌ಗೆ ತಾಗದೆ ಕೀಪರ್ ಕೈ ಸೇರಿತು. ಅಂಪೈರ್ ಔಟ್ ನೀಡಿಲ್ಲ. ಹೀಗಾಗಿ, ಇಶಾನ್ ಕಿಶಾನ್ ಮೊದಲಾದವರು ಜೋರಾಗಿ ಅಂಪೈರ್ ಬಳಿ ಔಟ್ ನೀಡುವಂತೆ ಕೋರಿದರು. ಆಗ ಮುಂಬೈ ಇಂಡಿಯನ್ಸ್ ಅವರ ಎಲ್ಲಾ ರಿವ್ಯೂಗಳು ಮುಗಿದಿದ್ದವು. ಹೀಗಾಗಿ, ಅವರು ರಿವ್ಯೂ ಕೇಳುವಂಯೆ ಇರಲಿಲ್ಲ. ಈ ವೇಳೆ ಸ್ವತಃ ಅಂಪೈರ್ ಅವರು ಥರ್ಡ್ ಅಂಪೈರ್‌ಗೆ ರಿವ್ಯೂ ಕೇಳಿದರು. ಇದನ್ನು ಕೆಲವರು ಪ್ರಶ್ನೆ ಮಾಡಿದ್ದಾರೆ.

# ಸ್ವಾಮೀಜಿ ಕಾರ್ಯಕ್ರಮಕ್ಕೆ ಹೆಚ್‌ಡಿಕೆ ಹೋಗಿ ಬರೋದ್ರೊಳಗೆ ಆಪರೇಷನ್ ಮುಗಿದು ಹೋಗಿತ್ತು



**ಬೆಂಗಳೂರು:** ಪಾಪ ಕುಮಾರಸ್ವಾಮಿಯವರು ಸ್ವಾಮೀಜಿಯವರ ಕಾರ್ಯಕ್ರಮಕ್ಕೆ ಹೋಗಿದ್ದರು. ಅವರು ವಾಪಸ್ ಬರುವಷ್ಟರಲ್ಲಿ ಆಪರೇಷನ್ ಮುಗಿದು ಹೋಗಿತ್ತು ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ವ್ಯಂಗ್ಯವಾಡಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ವಾಮೀಜಿಯವರಿಗೂ ಒಕ್ಕಲಿಗ ಒಬ್ಬ ಸಿಎಂ ಆಗಿದ್ದಾನೆ ಎಂದು ಅಭಿಮಾನ ಇತ್ತು. ನಮಗೂ ಅಭಿಮಾನ, ನಿಮಗೂ ಅಭಿಮಾನ ಅಲ್ವಾ ಅದಕ್ಕೆ ಯಾರು ಸರ್ಕಾರ ತೆಗೆದರೋ ಅವರನ್ನೇ ಜೊತೆಗೆ ಹಾಕಿಕೊಂಡು ಓಡಾಡಿದ್ರೆ ಹೇಗೆ ಎಂದು ಹೆಚ್‌ಡಿಕೆಗೆ ಟಾಂಗ್ ಕೊಟ್ಟಿದ್ದಾರೆ.

ಚೆಲುವರಾಯಸ್ವಾಮಿ ಹಾಗೂ ಕೃಷ್ಣ ಭೈರೇಗೌಡರು ಸಹ ಸ್ವಾಮೀಜಿ ಬಳಿ ಹೋಗಿ ಆಶೀರ್ವಾದ ಪಡೆದುಕೊಂಡರು. ಹಿರಿಯರ ಆಶೀರ್ವಾದ ಬೇಕಲ್ಲ, ಅದರಲ್ಲಿ ತಪ್ಪೇನಿಲ್ಲ. ಕುಮಾರಸ್ವಾಮಿ ಆಶೀರ್ವಾದ ಕೇಳಿದ್ರಲ್ಲಿ ತಪ್ಪಿಲ್ಲ. ಮಂಜುನಾಥ್ ಆಶೀರ್ವಾದ ಕೇಳಿದರೂ ತಪ್ಪು ಎಂದು ನಾನು ಹೇಳಲ್ಲ. ಬೆನ್ನಿಗೆ ಚೂರಿ ಹಾಕಿದ್ರಲ್ಲ ಅವರನ್ನು ಕರೆದುಕೊಂಡು ಹೋದ್ರೆ, ಯಾರು ಸರ್ಕಾರ ತೆಗೆದ್ರಲ್ಲ ಅವರನ್ನೆಲ್ಲ ಕರೆದುಕೊಂಡು ಹೋದ್ರೆ, ಸಮಾಜಕ್ಕೆ ಏನೆಂದು ಉತ್ತರ ಕೊಡ್ತಾರೆ ಎಂದು ಕುಟುಕಿದ್ದಾರೆ.

ಎಸ್.ಟಿ ಸೋಮಶೇಖರ್ ಸ್ಥಳೀಯ ವಿಚಾರಗಳ ಮೇಲೆ ನಿಂತಿದ್ದಾರೆ. ಅವರನ್ನು ನಾನು ಇದುವರೆಗೆ ಕಾಂಗ್ರೆಸ್‌ಗೆ ಸೇರಿಸಿಕೊಂಡಿಲ್ಲ. ಯಾರು ಸರ್ಕಾರ ಬೀಳಿಸುವಾಗ ಕಾಂಗ್ರೆಸ್‌ನಿಂದ ಶಾಸಕರನ್ನು ಕಳಿಸಿದ್ದು ಎಂದು ಅಶ್ವತ್ಥ ನಾರಾಯಣ ಅವರೇ ಹೇಳಲಿ. ಇಲ್ಲಿ ನಾನು ಸ್ವಾಮೀಜಿಗಳನ್ನು ಎಳೆದು ತರುತ್ತಿಲ್ಲ. ಆದಿಚುಂಚನಗಿರಿ ಶ್ರೀಗಳ ಬಗ್ಗೆ ನನಗೆ ಗೌರವವಿದೆ. ನಾನು ಸ್ವಾಮೀಜಿಗಳನ್ನು ರಾಜಕೀಯಕ್ಕೆ ಎಳೆದು ತರುತ್ತಿಲ್ಲ. ಅವರು ಉತ್ತರ ಕೊಡಲಿ ಎಂದು ಕೇಳುತ್ತಿಲ್ಲ. ಒಕ್ಕಲಿಗರ ಸರ್ಕಾರ ಎಂದು ಅಭಿಮಾನ ಇದ್ದೇ ಇರುತ್ತದೆ. ಅವರವರ ಜಾತಿ ಅವರವರ ಧರ್ಮ ಯಾರನ್ನೂ ಬಿಡುವುದಿಲ್ಲ ಎಂದಿದ್ದಾರೆ.

ಹುಟ್ಟುವಾಗ ಜಾತಿ ಇರದೇ ಇರಬಹುದು, ಸಾಯುವಾಗ ಜಾತಿ ಬಂದೇ ಬರುತ್ತದೆ. ನಾವ್ಯಾರೂ ಜಾತಿ ಎಂದು ಅರ್ಜಿ ಹಾಕಿಕೊಂಡು ಹುಟ್ಟುವುದಿಲ್ಲ. ನಮ್ಮ ಅಪ್ಪ-ಅಮ್ಮ, ಧರ್ಮ ಜಾತಿ ಬಂದೇ ಬರುತ್ತದೆ. ನಾಮಕರಣ ಮಾಡುವುದೂ ಒಂದು ಧರ್ಮವೇ, ಕಿವಿ ಚುಚ್ಚುವುದೂ ಒಂದು ಧರ್ಮವೇ, ಮೂಗು ಚುಚ್ಚುವುದೂ ಒಂದು ಧರ್ಮವೇ. ಒಕ್ಕಲಿಗರು ಯಾರೂ ದಡ್ಡರಲ್ಲ, ಯಾವ ಜಾತಿಯವರೂ ದಡ್ಡರಲ್ಲ. ವೀರಶೈವ ಇರಬಹುದು, ಎಸ್.ಸಿ, ಎಸ್.ಟಿ ಇರಬಹುದು ಯಾವುದೇ ಜಾತಿಯವರೂ ದಡ್ಡರಲ್ಲ, ಅವರವರ ಲಾಭ ಏನೂ ಎಂದು ನೋಡ್ತಾರೆ. ದೇಶಕ್ಕೆ ರಾಜ್ಯಕ್ಕೆ ನನಗೆ ಏನು ಒಳ್ಳೆಯದಾಗುತ್ತದೆ ಎಂದು ನೋಡ್ತಾರೆ. ಭಾವನೆ ನೋಡುವುದಿಲ್ಲ, ಬದುಕು ಕಟ್ಟಿಕೊಳ್ಳುವವರು ಕಾಂಗ್ರೆಸ್ ಬೆಂಬಲಿಸುತ್ತಾರೆ ಎಂದು ಅವರು ಹೇಳಿದ್ದಾರೆ.

ರಾಹುಲ್ ಗಾಂಧಿ ಹೆಸರಲ್ಲಿ ಕಾಂಗ್ರೆಸ್‌ನವರು ಮತ ಕೇಳ್ತಿಲ್ಲ ಎಂಬ ಬಿಎಸ್‌ವೈ ಹೇಳಿಕೆ ವಿಚಾರಕ್ಕೆ, ಮೋದಿನೇ ಅವರ ಹೆಸರಲ್ಲಿ ಮತ ಕೇಳಿಲ್ಲ, ಶಿವಮೊಗ್ಗಕ್ಕೆ ಬಂದಾಗ ರಾಘವೇಂದ್ರ ಯಡಿಯೂರಪ್ಪ ಹೆಸರಲ್ಲಿ ಮತ ಕೇಳಿದ್ದು, ಅಲ್ಲಿನ ಎಂಪಿ ಮೋದಿ ಹೆಸರಲ್ಲಿ ಮತ ಕೇಳ್ತಿದ್ದಾರೆ. ಮೋದಿ ಅಲೆ ಹೊರಟೋಗಿದೆ. ಗಾಳಿ ಎಲ್ಲಾದ್ರು ಇದೆಯಾ ನೋಡಿ. ಜೆಡಿಎಸ್ ಪಕ್ಷವನ್ನು ಬಿಜೆಪಿಯವರು ಮುಗಿಸ್ತಿದ್ದಾರೆ. ಜೆಡಿಎಸ್ ಈಗ ಎಲ್ಲಿದೆ ಜೆಡಿಎಸ್‌ಗೆ ಮುಕ್ತಿ ಕೊಟ್ಟಿದ್ದಾರೆ. ಪಕ್ಷ ವಿಸರ್ಜನೆ ಮಾಡುವ ಹಂತದಲ್ಲಿದ್ದಾರೆ. ಆ ಪಕ್ಷ ಇರಬೇಕು ಎಂಬುದ ನನ್ನ ಅಭಿಪ್ರಾಯ ಎಂದಿದ್ದಾರೆ.

# ಮೋದಿ ಫೋಟೋ ಹಾಕ್ಬೇಡ ಅನ್ನೋಕೆ ಇವರ್ಯಾರು



**ಶಿವಮೊಗ್ಗ:** ಪ್ರಧಾನಿ ನರೇಂದ್ರ ಮೋದಿಯವರ ಫೋಟೋ ಬಳಸಬೇಡ ಎಂದು ಹೇಳಲು ಇವರು ಯಾರು ಎಂದು ಪ್ರಶ್ನಿಸುವ ಮೂಲಕ ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ ಅವರು ಬಿಜೆಪಿ ನಾಯಕರ ವಿರುದ್ಧ ಕೆಂಡಾಮಂಡಲರಾಗಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನಗೆ ಮೋದಿ ಫೋಟೋ ಬಳಸಬೇಡಿ ಅಂತಿದ್ದಾರೆ. ಅವರು ಮೋದಿ ಫೋಟೋ ಬಿಟ್ಟು ಚುನಾವಣೆ ನಡೆಸಲಿ. ಯಡಿಯೂರಪ್ಪ, ರಾಘವೇಂದ್ರ, ವಿಜಯೇಂದ್ರ ಫೋಟೋ ಇಟ್ಟುಕೊಂಡು ಚುನಾವಣೆ ನಡೆಸಲಿ. ಯಡಿಯೂರಪ್ಪ, ವಿಜಯೇಂದ್ರ ಫೋಟೋ ಹಾಕಿಕೊಂಡು ಚುನಾವಣೆ ನಡೆಸಲಿ ನೋಡೋಣ. ನನಗೆ ನರೇಂದ್ರ ಮೋದಿ ಫೋಟೋ ಹಾಕಬೇಡಿ ಅನ್ನಲು ಅವರು ಯಾರು . ಕೋರ್ಟ್, ಚುನಾವಣಾ ಆಯೋಗ ಏನು ತೀರ್ಮಾನ ಕೊಡುತ್ತದೋ ನೋಡೋಣ ಎಂದು ಹೇಳಿದ್ದಾರೆ.

ಪಕ್ಷದಿಂದ ನನ್ನ ಉಚ್ಚಾಟಿಸಿಲ್ಲ: ನಾನು ಚುನಾವಣೆಗೆ ಸ್ಪರ್ಧೆ ಮಾಡ್ತೀನಿ ಅಂತಾ ಹೇಳಿದ್ದೇನೆ. ಆದರೂ ಇದುವರೆಗೆ ನನ್ನನ್ನು ಪಕ್ಷದಿಂದ ಉಚ್ಚಾಟನೆ ಮಾಡಿಲ್ಲ. ನನ್ನನ್ನು ಉಚ್ಚಾಟನೆ ಮಾಡದಿರಲು ಏನು ಕಾರಣ ಗೊತ್ತಿಲ್ಲ. ನಾನು ಉಚ್ಚಾಟನೆ ಮಾಡಲಿ ಅಂತಾ ಕಾಯ್ತಿದ್ದೇನೆ ಎಂದು ಹೇಳಿದರು. ಇದೇ ವೇಳೆ, ಈಶ್ವರಪ್ಪ ಮುಸ್ಲಿಮರಿಗೆ ಸುಖಾ ಸುಮ್ಮನೆ ತೊಂದರೆ ಮಾಡಲ್ಲ. ರಾಷ್ಟ್ರಭಕ್ತ ಮುಸ್ಲಿಮರು ನನಗೆ ಮತ ಹಾಕ್ತಾರೆ ಎಂಬ ವಿಶ್ವಾಸ ಇದೆ ಎಂದರು.

ಕೆವಿಯಟ್ ಸಲ್ಲಿಕೆ: ಮೋದಿ ಭಾವಚಿತ್ರ ಬಳಸಿಕೊಳ್ಳಲು ಮುನ್ನೆಚ್ಚರಿಕಾ ಕ್ರಮವಾಗಿ ಈಶ್ವರಪ್ಪ ಅವರು ನ್ಯಾಯಾಲಯದಲ್ಲಿ ಕೆವಿಯಟ್ ಸಲ್ಲಿಸಿದ್ದಾರೆ. ಭಾವಚಿತ್ರವನ್ನು ಬಳಸಿಕೊಳ್ಳುವುದನ್ನು ಕಾನೂನಾತ್ಮಕವಾಗಿ ತಡೆಯುವ ಯಾರಾದರೂ ಪ್ರಯತ್ನಿಸಿದರೆ ಅದಕ್ಕೆ ಹಿನ್ನಡೆಯಾಗಲಿದೆ ಎಂಬುದು ಅವರ ಲೆಕ್ಕಾಚಾರವಾಗಿದೆ. ಭಾರತದ ಪ್ರಧಾನಿಯ ಭಾವಚಿತ್ರವನ್ನು ಉಪಯೋಗಿಸುತ್ತಿದ್ದು, ಸಂವಿಧಾನದಲ್ಲಿ ಎಲ್ಲಾ ಭಾರತೀಯರು ಪ್ರಧಾನಿಯ ಭಾವಚಿತ್ರವನ್ನು ಬಳಸಿಕೊಳ್ಳಲು ಅವಕಾಶವಿದೆ.

ಈಶ್ವರಪ್ಪ ಅವರು, ಸಲ್ಲಿಸಿರುವ ಕೆವಿಯಟ್ ಅವಧಿ ಮೂರು ತಿಂಗಳಾಗಿರುತ್ತದೆ. ಅಷ್ಟರಲ್ಲಿ ಚುನಾವಣೆ ಮುಗಿದಿರುತ್ತದೆ. ಯಾರು ಕೂಡ ಇದರ ವಿರುದ್ಧ ತಡೆ ತರಲು ಬರುವುದಿಲ್ಲ ಎನ್ನುವುದು ಅವರ ಯೋಚನೆ. ಇದರಿಂದ ಮೋದಿ ಭಾವಚಿತ್ರ ಬಳಸಿಕೊಳ್ಳಲು ಈಶ್ವರಪ್ಪನವರಿಗೆ ಯಾವುದೇ ಸಮಸ್ಯೆ ಇರುವುದಿಲ್ಲ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com